ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallmmanudi@gmail.com E-paper: www.mallmmanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy

VOLUME-ಸಂಪುಟ:12 | ISSUE- ಸಂಚಿಕೆ: 349 | PAGE- ಪುಟ 8 | ಮಂಗಳವಾರ 21.01.2025 ಬೀದರ | RNI NO:KARKAN/2011/48371 | RS.ಬೆಲೆ 2/-

# ತೊಗರಿ ಖರೀದಿಗೆ ಸರ್ಕಾರದಿಂದ ರೂ 140 ಕೋಟಿ

## ಕ್ವಿಂಟಾಲ್‌ಗೆ ಹೆಚ್ಚುವರಿ ರೂ. 450 ಘೋಷಣೆ; 400ಕ್ಕೂ ಅಧಿಕ ಖರೀದಿ ಕೇಂದ್ರ: ಸಚಿವ ಶಿವಾನಂದ ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ:ಜ.20:ಬೆಂಬಲ ಬೆಲೆಯಲ್ಲಿ ತೊಗರಿ ಖರೀದಿಗೆ ರಾಜ್ಯ ಸರ್ಕಾರ ಕ್ವಿಂಟಾಲ್‌ಗೆ ಹೆಚ್ಚುವರಿ ರೂ 450 ನೀಡಲು ನಿರ್ಧರಿಸಿದ್ದು, ಈ ಉದ್ದೇಶಕ್ಕೆ ರೂ.140 ಕೋಟಿ ಒದಗಿಸಲಾಗುವುದು ಎಂದು ಕೃಷಿ ಉತ್ಪನ್ನ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಘೋಷಿಸಿದರು.

ಪ್ರವಾಸಿ ಮಂದಿರದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಮುಖಂಡರೊಂದಿಗೆ ಅವರ ಬೇಡಿಕೆಗಳ ಬಗ್ಗೆ ಚರ್ಚಿಸಿದ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಮಾತನಾಡಿದ ಸಚಿವರು, ಒಟ್ಟು ಪ್ರತಿ ಕ್ರಿಂಟಾಲ್‌ಗೆ ಎಂಟು ಸಾವಿರ ರೂ. ಬೆಂಬಲ ಬೆಲೆ ನೀಡಲಾಗುವುದು ಎಂದು ತಿಳಿಸಿದರು.

ಕೇಂದ್ರ ಸರ್ಕಾರದ ನಫೆಡ್ ಖರೀದಿ ಏಜನ್ಸಿಯಾಗಿದ್ದು, ದಾಖಲೆಗಳನ್ನು ಸಕಾಲಕ್ಕೆ ಒದಗಿಸದ ಕಾರಣ ಖರೀದಿ ಪ್ರಕ್ರಿಯೆ ವಿಳಂಬವಾಗಿದೆ. ರಾಜ್ಯಾದ್ಯಂತ 400ಕ್ಕೂ ಅಧಿಕ ಖರೀದಿ ಕೇಂದ್ರಗಳನ್ನು ಆರಂಭಿಸಲಾಗಿದ್ದು, ತೊಗರಿ ಬೆಳೆಗಾರರು ಆತಂಕ ಪಡುವ ಅಗತ್ಯವಿಲ್ಲ ಎಂದು ಹೇಳಿದರು.

ಇದೇ ಮೊದಲ ಬಾರಿಗೆ ರೂ 8000 ಧಾರಣಿಯಲ್ಲಿ ತೊಗರಿ ಖರೀದಿ ಮಾಡಲಾಗುತ್ತಿದೆ.



ಇದುವರೆಗೆ ರೂ 5800 ಧಾರಣಿಯಲ್ಲಿ ಖರೀದಿ ಮಾಡಲಾಗುತ್ತಿತ್ತು. ಬೀದರ್ ಜಿಲ್ಲೆಯಿಂದ ಚಿತ್ರದುರ್ಗ ಜಿಲ್ಲೆಯವರೆಗೆ ತೊಗರಿ ಬೆಳೆಯಲಾಗುತ್ತಿದ್ದು, ರೈತರು ಬೆಂಬಲ ಬೆಲೆ ಹೆಚ್ಚಳ ಮಾಡಬೇಕು ಎಂಬ ಬೇಡಿಕೆ ಇಟ್ಟಿದ್ದರು. ರೈತರ ಬೇಡಿಕೆಗೆ ರಾಜ್ಯ ಸರ್ಕಾರ ಸ್ಪಂದಿಸಿ ಕ್ವಿಂಟಾಲ್‌ಗೆ ರೂ 450 ಹೆಚ್ಚುವರಿ ನೀಡುವ ನಿರ್ಧಾರ ಕೈಗೊಂಡಿದೆ ಎಂದು ವಿವರಿಸಿದರು.

ಆಂಧ್ರದ ಜೋಳಕ್ಕೆ ತಡೆ: ಆಂಧ್ರಪ್ರದೇಶದ ಹೈಬ್ರಿಡ್ ಜೋಳವನ್ನು ರಾಜ್ಯದ ಬೆಂಬಲ ಬೆಲೆ ಖರೀದಿ ಕೇಂದ್ರಗಳಲ್ಲಿ ಮಾರಾಟ ಮಾಡಿರುವುದು ಗಮನಕ್ಕೆ ಬಂದಿದ್ದು, ಆಂಧ್ರದ ಜೋಳಕ್ಕೆ ಕಡಿವಾಣ ಹಾಕಲಾಗುವುದು ಎಂದು ಸಚಿವರು ಹೇಳಿದರು.

ಹೈಬ್ರಿಡ್ ಜೋಳಕ್ಕೆ ರೂ 3370 ಹಾಗೂ ಮಾಲದಂಡಿ ಜೋಳಕ್ಕೆ ರೂ 3400 ಬೆಂಬಲ ಬೆಲೆ ಘೋಷಣೆ ಮಾಡಲಾಗಿದ್ದು, ಒಟ್ಟು ಐದು ಲಕ್ಷ ಕ್ವಿಂಟಾಲ್ ಖರೀದಿ ಮಾಡಲಾಗುವುದು. ಇದುವರೆಗೆ ಕೆಲವೇ ಕೆಲವು ಜಿಲ್ಲೆಗಳ ರೈತರು ಮಾತ್ರ ಖರೀದಿ ಕೇಂದ್ರಗಳಲ್ಲಿ ಮಾರಾಟ ಮಾಡುತ್ತಿದ್ದರು. ಈ ಬಾರಿ ಜೋಳ ಬೆಳೆಯುವ ಎಲ್ಲ ಜಿಲ್ಲೆಗಳಿಗೂ ಖರೀದಿ ಪ್ರಮಾಣವನ್ನು ಹಂಚಿಕೆ ಮಾಡಲಾಗುವುದು ಎಂದು ವಿವರಿಸಿದರು.

ಕಳಪೆ ಬಿತ್ತನೆ ಬೀಜ ಮತ್ತು ಕೀಟನಾಶಕ ಮಾರಾಟದ

(2ನೇ ಪುಟ ನೋಡಿ)

### ಗರ್ಭಿಣಿಯರ ಹೆರಿಗೆ ಪೂರ್ವ 3 ದಿನಗಳ ಮೊದಲು ವೈದ್ಯರ ನಿಗಾವಣೆಯಡಿ

## ಸರಳ ಹೆರಿಗೆಗೆ ಆದ್ಯತೆ: ಡಾ.ಯಲ್ಲಾ ರಮೇಶ್ ಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.20:ಗರ್ಭಿಣಿಯರ ಹೆರಿಗೆಗೆ ಪೂರ್ವ 3 ದಿನಗಳ ಮೊದಲು ಜಿಲ್ಲೆಯ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರ ನಿಗಾವಣೆ ಅಡಿ ಸರಳ ಹೆರಿಗೆಗೆ ಆದ್ಯತೆ ನೀಡಲಾಗಿದ್ದು, ಇದು ವಿನೂತನ ಅಭಿಯಾನಯಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಜಿಲ್ಲಾ ಆಸ್ಪತ್ರೆಯಲ್ಲಿ ಗಂಡಾಂತರ ಗರ್ಭಿಣಿಯರ ದಾಖಲಾತಿಗಾಗಿ 5 ಹಾಸಿಗೆಗಳನ್ನು ಕಾಯ್ದಿರಿಸಿ ದಾಖಲಾದ ಗರ್ಭಿಣಿಯರಿಗೆ ಆರೋಗ್ಯ ವಿಚಾರಿಸಿ ಅವರು ಮಾತನಾಡಿದರು. ಗರ್ಭಿಣಿಯರಿಗೆ ತನ್ನ ಕುಟುಂಬಕ್ಕೆ ಹೊಸ ಜೀವ ಸೆಲೆ ನೀಡುವ ಹೆರಿಗೆಗೆ ಯಾವುದೇ ಅಪಾಯಗಳು ಇದ್ದರೆ ತಕ್ಷಣವೇ ಗುರ್ತಿಸಿ ನಿರಂತರ ಕಾಳಜಿ ಮೂಲಕ ಎಲ್ಲಾ ಅಗತ್ಯ ಪರೀಕ್ಷೆ ಕೈಗೊಂಡು ಆರೈಕೆ ಮಾಡಿ, ಸರಳ ಹೆರಿಗೆಗೆ ಆದ್ಯತೆ ನೀಡಿ ಜೊತೆಗೆ ಉಚಿತ ಪೌಷ್ಟಿಕ ಆಹಾರ ಒದಗಿಸಲಾಗುತ್ತಿದೆ ಎಂದು ಅವರು ತಿಳಿಸಿದರು.

ಗಂಡಾಂತರ ಗರ್ಭಿಣಿಯರ ಹೆರಿಗೆಯು ಖಾಸಗಿ ಆಸ್ಪತ್ರೆಗಳಲ್ಲಿ ಹೆಚ್ಚು ಹಣ ಪಾವತಿಸಿ ಕುಟುಂಬಗಳು ಆರ್ಥಿಕವಾಗಿ ತೊಂದರೆಗೀಡಾಗುವ ಪ್ರಕರಣಗಳನ್ನು ತೊಡೆದು ಹಾಕಲು ಜಿಲ್ಲಾಡಳಿತದ ಬೆಂಬಲದಡಿ ಈ ಸೌಲಭ್ಯ ಜಿಲ್ಲೆಯ ಸಾರ್ವಜನಿಕರಿಗೆ ಕಡುಬಡವರಿಗೆ ಆಶಾದೀಪವಾಗಿದೆ ಎಂದರು.

ಚೊಚ್ಚಲು ಗರ್ಭಿಣಿ, ಎತ್ತರ ಕಡಿಮೆ, ಅಧಿಕ ರಕ್ತದೊತ್ತಡ, ರಕ್ತದಲ್ಲಿ ಕಬ್ಬಿಣಾಂಶ ಕೊರತೆ, ಅವಳಿ ಜವಳಿ ಗರ್ಭಣಿ, ವಿವಾಹವಾಗಿ ಐದಕ್ಕಿಂತ ಹೆಚ್ಚು ವರ್ಷಗಳ ನಂತರ ಗರ್ಭಿಣಿಯಾಗಿರುವುದು, ಮೊದಲ ಹೆರಿಗೆ ಸಿಸೇರಿಯನ್, ಮುಂತಾದ ಕಾರಣಗಳಿದ್ದರೆ ಆಯಾ ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕ ಸಾರ್ವಜನಿಕ ಆಸ್ಪತ್ರೆ ಹಾಗೂ ಜಿಲ್ಲಾ ಆಸ್ಪತ್ರೆಯಲ್ಲಿ ದಾಖಲಿಸಿ

(2ನೇ ಪುಟ ನೋಡಿ)

## ಕಾರಿಗೆ ಲಾರಿ ಡಿಕ್ಕಿ ಸ್ಥಳದಲ್ಲೇ ಮೂವರ ದುರ್ಮರಣ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜ.20:ಚಿಂಚೋಳಿ ತಾಲೂಕಿನ ಮಗದಂಪುರ ಬಳಿ ಲಾರಿ ಡಿಕ್ಕಿ ಹೊಡೆದ ಪರಿಣಾಮ ಕಾರಿನಲ್ಲಿ ತೆರಳುತ್ತಿದ್ದ ಮೂವರು ಸ್ಥಳದಲ್ಲೇ ಸಾವನ್ನಪ್ಪಿರುವ ದಾರುಣ ಘಟನೆ ನಡೆದಿದೆ.

ಸಂಜೀವ್(40), ಅಭಿಷೇಕ್(26) ಮತ್ತು ಅವಿನಾಶ್(24) ಎಂದು ಮೃತರನ್ನು ಗುರುತಿಸಲಾಗಿದೆ. ಅಪಘಾತದಲ್ಲಿ ಮೂವರು ಗಂಭೀರವಾಗಿ ಗಾಯಗೊಂಡಿದ್ದು ಗಾಯಾಳಗಳನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ.

ಕಾರಿನಲ್ಲಿದ್ದವರು ಬೀದರ್ ನಿಂದ ತೆಲಂಗಾಣದ ಧಾರೂರಿನತ್ತ ತೆರಳುತ್ತಿದ್ದರು. ಈ ವೇಳೆ ತೆಲಂಗಾಣದಿಂದ ಚಿಂಚೋಳಿ ಕಡೆ ಬರುತ್ತಿದ್ದ ಲಾರಿ ಡಿಕ್ಕಿ ಹೊಡೆದು ಅಪಘಾತ ಸಂಭವಿಸಿದೆ. ಕುಂಚಾವರಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ತೊಗರಿ ಬಣವೆಗೆ ಆಕಸ್ಮಿಕ ಬೆಂಕಿ : ಲಕ್ಷಾಂತರ ರೂ.ನಷ್ಟ

ಬೀದರ. ಜ. 20 : ರಾಶಿ ಮಾಡಿ ಕೂಡಿಟ್ಟದ್ದ ತೊಗರಿ ಬಣವೆಗೆ ಆಕಸ್ಮಿಕವಾಗಿ ಬೆಂಕಿ ತಗೋಳಿ ಲಕ್ಷಾಂತರ ರೂಪಾಯಿ ಮೌಲ್ಯದ ತೊಗರಿ ಬೆಳೆ ಹೊತ್ತಿ ಉರಿದಿರುವ ಘಟನೆ ಬೀದರ್ ಜಿಲ್ಲೆಯ ಬಾಲಕಿ ತಾಲೂಕಿನ ಕೇಸರ ಜವಳಗ ಗ್ರಾಮದಲ್ಲಿ ಈ ಒಂದು ಅಗ್ನಿ ಅವಘಡ ಸಂಭವಿಸಿದೆ.

ಹೌದು ಕೆಸರ ಜವಳಗ

(2ನೇ ಪುಟ ನೋಡಿ)

## ಸಮಾಜದ ಏಳಿಗೆಗಾಗಿ ವೇಮನರ ತತ್ವಾದರ್ಶಗಳು ಎಲ್ಲರಿಗೂ ಮಾದರಿ : ಹಿಟ್ನಾಳ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಜ.20:ಮಾನವತಾವಾದಿ ಮೌಲ್ಯಗಳ ಮೂಲಕ ತನ್ನನ್ನು ತಾನು ಪರಿವರ್ತನೆ ಮಾಡಿ ಸಮಾಜದ ಏಳಿಗೆಗಾಗಿ ಶ್ರಮಿಸಿದ ವೇಮನರ ತತ್ವಾದರ್ಶಗಳು ನಮ್ಮೆಲ್ಲರಿಗೂ ಮಾದರಿಯಾಗಿವೆ ಎಂದು ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಹೇಳಿದರು.

ಅವರು ಭಾನುವಾರ ನಗರದ ಕಿನ್ನಾಳ ರಸ್ತೆಯ ಹೇಮರಡ್ಡಿ ಮಲ್ಲಮ್ಮ ದೇವಸ್ಥಾನದಲ್ಲಿ ಕೊಪ್ಪಳ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ ಮಹಾಯೋಗಿ ವೇಮನ ಜಯಂತಿ ಆಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಮಹಾಯೋಗಿ ವೇಮನರು 15 ಮತ್ತು 16ನೇ ಶತಮಾನದಲ್ಲಿ ಸಮಾಜದಲ್ಲಿನ ಅಂಕು-ಡೊಂಕುಗಳನ್ನು ತಿದ್ದಿ ಮಾನವತಾವಾದಿ ಮೌಲ್ಯಗಳ ಮೂಲಕ ತನ್ನನ್ನು ತಾನು ಪರಿವರ್ತನೆ ಮಾಡಿ ಸಮಾಜದ ಏಳಿಗೆಗಾಗಿ ಶ್ರಮಿಸುತ್ತಿದ್ದಾರೆ. ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ ಅವರ ತತ್ವಗಳು ಮತ್ತು ಚರಿತ್ರೆ ಪಾಲನೆ ಮಾಡಿಕೊಂಡು ಅಂದಿನ ಕಾಲದ ಸ್ಥಿತಿಗತಿಗಳಿಂದ ವೇಮನರು ಮಹಾಯೋಗಿಗಳಾದರು. ಮಾನವ ಕುಲದ ಏಳಿಗಾಗಿ ಶ್ರಮಿಸಿದವರು ಮಹಾಯೋಗಿ ವೇಮನವರು. ಇಂತಹ ಮಹನೀಯರ ತತ್ವ ಆದರ್ಶಗಳನ್ನು ತಿಳಿದುಕೊಳ್ಳುವುದಷ್ಟೆ ಅಲ್ಲದೇ, ಅವುಗಳನ್ನು ಪಾಲನೆ ಮಾಡುವುದು ಸಹ ಎಲ್ಲರ ಜವಾಬ್ದಾರಿಯಾಗಿದೆ ಎಂದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀನಿವಾಸ ಗುಪ್ತಾ ಅವರು ಮಾತನಾಡಿ ಮಹಾಯೋಗಿ ವೇಮನವರ ತತ್ವ ಸಿದ್ಧಾಂತಗಳನ್ನು

(2ನೇ ಪುಟ ನೋಡಿ)



ಮೇತ್ರಿ ನಿವಾಸದಲ್ಲಿ ಜರುಗಿದ ಸದಸ್ಯರುಗಳಿಗೆ ಸನ್ಮಾನ ಕಾರ್ಯಕ್ರಮ

# ಪಕ್ಷ ಸಂಘಟನೆಗೆ ಮೊದಲ ಅದ್ಯತೆ ನೀಡಿ:ಮೇತ್ರಿ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಜ.20– ತಾಲೂಕಿನ ಹುಡಗಿ ಗ್ರಾಮದ ಶ್ರೀ ಕರಿಬಸವೇಶ್ವರ ಹಾಲು ಉತ್ಪಾದಕರ ಸಹಕಾರ ಸಂಘದ ಚುನಾವಣೆಯಲ್ಲಿ ಬಿಜೆಪಿ ಬೆಂಬಲಿತ 5 ಜನ ಅಭ್ಯರ್ಥಿ ಅವಿರೋಧವಾಗಿ ಆಯ್ಕೆಯಾದ ನಿಮಿತ್ಯ ಬಿಜೆಪಿ ಒಬಿಸಿ ಮೋರ್ಚಾದ ಜಿಲ್ಲಾ ಉಪಾಧ್ಯಕ್ಷ ದಯಾನಂದ ಮೇತ್ರಿ ಅವರ ಗೃಹ ಕಚೇರಿಯಲ್ಲಿ ಸೋಮವಾರ ನೂತನವಾಗಿ ಅಯ್ಕೆಯಾದ ಸದಸ್ಯರನ್ನು ಶಾಲು ಹೊದಿಸಿ ಸನ್ಮಾನಿಸಿದರು. ನಂತರ ಬಿಜೆಪಿ ಒಬಿಸಿ ಮೋರ್ಚಾದ ಜಿಲ್ಲಾ ಉಪಾಧ್ಯಕ್ಷ ದಯಾನಂದ ಮೇತ್ರಿರವರು ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭದಲ್ಲಿ ಕಾಶನಾಥ ಶಿವಶೆಟ್ಟಿ ಮಾತನಾಡಿ, ಹಾಲು ಉತ್ಪಾದಕರಿಗೆ ಸಹಕಾರ ಸಂಘದಿಂದ ಬರುವ ಎಲ್ಲಾ ಸವಲತ್ತು ಮತ್ತು ಸಾಲ ಸೌಲಭ್ಯಗಳನ್ನು ನೇರವಾಗಿ ಹಾಲು ಉತ್ಪಾದಕರಿಗೆ ತಲುಪಿಸುವ ಕಾರ್ಯ ಮಾಡುವುದಾಗಿ ಭರವಸೆ ನೀಡಿದರು. ಸಹಕಾರಿ ಕ್ಷೇತ್ರ ವಿಶಾಲವಾಗಿದ್ದು, ಇತ್ತೀಚಿನ ವರ್ಷದಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘ ಗ್ರಾಮೀಣ ಜನತೆಗೆ ಆರ್ಥಿಕ ಶಕ್ತಿ ದೊರಕಿಸಿಕೊಡುವಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘ ಪ್ರಮುಖ ಪಾತ್ರ ವಹಿಸುತ್ತಿದೆ. ಪರಸ್ಪರ ಸಹಕಾರ ನೀಡುವ ಮೂಲ ಉದ್ದೇಶಕ್ಕೆ ಅನುಗುಣವಾಗಿ ಕಾರ್ಯನಿರ್ವಹಿಸುತ್ತಿರುವ ಸಹಕಾರಿ ಸಂಘಗಳು ರೈತರಿಗೆ ಬೆಳೆಸಾಲ ನೀಡುವುದು ಮಾತ್ರವಲ್ಲ. ವಿವಿಧ ರೀತಿಯ ಆರ್ಥಿಕ ಚಟುವಟಿಕೆಯಲ್ಲಿ ಸಹ ಸಹಕಾರ ನೀಡುತ್ತಿವೆ. ಅವರು ಸಹಕಾರಿ ಕ್ಷೇತ್ರ ವಿಶಾಲವಾಗಿದ್ದು, ಹಾಲು ಉತ್ಪಾದಕರ ಸಹಕಾರ ಸಂಘ ಗ್ರಾಮೀಣ ಭಾಗದಲ್ಲಿ ಅಗಾಧ ಆರ್ಥಿಕ ಚಟುವಟಿಕೆ ಮೂಲಕ ಕೃಷಿಕರಿಗೆ ಗ್ರಾಮೀಣ ಜನತೆಗೆ ಆರ್ಥಿಕ ಶಕ್ತಿಯನ್ನು ಕಲ್ಪಿಸಿಕೊಟ್ಟಿದೆ ಎಂದು ತಿಳಿಸಿದರು. ಜಿಲ್ಲೆಯಲ್ಲಿ ಸಹಕಾರ ಸಂಘಗಳು ಉತ್ತಮ ಕಾರ್ಯನಿರ್ವಹಿಸುವ ಮೂಲಕ ಲಕ್ಷಾಂತರ ಗ್ರಾಮೀಣ ಜನರ ಅಭಿವೃದ್ಧಿಗೆ ಕಾರಣವಾಗಿವೆ. ಸಹಕಾರ ಸಂಘದ ನಿರ್ದೇಶಕರು, ಸಿಬ್ಬಂದಿಗಳು ಜನ ಸಾಮಾನ್ಯರ ಹಿತಕ್ಕಾಗಿ ಉತ್ತಮ ಕೆಲಸದಲ್ಲಿ ತೊಡಗಿಸಿಕೊಳ್ಳಬೇಕು ಎಂದು ತಿಳಿಸಿದರು. ಬಿಜೆಪಿ ಒಬಿಸಿ ಮೋರ್ಚಾದ ಜಿಲ್ಲಾ ಉಪಾಧ್ಯಕ್ಷ ದಯಾನಂದ ಮೇತ್ರಿ ಮಾತನಾಡಿ, ಹಾಲು ಉದ್ಪಾದಕರ ಸಂಘಕ್ಕೆ ನೂತನವಾಗಿ ಆಯ್ಕೆಯಾದ ಸದಸ್ಯರನ್ನು ಸನ್ಮಾನಿಸಿ ಮಾತನಾಡಿದ ಅವರು, ಪಕ್ಷದ ಸಂಘಟನೆಯಲ್ಲಿ ಕಾರ್ಯಕರ್ತರು ಮೊದಲ ಅದ್ಯತೆ ನೀಡಿದಾಗ ಮಾತ್ರ ಪಕ್ಷವನ್ನು ಗುರುತಿಸಿ ಸ್ಥಾನಮಾನ ನೀಡಲು ಸಾದ್ಯವಾಗುತ್ತದೆ ಎಂದರು. ಮುಂಬರುವ ತಾಲೂಕ ಪಂಚಾಯತ್, ಜಿಲ್ಲಾ ಪಂಚಾಯತ ಚುನಾವಣೆಗೆ ಬಿಜೆಪಿ ಪಕ್ಷದ ಕಾರ್ಯಕರ್ತರು ಸಂಘಟನೆಗೆ ಶ್ರಮಿಸಬೇಕು, ಶಾಸಕ ಡಾ. ಸಿದ್ದು ಪಾಟೀಲ್, ಜಿಲ್ಲಾ ಅಧ್ಯಕ್ಷ ಸೋಮನಾಥ ಪಾಟೀಲ್ ಅವರ ನೇತೃತ್ವದಲ್ಲಿ ಮುಂದಿನ ಚುನಾವಣೆಯಲ್ಲಿ ಪಕ್ಷ ಜಯಬೇರಿ ಹೊಡೆಯುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದರು. ಶಿವಕುಮಾರ ಕೆ.ಉಳಗಡ್ಡಿ ಮಾತನಾಡಿ, ಶ್ರೀ ಕರಿಬಸವೇಶ್ವರ ಹಾಲು ಉತ್ಪಾದಕರ ಸಂಘಕ್ಕೆ ನಡೆಯಬೇಕಿದ್ದ ಚುನಾವಣೆಯ ಹಿನ್ನಲೆಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾತ ಪಾಟೀಲ ಹಾಗೂ ಕಂಟೇಪ್ಪಾ ದಾನಾ ಅವರ ಸಮ್ಮುಖದಲ್ಲಿ ಅವಿರೋಧವಾಗಿ ಆಯ್ಕೆಯಾಗಿದ್ದೇವೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಚನ್ನಪ್ಪಾಘನಶೆಟ್ಟಿ, ನಿರ್ಮಾಲಾದೇವಿ, ವಿ., ಒಳದೊಡ್ಡಿ, ಶಿವಲೀಲಾ ಜಿ. ಪರ್ತಾಪೂರ ಪ್ರಮುಖರಾದ ತುಕರಾಮ್ ಸೋಲಾಪೂರ, ನಾಗನಾಥ ಭೂಯಿ, ಬಿಜೆಪಿ 127 ಬೂತ್ ಅಧ್ಯಕ್ಷ ಯುವರಾಜ್ ಭೂಯಿ, ಪ್ರಭಾಕರ್ ಬಿರಾದಾರ, ಶ್ರೀದೇವಿ ಡಿ. ಮೇತ್ರಿ ಹುಡಗಿ, ಸಾಯಿವೀರ ಡಿ.ಮೇತ್ರಿ ಸೇರಿದಂತೆ ಇನ್ನಿತರರು ಇದ್ದರು.

# ಮಹಾಯೋಗಿ ವೇಮನ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಇಲ್ಲಿಯ ಪುರಸಭೆ ಕಾರ್ಯಾಲಯದಲ್ಲಿ ರವಿವಾರ "ಮಹಾಯೋಗಿವೇಮನ"ರವರ ಭಾವಚಿತ್ರಕ್ಕೆ ಮುಖ್ಯಾಧಿಕಾರಿ ಹುಸಾಮುದ್ದಿನ್ ಬಾಬಾ ಅವರು ಹೂ ಮಾಲಾರ್ಪಣೆ ಮಾಡುವುದರ ಮೂಲಕ ಪೂಜೆ ಸಲ್ಲಿಸಿದ್ದರು. ಪೂಜೆ ಕಾರ್ಯಕ್ರಮದಲ್ಲಿ ಪುರಸಭೆ ಸದಸ್ಯರಾದ ದಿಲೀಪಕುಮಾರ ಬಗ್ದಲಕರ್, ರಹೇಮಾನ ಪಾಶ, ಪ್ರಮುಖರಾದ ಅಶೋಕ ಸ್ವಾಮಿ, ಭಾಸ್ಕರ ಸಿಬ್ಬಂದಿಗಳಾದ ಚಿದಾನಂದ ಪತ್ರಿ ವೈಶಾಲಿ, ಸಚಿನ, ಮಂಜುಳಾ, ಅಶ್ವಿನಿ, ರವಿ ಭಯ್ಯಾ, ರಾಜು ತೇಲಂಗ್, ಧನರಾಜ, ಬಶೀರ, ಇಲಾಹಿ, ಭೀಮಶಾ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಭಾಲ್ಕಿ : ಜೋಳದಪಕಾ ಪಿಕೆಪಿಎಸ್‌ಗೆ ಸುನಿಲಕುಮಾರ ಗಂಗೂ ಅಧ್ಯಕ್ಷರಾಗಿ ಆಯ್ಕೆಯಾದರು. ಈ ಸಂದರ್ಭದಲ್ಲಿ ಮರುರ ಗ್ರಾಮದ ಕಾಂಗ್ರೆಸ್ ಪಕ್ಷದ ಯುವ ಮುಖಂಡರಾದ ಶಿವಕುಮಾರ್ ಕಮಠಣೆ ಅವರು ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಶಿವಕುಮಾರ್ ಸಾಗರ್, ಲೋಕೇಶ್ ದಾಡಗೆ, ಅವಿನಾಶ್ ಕಮಠಾಣೆ, ಮಲಂಗ್ ಮರೂರ್ ಸೇರಿದಂತೆ ಇತರರು ಹಾಜರಿದ್ದರು.
(ಮಲ್ಲಮ್ಮ ನುಡಿ ಚಿತ್ರ)

## ಕನ್ನಡಾಭಿಮಾನಿಗಳಿಗೆ ಕ.ಸಾ.ಪ ತಾಲೂಕ ಘಟಕದ ವತಿಯಿಂದ ವಿಶೇಷ ಗೌರವ ಸನ್ಮಾನ

ಮಲ್ಲಮ್ಮ ನುಡಿ ವಾರ್ತೆ

ಜೇವರ್ಗಿ: ಕನ್ನಡ ಸಾಹಿತ್ಯ ಪರಿಷತ್ ಘಟಕ ವತಿಯಿಂದ ಜ. 25 ರಂದು 7 ನೇ ಕನ್ನಡ ಸಾಹಿತ್ಯ ಸಮೇಳನದಲ್ಲಿ ಸ.ಹಿ ಪ್ರಾ ಶಾಲೆ ಮುಖ್ಯ ಗುರುಗಳಾದ ಮಹೇಶ ಬಿರಾದಾರ ಗಂಗನಳ್ಳಿ ಸ.ಕಿ ಪ್ರಾ ಶಾಲೆ ಯ ಪ್ರಭಾರಿ ಮುಖ್ಯ ಶಿಕ್ಷಕ ರುದ್ರಯ್ಯ ಬಿ ಎಚ್ ಜ್ಯೋಗಿ ಜಿಲ್ಲಾ ಮಟ್ಟದ ಅತ್ಯೂತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕಾರು ಸ.ಹಿ. ಪ್ರಾ.ಶಾಲೆ ಬಳ್ಳೂಂಡಗಿ ರವರೆಲ್ಲರ ಕನ್ನಡ ಅಭಿಮಾನವನ್ನು ಗುರ್ತಿಸಿ ಕ.ಸಾ. ಪ ತಾಲೂಕು ಘಟಕದ ವತಿಯಿಂದ ಗೌರವ ಸನ್ಮಾನಿತರಾಗಿ ಆಯ್ಕೆಯಾಗಿದ್ದಕ್ಕಾಗಿ ಕ. ಸಾ. ಪ ಸಂಘಟನ ಕಾರ್ಯದರ್ಶಿಗಳಾದ ಮಹಾಂತೇಶ ಪಾಟೀಲ್ ಯಾತ್ನೂರ ಹರ್ಷ ವ್ಯಕ್ತ ಪಡಿಸಿದರು.

# ಸತತ ಮೂರನೇ ಬಾರಿಗೆ ಪಿಕೆಪಿಎಸ್ ಅಧ್ಯಕ್ಷರಾಗಿ ಬಸವರಾಜ ಶೇರಿಕಾರ ಉಪಾಧ್ಯಕ್ಷರಾಗಿ ತೀರ್ಥಯ್ಯ ಅವಿರೋಧವಾಗಿ ಆಯ್ಕೆ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ತಾಲೂಕಿನ ವಳಖಿಂಡಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಬಸವರಾಜ ಮಚೇಂದ್ರ ಶೇರಿಕಾರ ಸತತ ಮೂರನೇ ಬಾರಿಗೆ ಅವಿರೋಧವಾಗಿ ಆಯ್ಕೆಯಾದರು. ಉಪಾಧ್ಯಕ್ಷರಾಗಿ ತೀರ್ಥಯ್ಯ ಬಸತೀರ್ಥಯ್ಯ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಜ್ಯೋತಿ ರುಗಾನ್ ತಿಳಿಸಿದ್ದಾರೆ. ನಂತರ ಪಿಕೆಪಿಎಸ್ ಮುಖ್ಯ ಕಾರ್ಯನಿರ್ವಾಹಕ ಜಗನಾಥ ಸಗರ್ ನೂತನ ಅಧ್ಯಕ್ಷ ಉಪಾಧ್ಯಕ್ಷ ಮತ್ತು ಸರ್ವ ಸದಸ್ಯರನ್ನು ಸನ್ಮಾನಿಸಿದರು. ಬಳಿಕ ನೂತನ ಅಧ್ಯಕ್ಷ ಬಸವರಾಜ ಶೇರಿಕಾರ್ ಮಾಧ್ಯಮದವರೊಂದಿಗೆ ಮಾತನಾಡಿ, ಸತತ ನನ್ನನ್ನು ಮೂರನೇ ಬಾರಿಗೆ ಅಧ್ಯಕ್ಷನಾಗಿ ಆಯ್ಕೆ ಮಾಡಿದ ರೈತರಿಗೆ ಮತ್ತು ನಿರ್ದೇಶಕರಿಗೆ ಧನ್ಯವಾದಗಳು ಸಲ್ಲಿಸುತ್ತೇನೆ ಎಂದರು. ನನ್ನ ಅಧಿಕಾರ ಅವಧಿಯಲ್ಲಿ ರೈತರಿಗೆ ಒಳ್ಳೆಯ ಸೇವೆ ಸಲ್ಲಿಸಿದ್ದೇನೆ ಮುಂದೇನು ಕೂಡ ಇನ್ನೂ ಹೆಚ್ಚು ಅಭಿವೃದ್ಧಿ ಕಾರ್ಯಗಳು ಮಾಡುತ್ತೇನೆ ಯಾವುದೇ ರೀತಿಯ ರೈತರಿಗೆ ಸಮಸ್ಯೆ ಆಗದಂತೆ ನೋಡಿಕೊಳ್ಳುತ್ತೇನೆ, ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ರೈತರಿಗೆ ಒದಗಿಸಿ ಕೊಡಲು ಪ್ರಮಾಣಿಕ ಪ್ರಯತ್ನ ಮಾಡುತ್ತೇನೆ. ಸಹಕಾರ ಮತ್ತು ಸಹಬಾಳ್ವೆ ತತ್ವದಲ್ಲಿ ಸೇವೆಯನ್ನು ಮಾಡುತ್ತಿದ್ದೇನೆ ಅಮೂಲ್ಯವಾಗಿರುವಂತಹ ಪ್ರೇರಣೆ, ಸಹಕಾರ ಸದಾ ಇರಲಿ, ಸಂಘವನ್ನು ಇನ್ನು ಉತ್ತರೋತ್ತರವಾಗಿ ಬೆಳೆಸೋಣ ಎಂದು ಹೇಳಿದರು. ಉಪಾಧ್ಯಕ್ಷ ಮಾತನಾಡಿ, ಎಲ್ಲರ ಒಪ್ಪಿಗೆಯಿಂದ ನಾನು ಮೊದಲನೇ ಬಾರಿಗೆ ಚುನಾವಣೆ ಕಣಕ್ಕೆ ಇಳಿದಿದ್ದೇ, ಆದರೆ ಚುನಾವಣೆಯಲ್ಲಿ ನಾನು ಸೋಲುವ ಹಂತದಲ್ಲಿ ಬಂದಿದ್ದೆ, ಕೊನೆಗೂ ರೈತರ ಆಶೀರ್ವದಿಂದ ದೇವರು ನನಗೆ ಕೈ ಬಿಡಲಿಲ್ಲ, ಎಲ್ಲರ ಆಶೀರ್ವಾದದಿಂದ ಉಪಾಧ್ಯಕ್ಷನಾಗಿ ಆಯ್ಕೆಯಾಗಿದ್ದೇನೆ ಎಂದು ಹೇಳಿದರು. ನಿರ್ದೇಶಕ ಬಾಬುರಾವ್ ರಸೂರೆ ಮಾತನಾಡಿ, ರೈತರ ಮತ್ತು ಮತದಾರರ ಮನೆ ಗೆದ್ದು ಮೂರನೇ ಬಾರಿಗೆ ಬಸವರಾಜ ಶೇಖರ್ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ ಅವರಿಗೆ ನಾನು ಧನ್ಯವಾದಗಳನ್ನು ಸಲ್ಲಿಸುತ್ತೇನೆ ಹಿಂದೆಯೂ ಅಧ್ಯಕ್ಷರಾಗಿ ಉತ್ತಮ ಆಡಳಿತ ನೀಡಿದ್ದಾರೆ ಮುಂದೇನು ಕೂಡ ಒಳ್ಳೆಯ ಆಡಳಿತ ನೀಡುತ್ತಾರೆ ಎಂದು ಅಭಿಪ್ರಾಯಪಟ್ಟರು. ಈ ಸಂದರ್ಭದಲ್ಲಿ ನೂತನ ನಿರ್ದೇಶಕರಾದ ರಾಮಚಂದ್ರ, ಗುಣವಂತ, ಜಗನಾಥ, ಭೋಟಿಬೀ ದಸ್ತಗೀರ್, ಇಂದುಬಾಯಿ ನಾಗಶೆಟ್ಟಿ, ಈಶ್ವರ, ರಾಜಪ್ಪ, ಚಾಂದಪಾಶ, ಶಾಂತಕುಮಾರ್, ಈರಪ್ಪ, ಕ್ಷೇತ್ರ ಸಹಾಯಕ ಬೀರಪ್ಪ ನಿಂಗದಳ್ಳಿ, ಸಿಬ್ಬಂದಿಗಳಾದ ಬಾಬುರಾವ ಮಾಲಿ ಪಾಟೀಲ್, ಮಲ್ಲಿಕಾರ್ಜುನ ಜಗನಾಥ, ಕವಿತಾ ಡಾಕುಳಗಿ, ಪೂಜಾ ವೀರಶೆಟ್ಟಿ, ಮಹೇಬೂಬ್ ಪಾಷಾ ಸೈಯದ್ ಸಾಬ್, ಮಲ್ಲಿಕಾರ್ಜುನ ಚನ್ನಬಸಪ್ಪ, ಪ್ರಮುಖರಾದ ಬಾಬುರಾವ್ ರಾಜೇಶ್ವರ್, ರಾಚಯ್ಯ ಸ್ವಾಮಿ ಮಠಪತಿ, ಶಿವರಾಜ್ ಶೇರಿಕಾರ್, ವಿಜಯಕುಮಾರ್ ಶೇರಿಕಾರ್, ಅಪ್ಪರಾವ ಬ್ಯಾಲಳ್ಳಿಕರ್, ಸಿದ್ದ–ರೆಡ್ಡಿ, ಮಚೇಂದ್ರ, ಅರ್ಜುನ ಶಿವನಾಯಕ, ಶ್ರೀನಿವಾಸ್ ರೆಡ್ಡಿ, ಎಂ.ಜಿ.ಪ್ರಶಾಂತ, ಪಾಟೀಲ್, ಉಮಾಕಾಂತ ಪೊಲೀಸ್ ಪಾಟೀಲ್, ರಾಜಕುಮಾರ ನಡುವಿನದೊಡ್ಡಿ, ರಾಮಚಂದ್ರ ಡಾಕುಳಗಿ, ಸೋಮಶೇಖರ್ ಮಾಲಿ ಪಾಟೀಲ್, ಹಮೀದ್, ಸದರೋದ್ದಿನ, ಜೈಪಾಲ್ ರೆಡ್ಡಿ, ಇರ್ಫಾನ್, ಖಾಜಾಮಿಯಾ, ವೆಂಕಟ ಮುಸ್ತರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಮಾಜಿ ಸಚಿವರಾದ ರಾಜಶೇಖರ್ ಪಾಟೀಲ್, ವೀರಣ್ಣ ಪಾಟೀಲ್ ವಿಧಾನ ಪರಿಷತ್ ಸದಸ್ಯ ರಾದ ಡಾ. ಚಂದ್ರಶೇಖರ್ ಪಾಟೀಲ್, ಭೀಮರಾವ್ ಪಾಟೀಲ್, ಅಭಿಷೇಕ್ ಪಾಟೀಲ್, ರೇವಣಸಿದ್ದಪ್ಪ ಪಾಟೀಲ್ ಮತ್ತು ವಳಖಿಂಡಿ, ಹಣಕುಣಿ ಗ್ರಾಮದ ರೈತರು ಹಾಗೂ ಮತದಾರರ ಆಶೀರ್ವಾದದಿಂದ ಸತತ ಮೂರನೇ ಬಾರಿಗೆ ಅಧ್ಯಕ್ಷನಾಗಿ ಅವಿರೋಧ ಆಯ್ಕೆಯಾಗಿದಕ್ಕೆ ತಮ್ಮೆಲ್ಲರ ಸಹಕಾರ ಮತ್ತು ನಿಮ್ಮ ಆಶೀರ್ವಾದಕ್ಕೆ ಚಿರ ಋಣಿಯಾಗಿರುತ್ತೇನೆ.

**– ನೂತನ ಅಧ್ಯಕ್ಷ ಬಸವರಾಜ ಶೇರಿಕಾರ**

# ಪ್ರಕೃತಿಯ ಸಂರಕ್ಷಣೆ ಎಲ್ಲರ ಹೊಣೆ : ವಿನಯ ಮಾಳಗೆ.



ಮಲ್ಲಮ್ಮ ನುಡಿ ವಾರ್ತೆ.

ಬಸವಕಲ್ಯಾಣ: – ಪ್ರಕೃತಿಯ ಸಂರಕ್ಷಣೆ ಎಲ್ಲರ ಹೊಣೆಗಾರಿಕೆಯಾಗಿದೆ. ನೆಲ, ನೀರು, ಕಾಡನ್ನು ರಕ್ಷಿಸಿದರೆ ಮನುಷ್ಯ ಸೇರಿ ಇಡೀ ಜೀವ ಸಂಕುಲ ಸುರಕ್ಷಿತವಾಗಿರುತ್ತದೆ. ಎಂದು ಕರ್ನಾಟಕ ರಾಜ್ಯ ವನ್ಯಜೀವಿ ಮಂಡಳಿ ಸದಸ್ಯ ವಿನಯ ಮಾಳಗೆ ಹೇಳಿದರು.

ನಗರದ ಶ್ರೀ ಬಸವೇಶ್ವರ ಪದವಿ ಕಾಲೇಜಿನಲ್ಲಿ ಐಕ್ಯೂಎಸಿ ವತಿಯಿಂದ ಹಮ್ಮಿಕೊಂಡಿದ್ದ ' ಮಣ್ಣು –ನೀರು : ಸಾಂಸ್ಕೃತಿಕ ಸಂಕಥನ' ಕುರಿತ ಉಪನ್ಯಾಸ ಸಮಾರಂಭ ಉದ್ಘಾಟಿಸಿ ಮಾತನಾಡಿ ಬರಿದಾಗುತ್ತಿರುವ ಕಾಡಿನಿಂದಾಗಿ ಜೀವಜಾಲ ವಿನಾಶದ ಅಂಚಿಗೆ ತಲುಪಿದೆ ಎಂದು ಕಳವಳ ವ್ಯಕ್ತಪಡಿಸಿದರು.

ನಮ್ಮೆಲ್ಲರ ನಿರ್ಲಕ್ಷ್ಯದಿಂದ ನಿಸರ್ಗ–ಕ್ಕೆ ಹಾನಿಯಾಗುತ್ತಿದೆ. ಕಾಡು ಸಂರಕ್ಷಿಸುವ ಕಡೆಗೆ ಕೇಂದ್ರಿಕರಿಸದಿದ್ದರೆ ಜೀವವೈವಿಧ್ಯ ನಾಶವಾಗುತ್ತದೆ. ಅಂತರ್ಜಲದ ಮಟ್ಟ ಹೆಚ್ಚಿಸುವ, ಮಣ್ಣಿನ ಫಲವತ್ತತೆ ಕಾಪಾಡುವ, ಜೀವವೈವಿಧ್ಯ ಉಳಿಸಲು ಕಾಡು ಬೆಳೆಸುವ ಹೊಣೆ ನಮ್ಮೆಲ್ಲರ ಮೇಲಿದೆ ಎಂದರು. ಚಾರಿತ್ರಿಕ ಹಾಗೂ ಸಾಂಸ್ಕೃತಿಕ ಮಹತ್ವ ಪಡೆದ ಕಲ್ಯಾಣ ಬೀದರಗಿಂತ ಹಳೆಯ ಪಟ್ಟಣ. ಇಲ್ಲಿ ಹಳೆಯ ಕಾಲದ 440ಕ್ಕೂ ಹೆಚ್ಚು ಬಾವಿಗಳಿವೆ. ನೀರನ್ನು ಹಿಡಿದಿಡುವ ವಿಶಿಷ್ಟ ಗುಣ ಕಲ್ಯಾಣದ ಮಣ್ಣಿಗಿದೆ. ಕಲ್ಯಾಣಿ ಎಂದರೆ ನೀರಿನ ಸೆಲೆಯಿರುವ ಸ್ಥಳ ಎಂದರ್ಥ ಎಂದರು.

ಮನೆಯಲ್ಲಿ ಒಂದು ಮರವಿದ್ದರೂ ಹಲವು ಹಕ್ಕಿಗಳು ಬಂದು ಹೋಗುತ್ತವೆ. ನಿಸರ್ಗದ ಎಲ್ಲ ಚಲನೆಯನ್ನು ದಾಖಲಿಸಬೇಕು. ಜಾಗತಿಕ ತಾಪಮಾನದ ಬಗೆಗೆ ಮಾತನಾಡುವ ನಾವು, ನಮ್ಮ ಊರನ್ನು ತಂಪಾಗಿಡಲು ಏನು ಮಾಡಬೇಕೆಂಬುದು ಯೋಚಿಸಬೇಕು ಎಂದರು.ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಆಡಳಿತಾಧಿಕಾರಿ ಡಾ. ಮಲ್ಲಿಕಾರ್ಜುನ ಲಕಶೆಟ್ಟಿ ಮಾತನಾಡಿ, ಪರಿಸರ ಸಂರಕ್ಷಣೆಗೆ ಸರ್ಕಾರಗಳು ಹಲವು ಯೋಜನೆಗಳು ಹಾಕಿಕೊಂಡಿವೆ. ನಿಸರ್ಗದ ರಕ್ಷಣೆ ಪ್ರತಿಯೊಬ್ಬರ ಮೊದಲ ಕರ್ತವ್ಯವಾಗಿದೆ. ನಿಸರ್ಗ ಉಳಿದರೆ ಎಲ್ಲಾ ಜೀವಿಗಳ ಉಳಿವಿದೆ. ಇಲ್ಲದಿದ್ದರೆ ಎಲ್ಲಾ ಜೀವಿಗಳ ಅಳಿವು ನಿಶ್ಚಿತ ಎಂದರು.

ಪ್ರಾಚಾರ್ಯರಾದ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ ಆಧುನಿಕತೆ, ಜಾಗತೀಕರಣ, ನಗರೀಕರಣಗಳು ಬೆಳೆದಂತೆ ಮನುಷ್ಯ ನಿಸರ್ಗ ಸಹಜ ಅನುಭವ, ಪ್ರಕೃತಿಯ ವಿಸ್ಮಯ, ಕೌತುಕಗಳಿಂದ ದೂರವಾಗುತ್ತಿದ್ದಾನೆ. ಅನ್ನಕ್ಕೆ, ಆರಾಧನೆಗೆ ಕೇಂದ್ರವಾಗಿದ್ದ ನೆಲ ಇಂದು ಸರಕಾಗಿ ಪರಿವರ್ತಿತವಾಗಿದೆ. ವ್ಯಾವಹಾರಿಕ ಮನೋಭಾವ ಬೆಳೆದಂತೆಲ್ಲ ನೆಲ,ನೀರು, ಕಾಡನ್ನು ವಾಣಿಜ್ಯ ಮತ್ತು ವ್ಯಾಪಾರದ ಚೌಕಟ್ಟಿಗೆ ತಂದು ನಿಲ್ಲಿಸಿದ್ದು ಈ ಕಾಲದ ಬಹುದೊಡ್ಡ ದುರಂತ ಎಂದರು.

ಕೆ.ಪಿ. ಪೂರ್ಣಚಂದ್ರ ತೇಜಸ್ವಿ, ಕೃಪಾಕರ ಸೇನಾನಿ, ಮಾಧವ ಗಾಡ್ಗೀಳ್, ನಾಗೇಶ್ ಹೆಗಡೆ ಮೊದಲಾದವರು ಪ್ರತಿಪಾದಿಸಿದ ಪರಿಸರವಾದಿ ಸಾಹಿತ್ಯದ ಅಧ್ಯಯನ ಅಗತ್ಯ. ಔಪಚಾರಿಕ ಶಿಕ್ಷಣದಿಂದ ಆಚೆಗೆ ಹೋಗಿ ಚಾರಣ, ಕಾಡಿನ ಕುರಿತು ಅಧ್ಯಯನ ಮಾಡುವುದು ಹಿಂದೆಂದಿಗಿಂತಲೂ ಇಂದು ಹೆಚ್ಚು ಅಗತ್ಯವಿದೆ ಎಂದರು.

ಈ ಸಂದರ್ಭದಲ್ಲಿ ಬೀದರ ಟೀಮ್ ಯುವದ ಸದಸ್ಯರಾದ ಹರ್ಷವರ್ಧನ ರಾಠೋಡ, ಆಧವನ್, ಗೋಕುಲ್, ಚಿನ್ಮಯ್, ಐಕ್ಯೂಎಸಿ ಸಂಯೋಜ–ಕ ಪವನ ಪಾಟೀಲ, ಗುರುದೇವಿ ಕಿಚಡೆ, ನೀಲಮ್ಮ ಮೇತ್ರೆ, ಅಶೋಕರೆಡ್ಡಿ, ಎಂ.ಡಿ.ಜಬಿ ಬಸವರಾಜ ಗುಂಗೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಡಾ. ಶಾಂತಲಾ ಪಾಟೀಲ ಸ್ವಾಗತಿಸಿದರು. ಗಂಗಾಧರ ಸಾಲಿಮಠ ನಿರೂಪಿಸಿದರು. ನಾಗವೇಣಿ ಬಿರಾದಾರ ವಂದಿಸಿದರು.

## ಸರಕಾರಿ ಶಾಲೆ ವಿದ್ಯಾರ್ಥಿಗಳಿಂದ ಹಾರಕೂಡ ಶ್ರೀಗಳಿಗೆ ತುಲಾಭಾರ.
## ಶ್ರದ್ಧೆಯ ಕಲಿಕೆ ಸಾಧನೆಗೆ ಪೂರಕ – ಹಾರಕೂಡ ಶ್ರೀ



ಮಲ್ಲಮ್ಮ ನುಡಿ ವಾರ್ತೆ.

ಬಸವಕಲ್ಯಾಣ:–ಇಡೀ ಜಗತ್ತೇ ಒಂದು ಪಾಠಶಾಲೆ, ಜೀವನವೇ ಶಿಕ್ಷಕ, ಅನುಭವಗಳೇ ಅಧ್ಯಾಯಗಳು, ಇಲ್ಲಿ ಶ್ರದ್ಧೆಯಿಂದ ಕಲಿತರೆ ಮಾತ್ರ ಶ್ರೇಯಸ್ಸಿನ ಬದುಕು ನಮ್ಮದಾಗಿಸಿಕೊಳ್ಳಬಹುದಾಗಿದೆ ಎಂದು ಹಾರಕೂಡದ ಪೂಜ್ಯಶ್ರೀ ಡಾ.ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಸರಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆ 2014 –15 ನೇ ಸಾಲಿನ ವಿದ್ಯಾರ್ಥಿ ಬಳಗದಿಂದ ಆಯೋಜಿಸಿದ ಗುರುವಂದನೆ ಹಾಗೂ 755ನೇ ತುಲಾಭಾರ ಸಮಾರಂಭದ ಪಾವನ ಸಾನಿಧ್ಯ ವಹಿಸಿ ಮಾತನಾಡಿ ವಿದ್ಯೆ ಸಂಪಾದನೆ ಒಂದು ನಿರಂತರ ಪ್ರಕ್ರಿಯೆಯಾಗಿದ್ದು ಇಡೀ ಜೀವನ ಪರ್ಯಂತ ಕಲಿತರೂ ಮುಗಿಯದ ಜ್ಞಾನ ಕಣಜ ನಾವು ಪಡೆಯುವ ಶಾಲಾ ಶಿಕ್ಷಣ ಅದರ ಒಂದು ಭಾಗ.

ಆದರೆ ಶಾಲಾ ಶಿಕ್ಷಣವನ್ನು ಪರಿಣಾಮಕಾರಿಯಾಗಿ ಪೂರೈಸಿಕೊಂಡವರು ಶ್ರದ್ಧೆಯಿಂದ ಅಧ್ಯಯನ ಶೀಲರಾದವರು ಮಹತ್ವದ ಸಾಧನೆ ಮಾಡಬಲ್ಲರು.

ಒಂದು ದೇಶದ ಪ್ರಗತಿ ಆ ದೇಶದ ಶೈಕ್ಷಣಿಕ ಗುಣಮಟ್ಟದ ಮೇಲೆ ಅವಲಂಬಿಸಿದೆ ಎನ್ನುವುದು ಅರಿತು ಸಾಕ್ಷರ ದೇಶ ಕಟ್ಟುವಲ್ಲಿ ಎಲ್ಲರೂ ತಮ್ಮ ಹೊಣೆಗಾರಿಕೆಯನ್ನು ನಿಭಾಯಿಸಬೇಕು.

ಗುರುಭಕ್ತಿಯಿಂದ ನಮ್ಮನ್ನು ಗೌರವಿಸಿ ತುಲಾಭಾರ ಸೇವೆ ಮಾಡಿರುವುದು ಸಂತಸವಾಗಿದ್ದು ಸಮಸ್ತ ವಿದ್ಯಾರ್ಥಿ ಬಳಗದ ಭವಿಷ್ಯ ಉಜ್ವಲಗೊಳ್ಳಲಿ ಎಂದು ಶುಭ ಹಾರೈಸಿದರು.

ಚಂದ್ರಕಾಂತ ಕಿವಡೆ, ಸುರೇಖಾ ಪಾಟೀಲ್ ಗದಲೇಗಾಂವ ಬಿ. ಮಾತನಾಡಿದರು.

ಶಿವಾನಂದ ಪೂಜಾರಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಬಾಬು ಹೊನ್ನಾನಾಯಕ, ಸುನೀತಾ ನಾಲೂರೆ, ಹಣಮಂತ ಜಮಾದಾರ, ಉಮಾಕಾಂತ ಭಂಗೆ, ಅಹಮದ್ ಅಲಿ, ಅಮರೇಶ್ವರ ಸ್ವಾಮಿ, ಸಿದ್ರಾಮಯ್ಯ ಸ್ವಾಮಿ, ಬಸವರಾಜ ಹುಡೇ, ವಿಜಯಕುಮಾರ ಜಮಾದಾರ, ಪುಷ್ಪಾವತಿ, ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಕರೀಷ್ಮಾ ಶೇಕ್ ಸ್ವಾಗತಿಸಿದರು.

ವಿಜಯಲಕ್ಷ್ಮಿ ಪೂಜಾರಿ ಹಾಗೂ ಪ್ರತಿಮಾ ಕಾಂಬಳೆ ಪ್ರಾರ್ಥನಾ ಗೀತೆ

ಶಿವರಾಜ ಚೌಡಾಪುರ, ಕಾರ್ತಿಕ ಸ್ವಾಮಿ ಯಲದಗುಂಡಿ, ಶರಣಪ್ಪ ಜಮಾದಾರ ಸಂಗೀತ ಸೇವೆ.

ಶಿವರಾಜ ಪಿರಜೆ ವಂದಿಸಿದರು.

# ಪ್ರಧಾನ ಮಂತ್ರಿ ಸುರಕ್ಷಾ ವಿಮಾ ಯೋಜನೆ ಎಲ್ಲರೂ ಮಾಡಿಸಿ : ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜ.20: ಪ್ರಧಾನ ಮಂತ್ರಿ ಸುರಕ್ಷಾ ವಿಮಾ ಯೋಜನೆ ಹಾಗೂ ಪ್ರಧಾನ ಮಂತ್ರಿಜೀವನ ಜ್ಯೋತಿ ವಿಮಾ ಯೋಜನೆಗಳನ್ನು ಸರಕಾರಿ ನೌಕರರು ಕಡ್ಡಾಯವಾಗಿ ಎಲ್ಲರೂ ಮಾಡಿಸಬೇಕೆಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಹೇಳಿದರು.



ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಪ್ರಧಾನ ಮಂತ್ರಿ ಸುರಕ್ಷಾ ವಿಮಾ ಯೋಜನೆ ಹಾಗೂ ಪ್ರಧಾನ ಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆಗಳ ಕುರಿತು ಮಾಹಿತಿ ನೀಡಲು ಅಧಿಕಾರಿಗಳಿಗೆ ಕ-ರೆದ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಈ ಯೋಜನೆಗಳನ್ನು ನಾನು ಮಾಡಿಕೊಂಡಿದ್ದು ನನ್ನ ಕುಟುಂಬದವರ ಹೆಸರಿನಲ್ಲಿ ಮಾಡಿಸಿದ್ದೇನೆ. ತಾವುಗಳು ಇವುಗಳನ್ನು ಮಾಡಿಕೊಳ್ಳಬೇಕು ಮತ್ತು ತಮ್ಮ ಕಛೇರಿಯಲ್ಲಿರುವ ಸಿಬ್ಬಂದಿಗಳಿಗೂ ಈ ಮಾಹಿತಿ ನೀಡಿ. ಇದು ಸರಕಾರಿ ನೌಕರರು ಮಾತ್ರವಲ್ಲದೆ ಸಾರ್ವಜನಿಕರು ಈ ಪಾಲಿಸಿ ಮಾಡಿಕೊಂಡರೆ ಅವರಿಗೂ ತುಂಬಾ ಅನುಕೂಲವಾಗಲಿದ್ದು. ಸಾಮಾನ್ಯ ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಇದನ್ನು ಜಾರಿಗೆ ತರಲಾಗಿದೆ ಎಂದು ಹೇಳಿದರು.

ಪ್ರಧಾನ ಮಂತ್ರಿ ಸುರಕ್ಷಾ ವಿಮಾ ಯೋಜನೆಗೆ ವಾರ್ಷಿಕ ಕೇವಲ 20 ರೂ ಕಟ್ಟಿದರೆ 2 ಲಕ್ಷ ರೂಗಳ ದುರ್ಘಟನಾ ವಿಮೆ ಸಿಗಲಿದ್ದು 18 ರಿಂದ 70 ವರ್ಷದ ವರೆಗಿನ ಪ್ರಾಯದ ಎಲ್ಲಾ ಸೇವಿಂಗ್ಸ್ ಬ್ಯಾಂಕ್ ಖಾತೆದಾರರು ಈ ಪಾಲಿಸಿ ಮಾಡಬಹುದಾಗಿದೆ. ಪ್ರಧಾನ ಮಂತ್ರಿಜೀವನ ಜ್ಯೋತಿ ವಿಮಾ ಯೋಜನೆವಾರ್ಷಿಕ ಪ್ರಿಮಿಯಮ್ 436 ಕಟ್ಟಿದರೆ 2 ಲಕ್ಷ ರೂ ಜೀವ ವಿಮೆ 18 ರಿಂದ 50 ವರ್ಷದ ಪ್ರಾಯದ ಎಲ್ಲಾ ಸೇವಿಂಗ್ ಬ್ಯಾಂಕ್ ಖಾತೆ-ದಾರರು ಈ ಪಾಲಿಸಿಗಳನ್ನು ಮಾಡಿಕೊಳ್ಳಬಹುದಾಗಿದೆ ಎಂದು ಹೇಳಿದರು.

ಎಸ್.ಬಿ. ಐ ಬ್ಯಾಂಕಿನ ಎಲ್.ಡಿ.ಎಮ್ ವಿರೇಂದ್ರ ಕುಮಾರ್ ಮಾತನಾಡಿ ನಮ್ಮನ್ನು ನಂಬಿದವರಿಗೆ ಸೆಕ್ಯುರಿಟಿ ಇಟ್ಟು

ಸಾಯಬೇಕು ವಿಶೇಷವಾಗಿ ಹಳ್ಳಿಗಾಡಿನ ಜನರಿಗೆ ಈ ಯೋಜನೆಗಳಿಂದ ತುಂಬಾ ಉಪಯೋಗವಾಗಲಿದೆ. ಕಡಿಮೆ ಪ್ರಿಮಿಯಂ ಕಟ್ಟಿದರೆ ಸಾಕು ಇದರ ಲಾಭ ಸಿಗಲಿದೆ. ಇದ-ಕ್ಕೆ ಭಾರತ ದೇಶದ ಎಲ್ಲಾ ನಾಗರಿಕರು ಅರ್ಹರು. ಯಾವುದೇ ಬ್ಯಾಂಕಿನಲ್ಲಿ ತಮ್ಮ ಅಕೌಂಟ್ ಇದ್ದರೆ ಅಟೋ ಡೆಬಿಟ್ ಆಗುತ್ತದೆ. 18 ವರ್ಷ ಮೇಲ್ಪಟ್ಟ ಎಲ್ಲರೂ ಈ ಪಾಲಿಸಿ ಮಾಡಿಕೊಳ್ಳಲು ಹೇಳಬೇಕು ಈ ಕುರಿತು ತಮ್ಮ ಅಕ್ಕಪಕ್ಕದವರಿಗೂ ಮಾಹಿತಿ ನೀಡಿ. ಇದರ ರಾಜ್ಯದ ಗುರಿ 22 ಪ್ರತಿಶತ ಆಗಿದ್ದು ನಮ್ಮ ಜಿಲ್ಲೆಯಲ್ಲಿ 23 ಪ್ರತಿಶತ ಆಗಿದೆ ಬರುವ ದಿನಗಳಲ್ಲಿ ಇನ್ನೂ ಹೆಚ್ಚಿಗೆ ಆಗಬೇಕಿದೆ ಎಂದು ಹೇಳಿದರು.

ಈ ಸಭೆಯಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ರೇಷ್ಮಾ ಹಾನಗಲ್, ಜಿಲ್ಲಾ ತರಬೇತಿ ಕೇಂದ್ರದ ಪ್ರಾಂಶುಪಾಲರಾದ ಕೃಷ್ಣಮೂರ್ತಿ ದೇಸಾಯಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕೊಟ್ರೇಶ ಮರಬನಳ್ಳಿ, ಪದವಿಪೂರ್ವ ಶಿಕ್ಷಣ ಇಲಾಖೆಯಿಂದ ಉಪನಿರ್ದೇಶಕರಾದ ಜಗದೀಶ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ನಾಗರಾಜ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ನೌಕರರ ಮನ ರಂಜಿಸಿದ ಸಾಂಸ್ಕೃತಿಕ ಕಾರ್ಯಕ್ರಮ 82 ಮಂದಿಗೆ ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 20 : ಧಾರವಾಡದ ಕರ್ನಾಟಕ ರಾಜ್ಯ ಶಿಕ್ಷಕರ ಪರಿಷತ್ ಹಾಗೂ ಕಲ್ಯಾಣ ಕರ್ನಾಟಕ ಪ್ರೌಢಶಾಲಾ ಶಿಕ್ಷಕರ ಸಂಘದ ವತಿಯಿಂದ ಇಲ್ಲಿಯ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದಲ್ಲಿ ಶನಿವಾರ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ 82 ಮಂದಿಗೆ ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ ಮಾಡಲಾಯಿತು.

50 ಮಂದಿಗೆ ಆದರ್ಶ ದಂಪತಿ, 18 ಮಂದಿಗೆ ಸಾವಿತ್ರಿಬಾಯಿ ಶಿಕ್ಷಣ ಸೇವಾ ರತ್ನ, 12 ಮಂದಿಗೆ ಶೇಖ್ ಫಾತಿಮಾ ಶಿಕ್ಷಣ ಸೇವಾ ರತ್ನ ಹಾಗೂ ಇಬ್ಬರಿಗೆ ಸೇವಾ ರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಉತ್ತಮ ಸೇವೆ ಸಲ್ಲಿಸಿದ ಶಿಕ್ಷಕರನ್ನು ಗುರುತಿಸಿ ಪ್ರಶಸ್ತಿ ನೀಡಿ ಪ್ರೋತ್ಸಾಹಿಸಿದ್ದಕ್ಕೆ ಕಾರ್ಯಕ್ರಮ ಉದ್ಘಾಟನೆ ನೆರವೇರಿಸಿದ ಭಾಲ್ಕಿ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮೆಚ್ಚುಗೆ ವ್ಯಕ್ತಪಡಿಸಿದರು.

ದಿನದರ್ಶಿಕೆ ಬಿಡುಗಡೆ ಮಾಡಿದ ಧಾರವಾಡದ ಕರ್ನಾಟಕ ಶಿಕ್ಷಕರ ಸಂಘಗಳ ಪರಿಷತ್ ರಾಜ್ಯ ಅಧ್ಯಕ್ಷ ಸಂಗಮೇಶ ಡಿ. ಖನ್ನಿನಾಯ್ಕರ್ ಅವರು, ಸಂಘ ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸಲು ಸದಾ ಸಿದ್ಧವಿದೆ ಎಂದು ತಿಳಿಸಿದರು.

ಡಾ. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಉಪ ನಿರ್ದೇಶಕ ಪ್ರೇಮಸಾಗರ್ ದಾಂಡೇಕರ್ ಅವರು ಸಂಘದ ಪಾಕೇಟ್ ಡೇರಿ ಬಿಡುಗಡೆ ಮಾಡಿದರು.

ಪ್ರೊ. ಶಿವಶರಣಪ್ಪ ಹುಗ್ಗಿ ಪಾಟೀಲ ವಿಶೇಷ ಉಪನ್ಯಾಸ ನೀಡಿದರು. ಪರಿಷತ್ ವಿಭಾಗೀಯ ಸಂಚಾಲಕ ದೇವಿಪ್ರಸಾದ್ ಕಲಾಲ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಾಂಸ್ಕೃತಿಕ ಕಾರ್ಯಕ್ರಮಗಳು ನೌಕರರ ಮನ ರಂಜಿಸಿದವು.

ಕಲ್ಯಾಣ ಕರ್ನಾಟಕ ಪ್ರೌಢಶಾಲಾ ಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷ ಪಾಂಡುರಂಗ ಬೆಲ್ದಾರ್ ಅಧ್ಯಕ್ಷತೆ ವಹಿಸಿದ್ದರು. ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಬಿರಾದಾರ, ಪ್ರಮುಖರಾದ ಶಂಕರೆಪ್ಪ ಎಸ್. ಘಟ್ಟಿ, ಅಬ್ದುಲ್ ಹಸೀಬ್, ಟಿ.ಆರ್. ದೊಡ್ಡೆ, ಬಸವಂತರಾಯ ಜಿಡ್ಡೆ, ಡಿ. ಝಾಕೀರ್ ಹುಸೇನ್, ರಾಘವೇಂದ್ರ ಕುಲಕರ್ಣಿ, ಸಾರಿಕಾ ಗಂಗಾ, ದಾನಿ ಬಾಬುರಾವ್, ಸಂಜೀವಕುಮಾರ ಸ್ವಾಮಿ, ದಿಲೀಪಕುಮಾರ ಡೊಂಗರಗೆ, ಗಣಪತಿ ಭಕ್ತಾ, ಸುರೇಶ ಟಾಳೆ, ವಿಜಯಕುಮಾರ ಪಾಟೀಲ, ಶಿವಕುಮಾರ ಸದಾಪುಲೆ, ಸಂಜೀವ ಬಿ. ಸೂರ್ಯವಂಶಿ, ವಿಷ್ಣುಕಾಂತ ಠಾಕೂರ್, ದಶರಥ ಕುಪ್ಪೆಕರ್, ಗೋವಿಂದ ಪೂಜಾರಿ, ವೈಜಿನಾಥ ಸಾಗರ್, ವೈಜಿನಾಥ ಸಾಳೆ, ಮಲ್ಲಿಕಾರ್ಜುನ ಟಂಕಸಾಲೆ, ಕುಪೇಂದ್ರ ಜಗಶೆಟ್ಟಿ, ಚನ್ನಬಸವ ಬಿರಾದಾರ, ಅಂದಾನಂದ ಗೌಡ, ಇಂದ್ರಕಾಂತ ದೊಡ್ಡೆ, ಕಸ್ತೂರಿ ಪಟಪಳ್ಳಿ, ಚಂದ್ರಕಾಂತ ದಂಡೆ ಇದ್ದರು.

ಬಳವಂತರಾವ್ ರಾಠೋಡ್ ಸ್ವಾಗತಿಸಿದರು. ಶಿಂಗೆ ಸೂರ್ಯಕಾಂತ ನಿರೂಪಿಸಿದರು. ಸುವರ್ಣಾ ವಾಘಮಾರೆ ವಂದಿಸಿದರು.

## ತಳವಾಡೆ ಆಸ್ಪತ್ರೆಯಲ್ಲಿ ಗರ್ಭಕಂಠ ಕ್ಯಾನ್ಸರ್ ಲಸಿಕೆ ಅಭಿಯಾನಕ್ಕೆ ಡಾ.ಗೀತಾ ಖಂಡ್ರೆ ಚಾಲನೆ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 20 : ಮನೆಯ ಏಳಿಗೆಗಾಗಿ ಸಕಲವನ್ನೂ ಧಾರೆ ಎರೆಯುವ ಮಹಿಳೆಯರು ಆರೋಗ್ಯದ ಕಡೆಗೂ ಗಮನ ಹರಿಸಬೇಕು. ಕಾಲಕಾಲಕ್ಕೆ ಮಹಿಳೆಯರು ಆರೋಗ್ಯ ತಪಾಸಣೆ ಮಾಡಿಸಿಕೊಂಡು ಆರೋಗ್ಯವಂತ ಬದುಕು ಸಾಗಿಸಬೇಕು ಎಂದು ಮಹಿಳೆಯರಿಗೆ ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ನಿರ್ದೇಶಕಿ ಡಾ.ಗೀತಾ ಖಂಡ್ರೆ ಸಲಹೆ ನೀಡಿದರು.

ಇಂದು ಭಾಲ್ಕಿ ಪಟ್ಟಣದಲ್ಲಿರುವ ತಳವಾಡೆ ಆಸ್ಪತ್ರೆಯಲ್ಲಿ ಬಿಜಿಎಸ್ ಮತ್ತು ಹೆಚ್ ಡಿ ಆರ್ ಹೆಲ್ತ್ ಕೇರ್ ಫೌಂಡೇಶನ್ ಸಹಯೋಗದಲ್ಲಿ ಆಯೋಜಿಸಿದ್ದ ಗರ್ಭಕಂಠ ಕ್ಯಾನ್ಸರ್ ಲಸಿಕೆ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮಹಿಳೆಯರು ಕುಟುಂಬದ ನಿರ್ವಹಣೆ ಜತೆಗೆ ತಮ್ಮ ಆರೋಗ್ಯದ ಕಡೆಗೂ ಕಾಳಜಿ ವಹಿಸಬೇಕು. ಇದೀಗ ತಳವಾಡೆ ಆಸ್ಪತ್ರೆಯಲ್ಲಿ ಗರ್ಭಕಂಠದ ಕ್ಯಾನ್ಸರ್ ತಡೆಗೆ ಲಸಿಕೆ ನೀಡಲಾಗುತ್ತಿದ್ದು, ಎಲ್ಲ ಮಹಿಳೆಯರು ಇದರ ಸದುಪಯೋಗಪಡೆದುಕೊಳ್ಳಬೇಕು ಎಂದರು.

ಗರ್ಭಕಂಠ ಕ್ಯಾನ್ಸರ್ ತಡೆಗಟ್ಟಲು ಎಚ್ ಪಿ ವಿ ಲಸಿಕೆ ಪಡೆಯುವುದು ಅಗತ್ಯವಾಗಿದ್ದು, ಪರಿಣಾಮಕಾರಿಯು ಆಗಿದೆ. ಈ ಲಸಿಕೆಯಿಂದ ಯಾವುದೇ ಅಡ್ಡ ಪರಿಣಾಮ ಉಂಟಾಗುವುದಿಲ್ಲ ಎಂದು ಭರವಸೆ ನೀಡಿದ ಅವರು, ಲಸಿಕೆ ಪಡೆಯಲು ಎಲ್ಲರೂ ಮುಂದೆ ಬಂದು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ದೇಶದಲ್ಲಿ ಪ್ರತಿದಿನ ನೂರಾರು ಮಹಿಳೆಯರು ಗರ್ಭಕಂಠ ಕ್ಯಾನ್ಸರ್ ರೋಗಕ್ಕೆ ಮೃತರಾಗುತ್ತಿದ್ದಾರೆ. ಇದನ್ನು ತಡೆಗಟ್ಟಲು ಎಚ್ ಪಿ ವಿ ಲಸಿಕೆ ಸಹಕಾರಿಯಾಗಿದೆ. 9 ರಿಂದ 14 ವರ್ಷದೊಳಗಿನ ಎಲ್ಲ ಬಾಲಕಿಯರು ಕಡ್ಡಾಯವಾಗಿ ಈ ಲಸಿಕೆ ಪಡೆದುಕೊಳ್ಳಬೇಕು. 15 ರಿಂದ 26 ವರ್ಷದೊಳಗಿನ ಮಹಿಳೆಯರು ಎರಡು ಡೋಸ್, 27 ವರ್ಷ ಮೇಲ್ಪಟ್ಟ ಎಲ್ಲ ಮಹಿಳೆಯರು ಮೂರು ಡೋಸ್ ಲಸಿಕೆ ಪಡೆದುಕೊಳ್ಳಬೇಕು ಎಂದು ಡಾ.ಲಲಿತಮ್ಮ ಮಾಹಿತಿ ನೀಡಿದರು.

ಚಾಲನೆ ನೀಡಿದ ಮೊದಲ ದಿನವೇ ಪಟ್ಟಣ ಸೇರಿ ಗ್ರಾಮೀಣ ಭಾಗದ ವಿವಿಧ ಭಾಗಗಳಿಂದ ನೂರಾರು ಮಹಿಳೆಯರು ಆಗಮಿಸಿ 130 ಮಹಿಳೆಯರು ಲಸಿಕೆ ಪಡೆದುಕೊಂಡು, ಲಸಿಕೆ ಜಾಗೃತಿ ಅಭಿಯಾನಕ್ಕೆ ಸಾಥ್ ನೀಡಿದರು.

ಈ ಸಂದರ್ಭದಲ್ಲಿ ಡಾ.ವಿಜಯಶ್ರೀ ಬಶೆಟ್ಟಿ, ಡಾ.ರಾಜಲಕ್ಷ್ಮಿ ಚಂದಾ, ಡಾ.ಅನಿಲಕುಮಾರ ತಳವಾಡೆ ಹಾಗೂ ಡಾ.ಉಮಾ ದೇಶಮುಖ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಅಲ್ಪಸಂಖ್ಯಾತರ ಸಮಸ್ಯೆಗೆ ಹಂತ ಹಂತವಾಗಿ ಪರಿಹಾರ: ಇಕ್ಬಾಲ್ ಸಿಂಗ್ ಲಾಲಪೂರಾ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 20 : 'ಅಲ್ಪಸಂಖ್ಯಾತರ ಸಮಸ್ಯೆಗಳಿಗೆ ಹಂತ ಹಂತವಾಗಿ ಪರಿಹಾರ ಕಂಡುಕೊಳ್ಳಲಾಗುವುದು' ಎಂದು ರಾಷ್ಟ್ರೀಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಇಕ್ಬಾಲ್ ಸಿಂಗ್ ಲಾಲಪೂರಾ ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಭಾನುವಾರ ಅಲ್ಪಸಂಖ್ಯಾತರ ಸಮುದಾಯದ ಮುಖಂಡರೊಂದಿಗಿನ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅಲ್ಪಸಂಖ್ಯಾತರಾದ ಮುಸ್ಲಿಂ, ಕ್ರಿಶ್ಚಿಯನ್, ಸಿಖ್, ಬೌದ್ಧ, ಜೈನ್ ಮತ್ತು ಪಾರ್ಸಿಗಳಿಗೆ ಅನೇಕ ಸೌಲಭ್ಯಗಳಿವೆ. ಅವುಗಳ ಸದುಪಯೋಗಪಡೆದುಕೊಳ್ಳಬೇಕು. ಭಾರತ ಜಗತ್ತಿನಲ್ಲಿಯೇ ಸಹಿಷ್ಣುತೆ ಹೊಂದಿರುವ ಏಕೈಕ ದೇಶ. ಎಲ್ಲರೂ ಒಂದಾಗಿ, ಸುರಕ್ಷಿತರಾಗಿ ದೇಶದ ಏಳಿಗೆಗೆ ಶ್ರಮಿಸಬೇಕು ಎಂದು ತಿಳಿಸಿದರು.

ಎಲ್ಲ ಹಂತಗಳಲ್ಲಿ ಅಲ್ಪಸಂಖ್ಯಾತರಿಗೆ ಅವಕಾಶಗಳು, ಸ್ಥಾನಮಾನಗಳು ಸಿಗುತ್ತಿವೆ. ಉನ್ನತ ಸ್ಥಾನದಲ್ಲಿರುವವರು ಕ್ರಿಯಾಶೀಲರಾಗಿ ಕೆಲಸ ನಿರ್ವಹಿಸಿದರೆ ಯೋಜನೆಗಳು ತಳಮಟ್ಟಕ್ಕೆ ತಲುಪುತ್ತವೆ ಎಂದರು.


ಸಭೆಯಲ್ಲಿ ಭಾಗವಹಿಸಿದ ಮುಖಂಡರು ಅವರ ಸಮಸ್ಯೆಗಳನ್ನು ಹೇಳಿಕೊಂಡರು.

ಹೆಚ್ಚುವರಿ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ಮತ್ತಿತರರು ಹಾಜರಿದ್ದರು.

## ಇಂಧನ ಸಚಿವ ಕೆ.ಜೆ.ಜಾರ್ಜ ಜಿಲ್ಲಾ ಪ್ರವಾಸ

ಬಾಗಲಕೋಟೆ : ಜ. 20 : ಇಂಧನ ಸಚಿವರಾದ ಕೆ.ಜೆ.ಜಾರ್ಜ ಅವರು ಜನೇವರಿ 22 ರಂದು ಬಾಗಲಕೋಟೆ ಪ್ರವಾಸಕ್ಕೈಗೊಂಡು ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಅಂದು ಬೆಳಿಗ್ಗೆ 9.45ಕ್ಕೆ ಬೆಳಗಾವಿಯಿಂದ ಹೆಲಿಕ್ಯಾಪ್ಟರ ಮೂಲಕ ಬಾಗಲಕೋಟೆಗೆ ಆಗಮಿಸಲಿದ್ದಾರೆ. ನಂತರ 9.45 ರಿಂದ 10.45 ವರೆಗೆ ಖಾಸಗಿ ಕಾರ್ಯಕ್ರಮಗಳ ಭಾಗಹವಹಿಸಿ 11ಕ್ಕೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಇಂಧನ ಇಲಾಖೆಯ ವಿಷಯಗಳ ಕುರಿತು ಚರ್ಚಿಸಲು ಜನಪ್ರತಿನಿಧಿಗಳೊಂದಿಗೆ ಸಭೆ ನಡೆಸಲಿದ್ದಾರೆ. ಸಭೆಯ ನಂತರ ಪತ್ರಿಕಾಗೋಷ್ಠಿ ನಡೆಸಿ, ಮಧ್ಯಾಹ್ನ 2.30ಕ್ಕೆ ವಿಜಯಪುರಕ್ಕೆ ತೆರಳಲಿದ್ದಾರೆಂದು ಪ್ರಕಟಣೆ ತಿಳಿಸಿದೆ.

## ಗಣರಾಜ್ಯೋತ್ಸವ ಅದ್ದೂರಿಯಾಗಿ ಆಚರಿಸೋಣ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ

ಬೀದರ ಜ.20 : ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಗಣರಾಜ್ಯೋತ್ಸವ ದಿನಾಚರಣೆಯನ್ನು ಅದ್ದೂರಿಯಾಗಿ ಆಚರಿಸೋಣ, ಅಂದು ಎಲ್ಲಾ ಅಧಿಕಾರಿಗಳು, ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಾಗಿ ಗಣರಾಜ್ಯೋತ್ಸವ ದಿನಾಚರಣೆಯನ್ನು ಯಶಸ್ವಿ ಮಾಡಬೇಕೆಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಹೇಳಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ.26 ರ ಗಣರಾಜ್ಯೋತ್ಸವ ದಿನಾಚರಣೆಯ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜನವರಿ.26 ರಂದು ಗಣರಾಜ್ಯೋತ್ಸವ ನಿಮಿತ್ಯ ಜನವರಿ.25 ಮತ್ತು 26 ರಂದು 2 ದಿವಸ ಸಂಘ-ಸಂಸ್ಥೆಗಳು, ಸರ್ಕಾರಿ ಕಚೇರಿಗಳು ಎಲ್ಲಾ ಮಹನಿಯರ ವೃತ್ತದ ಮೇಲೆ ದೀಪಲಾಂಕಾರ ಮಾಡುವುದು. ಜನವರಿ.26 ರಂದು ಬೆಳಿಗ್ಗೆ 8 ಗಂಟೆಗೆ ಸರ್ಕಾರಿ-ಅರೆ ಸರ್ಕಾರಿ, ವಿವಿಧ ಶಾಲಾ ಕಾಲೇಜು ಮತ್ತು ಸಂಘ-ಸಂಸ್ಥೆಗಳ ಮೇಲೆ ಧ್ವಜಾರೋಹಣ ನೆರವೇರಿಸಿ ನಂತರ ಎಲ್ಲಾ ಶಾಲಾ ಕಾಲೇಜುಗಳ ಶಿಕ್ಷಕರು ಮತ್ತು ಸಿಬ್ಬಂದಿಗಳು ವಿದ್ಯಾರ್ಥಿಗಳೊಂದಿಗೆ ನಗರದ ನೆಹರು ಕ್ರೀಡಾಂಗಣದಲ್ಲಿ ಬೆಳಿಗ್ಗೆ 8:45 ಗಂಟೆಯೊಳಗೆ ಹಾಜರಾಗಬೇಕು. ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಮುಂಚಿತವಾಗಿ ಪ್ರಬಂಧ ಸ್ಪರ್ಧೆ, ರಂಗೋಲಿ ಸ್ಪರ್ಧೆ ಏರ್ಪಡಿಸುವಂತೆ ಸೂಚಿಸಿದರು. ಬೆಳಿಗ್ಗೆ 9 ಗಂಟೆಗೆ ಬೀದರ ನಗರದ ನೇಹರು ಕ್ರೀಡಾಂಗಣದಲ್ಲಿ ಸಾರ್ವಜನಿಕವಾಗಿ ಧ್ವಜಾರೋಹಣ ಕಾರ್ಯಕ್ರಮ ನೆರವೇರಿಸಲಾಗುವುದು.

ನೆಹರು ಕ್ರೀಡಾಂಗಣದಲ್ಲಿ ಜರುಗುವ ಪಥ ಸಂಚಲನ ಶಾಲಾ ಮಕ್ಕಳಿಂದ ಕವಾಯತ ಮತ್ತು ಇತ್ಯಾದಿ ಕಾರ್ಯಕ್ರಮಗಳನ್ನು ನಿಯಮಾನುಸಾರ ಅಚ್ಚುಕಟ್ಟಾಗಿ ನೇರವೇರಿಸಲು ರಚಿಸಿದ ಉಪ ಸಮಿತಿಯ ಎಲ್ಲಾ ಅಧ್ಯಕ್ಷರು ಮತ್ತು ಸದಸ್ಯರುಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು. ಶಿಕ್ಷಣ ಇಲಾಖೆ ವತಿಯಿಂದ ಮೂರು ಸರ್ಕಾರಿ, ಎರಡು ಖಾಸಗಿ ಶಾಲಾ ಕಾಲೇಜುಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲು ವ್ಯವಸ್ಥೆ ಮಾಡಬೇಕು.

ಗಣರಾಜ್ಯೋತ್ಸವ ಅಂಗವಾಗಿ ಪೂಜ್ಯ ಚನ್ನಬಸವ ಪಟ್ಟದೇವರ ರಂಗಮಂದಿರದಲ್ಲಿ ಸಂಜೆ 5.30 ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳು, ಕವಿಗೋಷ್ಠಿ ಕಾರ್ಯಕ್ರಮ ಹಮ್ಮಿಕೊಳ್ಳಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಕುಮಾರ ಶೀಲವಂತ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಚಂದ್ರಕಾಂತ ಪೂಜಾರ, ಸಹಾಯಕ ಆಯುಕ್ತರಾದ ಎಂ.ಡಿ.ಶಕೀಲ್, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಮುತ್ತಣ್ಣ ಕರಿಗಾರ, ಸಂಘ-ಸಂಸ್ಥೆ ಪದಾಧಿಕಾರಿಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮನ್ನಳ್ಳಿ ಪಿಕೆಪಿಎಸ್ ಅಧ್ಯಕ್ಷರಾಗಿ ವಗದಾಳೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 20 : ತಾಲ್ಲೂಕಿನ ಮನ್ನಳ್ಳಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಸೂರ್ಯಕಾಂತ ವಗದಾಳೆ ಹಾಗೂ ಉಪಾಧ್ಯಕ್ಷರಾಗಿ ರಾಮಲು ಹೊಕ್ರಾಣ(ಬಿ) ಆಯ್ಕೆಯಾಗಿದ್ದಾರೆ. ಸಂಘದ ಕಚೇರಿಯಲ್ಲಿ ಈಚೆಗೆ ನಡೆದ ಚುನಾವಣೆಯಲ್ಲಿ ಅವರು ಆಯ್ಕೆಯಾದರು. 12 ಸದಸ್ಯ ಬಲದ ಸಂಘದಲ್ಲಿ ಬೀದರ್ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮಾಜಿ ಅಧ್ಯಕ್ಷ ಅನಿಲಕುಮಾರ ಪನ್ನಾಳೆ ಅವರ ಬೆಂಬಲಿತ 8 ನಿರ್ದೇಶಕರಿದ್ದಾರೆ. ವಗದಾಳೆ ಅಧ್ಯಕ್ಷ ಮತ್ತು ರಾಮಲು ಉಪಾಧ್ಯಕ್ಷರಾಗಿ ಆಯ್ಕೆ ಆಗುವುದರೊಂದಿಗೆ ಸಂಘ ಪನ್ನಾಳೆ ಬೆಂಬಲಿಗರ ಕೈವಶವಾಗಿದೆ. ನೂತನ ಅಧ್ಯಕ್ಷ ಮತ್ತು ಉಪಾಧ್ಯಕ್ಷರು ರೈತರ ಸಮಸ್ಯೆಗೆ ಸ್ಪಂದಿಸಬೇಕು ಎಂದು ಅನಿಲಕುಮಾರ ಪನ್ನಾಳೆ ಸಲಹೆ ಮಾಡಿದರು. ನಿರ್ದೇಶಕರಾದ ಸಂಗಪ್ಪ ಮಡಕಿ,

ರಾವುಸಾಬ್ ಸಾವಜಿ, ಅರುಣರೆಡ್ಡಿ ಪಾಟೀಲ, ಪೂಜಾ ರಾಜಕುಮಾರ, ಗ್ರಾಮದ ಪ್ರಮುಖರಾದ ನಾಗೇಶ ಬೆಳಕೇರಿ, ವಿಜಯಕುಮಾರ ಗಣಾಪುರ, ಆಜಂ ಅಲಿ ಸೌದಾಗರ, ಮಹೇಶ ಕೋಟೆ, ಸೂರ್ಯಕಾಂತ ಮಡಕಿ, ಖದೀರ್ ಯಾಕತಪುರ, ಶಂಕರ ಬಾಬು ಮತ್ತಿತರರು ಇದ್ದರು.

# ಪಿಎಲ್‌ಡಿ ಬ್ಯಾಂಕ್ 14 ಕ್ಷೇತ್ರಗಳಿಗೆ ಅವಿರೋದ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಇಲ್ಲಿನ ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್‌ನ ಎಲ್ಲಾ 14 ಕ್ಷೇತ್ರಗಳಿಗೆ ನಡೆದ ಚುನಾವಣೆಯಲ್ಲಿ ನಿರ್ದೇಶಕರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಗಿರೀಜಾ. ಕೆ ತಿಳಿಸಿದ್ದಾರೆ,

ಅವಿರೋಧವಾಗಿಆಯ್ಕೆಯಾದವರು : 1. ರಾಘವೇಂದ್ರರಡ್ಡಿ ಕೊಂಕಲ್(ಮತಕ್ಷೇತ್ರಕೊಂಕಲ್) 2. ಬಸವರಾಜಪ್ಪ ಕಣೇಕಲ್ (ಮಾದ್ವಾರ) 3. ಬಸವರಡ್ಡಿ ಹೆಗ್ಗಣಗೇರಾ(ಸೈದಾಪೂರ) 4. ಶರಣಗೌಡಸೌರಾಷ್ಟ್ರಹಳ್ಳಿ(ಕಡೇಚೂರ) 5. ವೆಂಕಟರಾಮುಲು ಚಪೆಟ್ಲಾ (ಗುರುಮಿಠಕಲ್) 6. ಅಮೃತರಡ್ಡಿ ಪಾಟೀಲ್ (ಹತ್ತಿಕುಣಿ) 7. ನಾಗರಡ್ಡಿ ಹೆಡಗಿಮದ್ರಿ (ಯರಗೋಳ) 8. ರವಿಪುತ್ರ ಆರ್. ಹೊಸಳ್ಳಿ(ಯಲ್ಹೇರಿ) 9. ಬನ್ನಪ್ಪ ಹಳಗೇರಾ(ಬಳಿಚಕ್ರ) 10. ರಾಮಣ್ಣ ಕೋಟಗೇರಾ (ಗಾಜರಕೋಟ್) 11. ಆರ್. ಮಹಾದೇವಪ್ಪಗೌಡ ಅಬ್ಬೆತುಮಕೂರ(ಯಾದಗಿರಿ) 12. ಜಲ್ಲಮ್ಮ ತಾತಳಗೇರಾ (ಕಂದಕೂರ) 13. ಮರೆಮ್ಮ ಕಲಾಲ್ (ಮುಂಡ್ರಗಿ) 14. ಶರಣಪ್ಪಗೌಡ ಕೌಳೂರ (ಯಾದಗಿರಿ)

# ಅದ್ದೂರಿಯಾಗಿ ಜರುಗಿದ ಸಿದ್ದರಾಮೇಶ್ವರ ಜಯಂತಿ ಮೆರವಣಿಗೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : 12ನೇ ಶತಮಾನದಲ್ಲಿ ಪ್ರಮುಖ ವಚನಕಾರರಲ್ಲಿಒಬ್ಬರಾದಮಹಾ ಶಿವಯೋಗಿ ಸಿದ್ದರಾಮೇಶ್ವರರ ಜಯಂತಿಮೆರವಣಿಗೆನಗರದಲ್ಲಿ ಅದ್ದೂರಿಯಾಗಿ ಜರುಗಿತು.

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯೋಗದಲ್ಲಿ ಸೋಮವಾರ ನಗರದಲ್ಲಿ ಸಿದ್ದರಾಮೇಶ್ವರ ಜಯಂತಿ ಮೆರವಣಿಗೆ ಬೆಳಿಗ್ಗೆ 11ಕ್ಕೆ ನಗರ ಪೊಲೀಸ್ ಠಾಣೆ ಮುಂಭಾಗದಿಂದಆರಂಭವಾಯಿತು,

ಮೆರವಣಿಗೆ ತಹಸಿಲ್ದಾರ ಕಛೇರಿ, ಶಾಸ್ತ್ರೀ ವೃತ್ತ, ಸುಭಾಷ ಚೌಕ್ ಮೂಲಕ ಸರ್ಕಾರಿ ಪದವಿ ಕಾಲೇಜು ತಲುಪಿತು, ಮೆರವಣಿಗೆಯಲ್ಲಿ ಡೊಳ್ಳು, ಬಂಜಾರ ಮಹಿಳೆಯರ ನೃತ್ಯ ನೋಡುಗರ ಗಮನ ಸೆಳೆಯಿತು.

ಈ ಸಂದರ್ಭದಲ್ಲಿ ಬೋವಿ ಸಮಾಜದ ಜಿಲ್ಲಾಧ್ಯಕ್ಷ ನಾಗಪ್ಪ ಬೆನಕಲ್, ಶರಣಪ್ಪ ಸಾತನೂರ, ಬಸವರಾಜ ಮುದ್ನಾಳ, ಚಂದ್ರು ಕಿಲ್ಲನಕೇರಾ, ತಾಯಪ್ಪಮಾದ್ವಾರ, ಅಮರೇಶಶಹಾಪುರ, ಹಣಮಂತ ವಲ್ಲಾಪೂರೆ, ದೊಡ್ಡರೇಣುಕಮ್ಮ, ದೇವಮ್ಮ ಸೇರಿದಂತೆ ಜನರು ಉಪಸ್ಥಿತರಿದ್ದರು.

## ನಗರಸಭೆ ವ್ಯಾಪ್ತಿಯಲ್ಲಿ ಮೂಲಸೌಕರ್ಯ ಅಭಿವೃದ್ಧಿ ಮಾಡಿ: ಪೌರಾಡಳಿತ ಸಚಿವರಿಗೆ ಬಿಎಸ್‌ಪಿ ಒತ್ತಾಯ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ನಗರದ 31 ವಾರ್ಡಗಳಲ್ಲಿ ಯು.ಜಿ.ಡಿ. ಕಾಮಗಾರಿಹಾಗೂಉದ್ಯಾನವನಗಳ ಅಭಿವೃದ್ಧಿ ಮಾಡಲು ಕ್ರಮ ಕೈಗೊಳ್ಳುವಂತೆ ಪೌರಾಡಳಿತ ಸಚಿವ ರಹಿಮ್ ಖಾನ್ ಅವರಿಗೆ ಬಹುಜನ ಸಮಾಜ ಪಾರ್ಟಿ ಜಿಲ್ಲಾ ಘಟಕ ಒತ್ತಾಯಿಸಿದೆ.

ನಗರಕ್ಕೆ ಆಗಮಿಸಿದ್ದ ಸಚಿವ ರಹಿಮ್ ಖಾನ್ ಅವರಿಗೆ ಮನವಿ ಸಲ್ಲಿಸಿದ ಬಿಎಸ್‌ಪಿ ಜಿಲ್ಲಾದ್ಯಕ್ಷ ತಜಮುಲ್ ಹುಸೇನ್ (ಎಂ.ಡಿ. ತಾಜ್ ), ಯಾದಗಿರಿ ಜಿಲ್ಲಾ ಕೇಂದ್ರವಾಗಿದ್ದು, ಅಭಿವೃದ್ಧಿಯಲ್ಲಿ ಹಿಂದುಳಿದಿದ್ದು, ನಗರದ ಸಮಗ್ರ ಅಭಿವೃದ್ಧಿಗಾಗಿ ತಾವುಗಳು ಯು.ಜಿ.ಡಿ. ಯಡಿ ಒಳಚರಂಡಿ ಕಾಮಗಾರಿಗಳು ನಿರ್ಮಿಸಿ, ಚರಂಡಿ ನೀರು ಎಲ್ಲೆಂದರೆಲ್ಲಿ ನಿಲ್ಲುತ್ತಿದ್ದು, ಇದರಿಂದ ಸೊಳ್ಳೆಗಳು ಉತ್ಪತ್ತಿಯಾಗಿ ಮಲೇರಿಯಾ, ಕಾಲರಾ ಡೆ-ಂಗ್ಯೂ ಹರಡುತ್ತಿದೆ. ಚರಂಡಿ ನೀರು ನಿಲ್ಲದಂತೆ ಮುಂಜಾಗ್ರತಾ ಕ್ರಮಕ್ಕಾಗಿ ಸ್ವಚ್ಛತೆಗಾಗಿ ಯು.ಜಿ.ಡಿ. ಕಾಮಗಾರಿಗಳು ಕೈಗೊಳ್ಳಬೇಕು.

ನಗರದಲ್ಲಿ ಉದ್ಯಾನವನಗಳು ಅಭಿವೃದ್ಧಿ ಹೊಂದಿರುವುದಿಲ್ಲ, ಸಾರ್ವಜನಿಕರಿಗೆ ಉತ್ತಮ ಪರಿಸರಕ್ಕಾಗಿ, ಉತ್ತಮ ಗಾಳಿ, ವಾತಾವರಣಕ್ಕಾಗಿ, ಜನರ ಆರೋಗ್ಯದ ದೃಷ್ಟಿಯಿಂದ ಉದ್ಯಾನವನಗಳ ಅಭಿವೃದ್ಧಿ ಅವಶ್ಯವಿದ್ದು, 2017 ರಿಂದ ಈ ಬಗ್ಗೆ ಹೋರಾಟ ಮಾಡುತ್ತಾ ಬರುತ್ತಿದ್ದೇವೆ. ಯಾವುದೇ ಕ್ರಮ ಆಗಿಲ್ಲ. ಯಾದಗಿರಿ ನಗರದಲ್ಲಿ ಈ ಹಿಂದೆ ಆಶ್ರಯ ಯೋಜನೆಯಡಿ ಬಡ ಜನರಿಗೆ ನಿವೇಶನದ ಹಕ್ಕು ಪತ್ರ ಪಡೆದುಕೊಂಡಿದ್ದು, ಬಡ ಜನರಿಗೆ ಪಿ.ಐ.ಡಿ. ನಂಬರ್ ನೀಡುತ್ತಿಲ್ಲ, ಎಲ್ಲರಿಗೂ ಪಿಐಡಿ ನಂಬರ್ (ಇ-ಸ್ವತ್ತು) ನೀಡಬೇಕು.

ನಗರಸಭೆಯ ಖಾತೆದಾರರಿಗೆ ಅಸೆಸಮೆಂಟ್ ನಂಬರ್ ನೀಡಬೇಕು. ಇದಲ್ಲದೇ ಲುಂಬಿನಿ ಉದ್ಯಾನವನದಲ್ಲಿ ಕೂಡಾ ಅವ್ಯವಸ್ಥೆ ರಾಚುತ್ತಿದ್ದು,



ಅಲ್ಲಿ ಮೂಲಭೂತ ಸೌಕರ್ಯ ಒದಗಿಸುವಂತೆ ಮನವಿ ಮಾಡಿದರು. ಒಂದು ವೇಳೆ ಈ ಬಗ್ಗೆ ಕ್ರಮ ಕೈಗೊಳ್ಳದೇ ಹೋದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಕಾರ್ಯದರ್ಶಿ ದೇವಾನಂದ ಕೋಲಿ, ಜಿಲ್ಲಾ ಸಂಚಾಲಕ, ನ್ಯಾಯವಾದಿ ಈಶ್ವರ ಚೇತನ ಸೇರಿದಂತೆ ಇನ್ನಿತರರು ಇದ್ದರು. ನಗರಸಭೆ ವ್ಯಾಪ್ತಿಯಲ್ಲಿ ಮೂಲಸೌಕರ್ಯ ಅಭಿವೃದ್ಧಿ ಮಾಡಿ: ಪೌರಾಡಳಿತ ಸಚಿವರಿಗೆ ಬಿಎಸ್‌ಪಿ ಒತ್ತಾಯ

ಯಾದಗಿರಿ: ನಗರದ 31 ವಾರ್ಡಗಳಲ್ಲಿ ಯು.ಜಿ.ಡಿ. ಕಾಮಗಾರಿಹಾಗೂಉದ್ಯಾನವನಗಳ ಅಭಿವೃದ್ಧಿ ಮಾಡಲು ಕ್ರಮ ಕೈಗೊಳ್ಳುವಂತೆ ಪೌರಾಡಳಿತ ಸಚಿವ ರಹಿಮ್ ಖಾನ್ ಅವರಿಗೆ ಬಹುಜನ ಸಮಾಜ ಪಾರ್ಟಿ ಜಿಲ್ಲಾ ಘಟಕ ಒತ್ತಾಯಿಸಿದೆ.

ನಗರಕ್ಕೆ ಆಗಮಿಸಿದ್ದ ಸಚಿವ ರಹಿಮ್ ಖಾನ್ ಅವರಿಗೆ ಮನವಿ ಸಲ್ಲಿಸಿದ ಬಿಎಸ್‌ಪಿ ಜಿಲ್ಲಾದ್ಯಕ್ಷ ತಜಮುಲ್ ಹುಸೇನ್ (ಎಂ.ಡಿ. ತಾಜ್ ), ಯಾದಗಿರಿ ಜಿಲ್ಲಾ ಕೇಂದ್ರವಾಗಿದ್ದು, ಅಭಿವೃದ್ಧಿಯಲ್ಲಿ ಹಿಂದುಳಿದಿದ್ದು, ನಗರದ ಸಮಗ್ರ ಅಭಿವೃದ್ಧಿಗಾಗಿ ತಾವುಗಳು ಯು.ಜಿ.ಡಿ. ಯಡಿ ಒಳಚರಂಡಿ ಕಾಮಗಾರಿಗಳು ನಿರ್ಮಿಸಿ, ಚರಂಡಿ ನೀರು ಎಲ್ಲೆಂದರೆಲ್ಲಿ ನಿಲ್ಲುತ್ತಿದ್ದು, ಇದರಿಂದ ಸೊಳ್ಳೆಗಳು ಉತ್ಪತ್ತಿಯಾಗಿ ಮಲೇರಿಯಾ, ಕಾಲರಾ ಡೆ-ಂಗ್ಯೂ ಹರಡುತ್ತಿದೆ. ಚರಂಡಿ ನೀರು ನಿಲ್ಲದಂತೆ ಮುಂಜಾಗ್ರತಾ ಕ್ರಮಕ್ಕಾಗಿ ಸ್ವಚ್ಛತೆಗಾಗಿ ಯು.ಜಿ.ಡಿ. ಕಾಮಗಾರಿಗಳು ಕೈಗೊಳ್ಳಬೇಕು.

ನಗರದಲ್ಲಿ ಉದ್ಯಾನವನಗಳು ಅಭಿವೃದ್ಧಿ ಹೊಂದಿರುವುದಿಲ್ಲ, ಸಾರ್ವಜನಿಕರಿಗೆ ಉತ್ತಮ ಪರಿಸರಕ್ಕಾಗಿ, ಉತ್ತಮ ಗಾಳಿ, ವಾತಾವರಣಕ್ಕಾಗಿ, ಜನರ ಆರೋಗ್ಯದ ದೃಷ್ಟಿಯಿಂದ ಉದ್ಯಾನವನಗಳ ಅಭಿವೃದ್ಧಿ ಅವಶ್ಯವಿದ್ದು, 2017 ರಿಂದ ಈ ಬಗ್ಗೆ ಹೋರಾಟ ಮಾಡುತ್ತಾ ಬರುತ್ತಿದ್ದೇವೆ. ಯಾವುದೇ ಕ್ರಮ ಆಗಿಲ್ಲ

ಯಾದಗಿರಿ ನಗರದಲ್ಲಿ ಈ ಹಿಂದೆ ಆಶ್ರಯ ಯೋಜನೆಯಡಿ ಬಡ ಜನರಿಗೆ ನಿವೇಶನದ ಹಕ್ಕು ಪತ್ರ ಪಡೆದುಕೊಂಡಿದ್ದು, ಬಡ ಜನರಿಗೆ ಪಿ.ಐ.ಡಿ. ನಂಬರ್ ನೀಡುತ್ತಿಲ್ಲ, ಎಲ್ಲರಿಗೂ ಪಿಐಡಿ ನಂಬರ್ (ಇ-ಸ್ವತ್ತು) ನೀಡಬೇಕು.

ನಗರಸಭೆಯ ಖಾತೆದಾರರಿಗೆ ಅಸೆಸಮೆಂಟ್ ನಂಬರ್ ನೀಡಬೇಕು. ಇದಲ್ಲದೇ ಲುಂಬಿನಿ ಉದ್ಯಾನವನದಲ್ಲಿ ಕೂಡಾ ಅವ್ಯವಸ್ಥೆ ರಾಚುತ್ತಿದ್ದು, ಅಲ್ಲಿ ಮೂಲಭೂತ ಸೌಕರ್ಯ ಒದಗಿಸುವಂತೆ ಮನವಿ ಮಾಡಿದರು. ಒಂದು ವೇಳೆ ಈ ಬಗ್ಗೆ ಕ್ರಮ ಕೈಗೊಳ್ಳದೇ ಹೋದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಕಾರ್ಯದರ್ಶಿ ದೇವಾನಂದ ಕೋಲಿ, ಜಿಲ್ಲಾ ಸಂಚಾಲಕ, ನ್ಯಾಯವಾದಿ ಈಶ್ವರ ಚೇತನ ಸೇರಿದಂತೆ ಇನ್ನಿತರರು ಇದ್ದರು.

## ಅದ್ದೂರಿಯಾಗಿ ಜರುಗಿದ ಸಿದ್ದರಾಮೇಶ್ವರ ಜಯಂತಿ ಮೆರವಣಿಗೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : 12ನೇ ಶತಮಾನದಲ್ಲಿ ಪ್ರಮುಖ ವಚನಕಾರರಲ್ಲಿಒಬ್ಬರಾದಮಹಾ ಶಿವಯೋಗಿ ಸಿದ್ದರಾಮೇಶ್ವರರ ಜಯಂತಿಮೆರವಣಿಗೆನಗರದಲ್ಲಿ ಅದ್ದೂರಿಯಾಗಿ ಜರುಗಿತು.


ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯೋಗದಲ್ಲಿ ಸೋಮವಾರ ನಗರದಲ್ಲಿ ಸಿದ್ದರಾಮೇಶ್ವರ ಜಯಂತಿ ಮೆರವಣಿಗೆ ಬೆಳಿಗ್ಗೆ 11ಕ್ಕೆ ನಗರ ಪೊಲೀಸ್ ಠಾಣೆ ಮುಂಭಾಗದಿಂದಆರಂಭವಾಯಿತು,

ಮೆರವಣಿಗೆ ತಹಸಿಲ್ದಾರ ಕಛೇರಿ, ಶಾಸ್ತ್ರೀ ವೃತ್ತ, ಸುಭಾಷ ಚೌಕ್ ಮೂಲಕ ಸರ್ಕಾರಿ ಪದವಿ ಕಾಲೇಜು ತಲುಪಿತು, ಮೆರವಣಿಗೆಯಲ್ಲಿ ಡೊಳ್ಳು, ಬಂಜಾರ ಮಹಿಳೆಯರ ನೃತ್ಯ ನೋಡುಗರ ಗಮನ ಸೆಳೆಯಿತು. ಈ ಸಂದರ್ಭದಲ್ಲಿ ಬೋವಿ ಸಮಾಜದ ಜಿಲ್ಲಾಧ್ಯಕ್ಷ ನಾಗಪ್ಪ ಬೆನಕಲ್, ಶರಣಪ್ಪ ಸಾತನೂರ, ಬಸವರಾಜ ಮುದ್ನಾಳ, ಚಂದ್ರು ಕಿಲ್ಲನಕೇರಾ, ತಾಯಪ್ಪಮಾದ್ವಾರ, ಅಮರೇಶಶಹಾಪುರ, ಹಣಮಂತ ವಲ್ಲಾಪೂರೆ, ದೊಡ್ಡರೇಣುಕಮ್ಮ, ದೇವಮ್ಮ ಸೇರಿದಂತೆ ಜನರು ಉಪಸ್ಥಿತರಿದ್ದರು.

## ಪೌರಾಡಳಿತ, ಹಜ್ ಸಚಿವ ಶ್ರೀ ರಹೀಂ ಖಾನ್ ಯಾದಗಿರಿ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜನವರಿ 20- ಪೌರಾಡಳಿತ ಮತ್ತು ಹಜ್ ಸಚಿವರಾದ ಶ್ರೀ ರಹೀಂ ಖಾನ್ ಅವರು ಇದೇ ಜನವರಿ 20ರ ಸೋಮವಾರರಂದು ಯಾದಗಿರಿ ಜಿಲ್ಲೆ ಪ್ರವಾಸ ಕೈಗೊಳ್ಳಲಿದ್ದಾರೆ ಪ್ರವಾಸವು ಕೆಳಗಿನಂತಿದೆ ಎಂದು ಯಾದಗಿರಿ ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರು ತಿಳಿಸಿದ್ದಾರೆ. 2025ರ 20ರ ಸೋಮವಾರ ರಂದು ಬೆಳಿಗ್ಗೆ 6.30 ಗಂಟೆಗೆ ಬೀದರ್ ದಿಂದ ನಿರ್ಗಮಿಸಿ ಬೆಳಿಗ್ಗೆ 10.30 ಗಂಟೆಗೆ ಯಾದಗಿರಿ ಜಿಲ್ಲೆಗೆ ಆಗಮಿಸಿ ಅಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ, ಜಿಲ್ಲಾ ನಗರಾಭಿವೃದ್ಧಿ ಕೋಶ ಹಾಗೂ ನಗರಸಭೆ ಯಾದಗಿರಿ ಇವರ ಸಂಯುಕ್ತಾಶ್ರಯದಲ್ಲಿ ಮಾನ್ಯ ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ(ಮುನಿಸಿಪಾಲಿಟಿ) ಯೋಜನೆ ಹಂತ-4ರಡಿ ನಗರಸಭೆ ಕಾರ್ಯಾಲಯದ



ನೂತನ ಕಟ್ಟಡ ನಿರ್ಮಾಣ ಕಾಮಗಾರಿಯ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸುವರು. ನಂತರ ಮಧ್ಯಾಹ್ನ 12 ಗಂಟೆಗೆ ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರ ಅಧ್ಯಕ್ಷತೆಯಲ್ಲಿ ಯಾದಗಿರಿ ಜಿಲ್ಲಾ ವ್ಯಾಪ್ತಿಯಲ್ಲಿ ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದ ಪ್ರಗತಿ ಪರಿಶೀಲನಾ ಸಭೆ ನಡೆಯಲಿದೆ. ತದನಂತರ ಯಾದಗಿರಿ ಗಂಜ್ ಸರ್ಕಲ್ ಯಾದಗಿರಿ ನಗರದಲ್ಲಿ ಸಮಸ್ತ ಮುಸ್ಲಿಂ ಬಾಂದವರಿಂದ ಸನ್ಮಾನ ಕಾರ್ಯಕ್ರಮದಲ್ಲಿ ಭಾಗವಹಿಸುವರು ಎಂದು ಅವರು ಪ್ರಕಟಣೆಯಲ್ಲಿ

## ಅಪಘಾತಗಳ ಬಗ್ಗೆ, ಅಪಘಾತಗಳ ತಡೆಯುವ ನಿಟ್ಟಿನ ಜಾಗೃತಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜನವರಿ 20,6 ರಾಷ್ಟ್ರೀಯ ರಸ್ತೆ ಸುರಕ್ಷತಾ ಮಸಚಾರಣೆ 2024-25 ಸಾಲಿನ ಹಿನ್ನೆಲೆ ಅಪಘಾತಗಳ ಬಗ್ಗೆ ಹಾಗೂ ಅಪಘಾತಗಳ ತಡೆಯುವ ನಿಟ್ಟಿನಲ್ಲಿ ಯಾವ ಕ್ರಮಗಳು ಕೈಗೊಳ್ಳಬೇಕು ಎಂದು ಜಾಗೃತಿ ಮೂಡಿಸಲಾಯಿತು ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ಮಿಲಿಂದಕುಮಾರ ಅವರು ಹೇಳಿದರು.

ನಗರದಲ್ಲಿ ಇಂದ ಜನವರಿ 20ರ ಸೋಮವಾರ ರಂದು ಶಾಲಾ ಮಕ್ಕಳ ಸುರಕ್ಷತೆ ಸ್ಟೇಷನ್ ಏರಿಯಾ ಶಾಲಾ ಮಕ್ಕಳಿಗೆ 18 ವರ್ಷದ ಮಕ್ಕಳು ವಾಹಾನಗಳನ್ನು ಚಲಾಯಿಸುವದು ದಂಡನೀಯ ಅಪರಾಧ ವಾಗಿರುತ್ತದೆ 6 ರಾಷ್ಟ್ರೀಯ ರಸ್ತೆ ಸುರಕ್ಷತಾ ಮಸಚಾರಣೆ 2024-25 ಸಾಲಿನ ನಿಮಿತ್ಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

6 ರಾಷ್ಟ್ರೀಯ ರಸ್ತೆ ಸುರಕ್ಷತಾ ಮಸಚಾರಣೆ ನಿಮಿತ್ಯ ಚಾಲನಾ ಪತ್ರ ಹಾಗೂ ನೋಂದಣಿ ಪತ್ರ ರದ್ದು ಪಡಿಸುವದಾಗಿ ಅವರಿಗೆ ತಿಳಿಹೇಳಿ ಹಾಗೂ ರಸ್ತೆಯಲ್ಲಿ ಸಂಭವಿಸುವ ಅಪಘಾತಗಳ ಬಗ್ಗೆ ಹಾಗೂ ಅಪಘಾತಗಳ ತಡೆಯುವ ನಿಟ್ಟಿನಲ್ಲಿ ಯಾವ ಕ್ರಮಗಳು ಕೈಗೊಳ್ಳಬೇಕು ಎಂದು ಅರಿವು ಮೂಡಿಸುವ ಪ್ರಭಂದ, ಚಿತ್ರಕಲಾ ಸ್ಪರ್ಧೆ ಆಯೋಜಿಸಲಾಯಿತು. ಕಾರ್ಯಕ್ರಮ ಹಾಗೂ ಕರಪತ್ರಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಪ್ರಾದೇಶಿಕ ಸಾರಿಗೆ ಇನ್ವೆಕ್ಟರ್ ಚಂದ್ರಶೇಖರ್, ಪ್ರಥಮ ದರ್ಜೆ ಸಹಾಯಕ ಶಿವುಕುಮಾರ, ಶಾಲೆಯ ಶಿಕ್ಷಕರು ವಿದ್ಯಾರ್ಥಿಗಳು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ವೇಮನ ಭಾರತ ಕಂಡ ಖ್ಯಾತ ಸಂತ: ಶಾಸಕ ಚನ್ನಾರಡ್ಡಿ ಪಾಟೀಲ್.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜ:19:ಮಹಾಯೋಗಿ ವೇಮನ ಭಾರತ ಕಂಡ ಖ್ಯಾತ ಸಂತರು, ದಾರ್ಶನಿಕರೆಂದು ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ಬಣ್ಣಿಸಿದರು.

ನಗರದ ಕನ್ನಡ ಸಾಹಿತ್ಯ ಪರಿಷತ್ತು ಸಭಾ ಭವನದಲ್ಲಿ ಭಾನುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಸಂಸ್ಕೃತಿ ಇಲಾಖೆ, ನಗರಸಭೆ ಹಾಗೂ ಮಹಾಯೊಗಿ ವೇಮನ ಜಯಂತ್ಸೋವ ಸಮಿತಿ ಹಾಗೂ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಮಹಾಯೋಗಿ ವೇಮನ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವೇಮನರು ತಾನು ಕಂಡ, ಅನುಭವಿಸಿದ ಸತ್ಯವನ್ನು ಆಡುಭಾಷೆಯಲ್ಲಿ ಸಣ್ಣ,ಸಣ್ಣ ಪದ್ಯಗಳ ಮೂಲಕ ಜನತೆಗೆ ತಿಳಿಸಿ, ಜಾಗೃತಿ ಮೂಡಿಸಿದ್ದರು, ಅವರ ಆದರ್ಶಗಳನ್ನು ಎಲ್ಲರೂ ಪಾಲಿಸಬೇಕೆಂದು ಶಾಸಕರು ಹೇಳಿದರು.

ವಿಶೇಷ ಉಪನ್ಯಾಸ ನೀಡಿದ ಜ್ಯೋತಿಲತಾತಡಿಬಿಡಿ, ಮಹಾಯೋಗಿ ವೇಮನರು ಭಾರತೀಯ ದಾರ್ಶನಿಕ ಸಾಹಿತ್ಯಲೋಕವನ್ನು ಶ್ರೀಮಂತಗೊಳಿಸಿದ ಸಂತಕವಿ. ಕ್ರಾಂತಿಕಾರಿ ಚಿಂತಕ, ಮೂಡನಂಬಿಕೆ ವಿರೋಧಿ, ಸಮಾಜ ಸುಧಾರಕ ಎಂದು ಹೇಳಿದರು.

ಯೂಡಾ ಅಧ್ಯಕ್ಷರಾದ ರವಿ ಮಾಲಿ ಪಾಟೀಲ್, ಅಪರ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಮಠಪತಿ, ವಕಿಲರಾದ ಬವರಾಜ ಪಾಟೀಲ್ ಕ್ಯಾತನಾಳ, ರೆಡ್ಡಿ ಸಮಾಜದ ಉಪಾಧ್ಯಕ್ಷರಾದ ಶರಣಗೌಡ ಪೊಲೀಸ್ ಪಾಟೀಲ್ ಯಡ್ಡಳ್ಳಿ, ಸಾಹೆಬರೆಡ್ಡಿ ಬಿ ದೇಶಪಾಂಡೆ, ನಿಂಗಾರೆಡ್ಡಿ ಯಡ್ಡಳ್ಳಿ ಇದ್ದರು.

ಡಾ. ಸಿದ್ದರಾಜರೆಡ್ಡಿ ಸ್ವಾಗತಿಸಿ ನಿರೂಪಿಸಿದರು.

# ಸಾವಿತ್ರಿಬಾಯಿ ಫುಲೆ ದಿಟ್ಟತನ ಮಾದರಿ-ಗುರುಬಸವ ಪಟ್ಟದ್ದೇವರು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಸಾವಿತ್ರಿಬಾಯಿ ಫುಲೆ ಅವರು ತಮ್ಮ ಜೀವನದುದ್ದಕ್ಕೂ ದೌರ್ಜನ್ಯ, ನಿಂದನೆಯನ್ನು ದಿಟ್ಟತನದಿಂದ ಎದುರಿಸಿ ಸಮಾಜದಲ್ಲಿ ನೊಂದವರ ಪರವಾಗಿ ಧ್ವನಿಯೆತ್ತಿದ್ದರು ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು.

ಕರಡ್ಯಾಳ ಚನ್ನಬಸವೇಶ್ವರ ಗುರುಕುಲದ ಅನುಭವ ಮಂಟಪದಲ್ಲಿ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ವತಿಯಿಂದ ಭಾನುವಾರ ಆಯೋಜಿಸಿದ್ದ ಸಾವಿತ್ರಿಬಾಯಿ ಫುಲೆ ಜಯಂತಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಬುದ್ಧ, ಬಸವಣ್ಣನವರ ವಿಚಾರಧಾರೆ ಸಾವಿತ್ರಿಬಾಯಿ ಫುಲೆ ಅವರು ತಮ್ಮ ಜೀವನದಲ್ಲಿ ಅನುಸರಿಸಿದರು. ಸಮಾಜದಲ್ಲಿ ಅವಮಾನ, ನೋವು, ನಿಂದನೆಯನ್ನು ದಿಟ್ಟತನದಿಂದ ಎದುರಿಸಿ ಮಹಿಳೆಯರಿಗೆ ಶಿಕ್ಷಣ ಕೊಡಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಪ್ರಯತ್ನ ಮಾಡಿದರು. ಅನಿಷ್ಟ ಪದ್ಧತಿಯನ್ನು ಹೋಗಲಾಡಿಸಿದ ಸಾವಿತ್ರಿಬಾಯಿ ಫುಲೆ ಅವರ ಚಿಂತನೆ, ಆದರ್ಶಗಳು ನಮ್ಮೆಲ್ಲರಿಗೆ ಪ್ರೇರಣೆ ಆಗಬೇಕು ಎಂದು ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಪರಿಶಿಷ್ಟ ಜಾತಿ, ಪಂಗಡ ಶಾಲಾ ಶಿಕ್ಷಕರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾಧ್ಯಕ್ಷ ಸಾಗರ ವೈಜಿನಾಥ ಮಾತನಾಡಿ, ಭಾರತದ ಪ್ರಪ್ರಥಮ ಶಿಕ್ಷಕಿ ಎನ್ನುವ ಹೆಗ್ಗಳಿಕೆ ಹೊಂದಿರುವ ಸಾವಿತ್ರಿಬಾಯಿ ಫುಲೆ ಮಹಿಳಾ ಕುಲಕ್ಕೆ ಸ್ಫೂರ್ತಿ ಆಗಿದ್ದಾರೆ ಎಂದು ತಿಳಿಸಿದರು.

ಬಸವಗುರುವಿನ ಪೂಜೆ ನೆರವೇರಿಸಿದ ಸಾವಿತ್ರಿಬಾಯಿ ಫುಲೆ ಶಿಕ್ಷಕಿಯರ ಸಂಘದ ಜಿಲ್ಲಾಧ್ಯಕ್ಷೆ ಸಾರಿಕಾ ಗಂಗಾ ಮಾತನಾಡಿ, ಸಾವಿತ್ರಿಬಾಯಿ ಫುಲೆ ಅವರು ಶಿಕ್ಷಣದ ಜ್ಯೋತಿಯನ್ನು ಹೊತ್ತಿಸಿದರು. ಮಹಿಳೆಯರಿಗಾಗಿ ಪ್ರತ್ಯೇಕ ಶಾಲೆ ತೆರೆದು ಶಿಕ್ಷಣದ ಮಹತ್ವ ಸಾರಿದರು. ವಿಧುವೆಯರ ಮದುವೆಗೆ ಪ್ರೋತ್ಸಾಹಿಸಿದರು. ಅಂತವರ ಜೀವನ, ಸಾಧನೆ ಎಲ್ಲರಿಗೂ ದಾರಿದೀಪ ಆಗಬೇಕು ಎಂದು ತಿಳಿಸಿದರು.

ದಿವ್ಯ ಸಾನ್ನಿಧ್ಯ ವಹಿಸಿದ ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮಾತನಾಡಿ, ಹತ್ಯೆಗೆ ಬಂದ ಹಂತಕರ ಮನ ಪರಿವರ್ತನೆ ಮಾಡಿದ ಶ್ರೇಯಸ್ಸು ಸಾವಿತ್ರಿಬಾಯಿ ಫುಲೆ ಅವರಿಗೆ ಸಲ್ಲುತ್ತದೆ. ಅವರ ಸಾಧನೆ, ಸಾಹಸಕ್ಕೆ ಅಂದಿನ ಬ್ರಿಟಿಷ ಸರಕಾರ ಪುರಸ್ಕಾರ ನೀಡಿ ಗೌರವಿಸಿದೆ. ಪುಣೆಯಲ್ಲಿ ಸಾವಿತ್ರಿಬಾಯಿ ಫುಲೆ ಹೆಸರಿನಲ್ಲಿ ವಿಶ್ವವಿದ್ಯಾಲಯ ಸ್ಥಾಪಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಸಾವಿತ್ರಿಬಾಯಿ ಫುಲೆ ಶಿಕ್ಷಕಿಯರ ಸಂಘದ ಅಧ್ಯಕ್ಷೆ ಕೀರ್ತಿಲತಾ ಹೊಸಾಳೆ, ತಾಲೂಕು ಎಸ್‌ಸಿ, ಎಸ್‌ಟಿ ಸಾವಿತ್ರಿಬಾಯಿ ಫುಲೆ ಸಂಘದ ಅಧ್ಯಕ್ಷೆ ಸರಿತಾಕುಮಾರಿ ಗಾಯಕವಾಡ, ಪ್ರಾಚಾರ್ಯ ಬಸವರಾಜ ಮೊಳಕೀರೆ ಸೇರಿದಂತೆ ಹಲವರು ಇದ್ದರು. ಆಡಳಿತಾಧಿಕಾರಿ ಮೋಹನ ರೆಡ್ಡಿ ಸ್ವಾಗತಿಸಿದರು. ಲಕ್ಷ್ಮಣ ಮೇತ್ರೆ ನಿರೂಪಿಸಿದರು. ಸಿದ್ರಾಮ ಗೊಗ್ಗಾ ವಂದಿಸಿದರು.

**ಮಹೇಶ್ವರಿ ಸ್ವಾಮಿಗೆ ಫುಲೆ ಪ್ರಶಸ್ತಿ**

ಹಿರೇಮಠ ಸಂಸ್ಥಾನದ ವಿದ್ಯಾಪೀಠ ಟ್ರಸ್ಟ್ ವತಿಯಿಂದ ಸ್ಥಾಪಿಸಿದ ಚೊಚ್ಚಲ ಸಾವಿತ್ರಿಬಾಯಿ ಫುಲೆ ಶಿಕ್ಷಣ ಸೇವಾ ಪ್ರಶಸ್ತಿಯನ್ನು ಕಲಬುರಗಿಯ ರಾಜೀವಗಾಂಧಿ ಸ್ಮಾರಕ ಪ್ರೌಢ ಶಾಲೆಯ ಶಿಕ್ಷಕಿ ಮಹೇಶ್ವರಿ ಷಣ್ಮುಖಯ್ಯ ಸ್ವಾಮಿ ಅವರನ್ನು ಪ್ರದಾನ ಮಾಡಲಾಯಿತು. ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ನಿರ್ದೇಶಕಿ ಡಾ.ಗೀತಾ ಈಶ್ವರ ಖಂಡ್ರೆ ಅವರು ಪ್ರಶಸ್ತಿ ಪ್ರದಾನ ಮಾಡಿದರು.

ಸರಸತಿಯಾಗಲೊಲ್ಲೆ ನಾಟಕ ಪ್ರದರ್ಶನ

ವೇದಿಕೆ ಕಾರ್ಯಕ್ರಮದ ನಂತರ ಧಾತ್ರಿ ರಂಗಸಂಸ್ಥೆ ಸಿರಿಗೆರಿ ಸಾದರ ಪಡಿಸುವ ನವೀನ್ ಭೂಮಿ ನಿರ್ದೇಶನದಲ್ಲಿ ಪ್ರದರ್ಶನಗೊಂಡ ಸಾವಿತ್ರಿಬಾಯಿ ಫುಲೆಯವರ ಅಕ್ಷರ ಯಾನ ಸರಸತಿಯಾಗಲೊಲ್ಲೆ ನಾಟಕ ಪ್ರದರ್ಶನ ನೆರೆದ ವಿದ್ಯಾರ್ಥಿಗಳ

ಸಾವಿತ್ರಿಬಾಯಿ ಫುಲೆ ಮಹಾರಾಷ್ಟ್ರದಲ್ಲಿ ಜನಿಸಿದ 19 ನೇ ಶತಮಾನದ ಸಮಾಜ ಸುಧಾರಕಿ. ಅವರು ದೇಶದಲ್ಲಿ ಮಹಿಳಾ ಶಿಕ್ಷಣದ ಹರಿಕಾರರಾಗಿದ್ದರು.

**– ಡಾ.ಬಸವಲಿಂಗ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ**

# ದೈಹಿಕ ಮತ್ತು ಮಾನಸಿಕ ಬೆಳವಣಿಗೆ ಕ್ರೀಡೆಗಳ ಪಾತ್ರ ಅತೀ ಮುಖ್ಯ : ಅಯ್ಯಪ್ಪ



**ಮಲ್ಲಮ್ಮ ನುಡಿ ವಾರ್ತೆ**

ನಾರಾಯಣಪುರ ಸಮೀಪದ ರಾಜನ್ ಕೋಳೂರು ಗ್ರಾಮದಲ್ಲಿ: ಹೆಣ್ಣು ಮಕ್ಕಳು ಕ್ರೀಡೆಯಲ್ಲಿ ಭಾಗವಹಿಸುವುದರಿಂದ ದೈಹಿಕ ಮತ್ತು ಮಾನಸಿಕ ಬೆಳವಣಿಗೆ ವೃದ್ಧಿಯಾಗುವುದು ಎಂದು ಕೊಡೇಕಲ್ ನ ಪಿ.ಎಸ್.ಐ ಅಯ್ಯಪ್ಪ ಅವರು ತಿಳಿಸಿದರು.

ಅವರು ಜಿಲ್ಲಾ ಆಡಳಿತ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ, ತಾಲೂಕ್ ಪಂಚಾಯತ್ ಹುಣಸಗಿ ಮತ್ತು ಗ್ರಾಮ ಪಂಚಾಯತ್ ರಾಜನಕೋಳೂರುಸಹಯೋಗದೊಂದಿಗೆ ರಾಜನಕೋಳೂರ ಗ್ರಾಮದಲ್ಲಿ ಏಲೂಕಖಿ ಸ್ಫೂರ್ತಿ ಯೋಜನೆ ಕಡೆಯಿಂದ ತಾಲೂಕು ಮಟ್ಟದ ಕ್ರೀಡಾಕೂಟ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಇಂದಿನ ದಿನಮಾನಗಳಲ್ಲಿ ಮಹಿಳೆಯರಲ್ಲಿ ಎಲ್ಲಾ ಮುಂದೆ ಬರುತ್ತಲ್ಲಿದ್ದು ಅವರಿಗೆ ಸರಿಯಾದ ರೀತಿಯ ಮಾರ್ಗದರ್ಶನದೊಂದಿಗೆ ಪ್ರೋತ್ಸಾಹ ದೊರೆತಲ್ಲಿ ಅವರು ಎಲ್ಲಾ ರಂಗಗಳಲ್ಲಿ ಮುಂದೆ ಬಂದು ಅವರು ಪುರುಷರಿಗಿಂತ ನಾವೇನು ಕಡಿಮೆ ಇಲ್ಲ ಎನ್ನುವದನ್ನು ಸಾಬೀತು ಪಡಿಸುತ್ತಾರೆ ಎಂದು ತಿಳಿಸಿದರು.

ಜಿಲ್ಲಾ ಏಲೂಕಖಿ ಸಂಯೋಜ-ಕರಾದ ಚಿಂತನ್ ಡಿ ಸೋಜಾ ಆಕಅ ಯಾದಗಿರಿ ಅವರು ಪ್ರಸ್ತಾವಿಕವಾಗಿ ಮಾತನಾಡುತ್ತ ಸ್ಫೂರ್ತಿ ಯೋಜನೆ ಹೆಣ್ಣು ಮಕ್ಕಳ ಬದಲಾವಣೆ ಮತ್ತು ಕ್ರೀಡಾ ಮಹತ್ವ ಬಗ್ಗೆ ತಿಳಿಸುತ್ತ ಸ್ಫೂರ್ತಿ ಯೋಜನೆ ಮೂಲಕ ಕಳೆದ ಎರಡು ವರ್ಷದಲ್ಲಿ ಅತಿ ಹಿಂದುಳಿದ ಭಾಗವೆಂದು ಕರೆಯಲ್ಪಾಡುವ ಈ ಭಾಗದಲ್ಲಿ ಶಿಕ್ಷಣದ ಜೋತೆಗೆ ಹೆಣ್ಣು ಮಕ್ಕಳಲ್ಲಿ ಪೌಷ್ಠಿಕತೆಯ ನಿವಾರಣೆಯಲ್ಲಿ ಆಗಿರುವ ಬದಲಾವಣೆ ಬಗ್ಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಡಾ. ಸಿಮಾ ಕೋರಿ ಕೊಡೇಕಲ್ ಅವರು ಮಾತನಾಡುತ್ತ ಹೆಣ್ಣು ಮಕ್ಕಳಲ್ಲಿ ಉತ್ಸಾಹ ಬರಲು ದೈಹಿಕವಾಗಿ ಸದೃಡರಾಗಲು ಕ್ರೀಡೆಯು ಅತ್ಯಂತ ಮಹತ್ವ ಪಾತ್ರವನ್ನು ವಹಿಸುವುದರ ಜೋತೆಗೆ ಉತ್ತಮ ಆರೋಗ್ಯಕರ ಜೀವನ ನಡೆಸಲು ಸಹಕಾರಿಯಾಗಲ್ಲಿದೆ ಎಂದರು.

ಮಾಜಿ ಜಿಲ್ಲಾ ಪಂಚಾಯತ್ ಸದ್ಯಸರಾದ ಎಚ್.ಸಿ ಪಾಟೀಲ್, ಪ್ರಮುಖರಾದ ಸೋಮನಗೌಡ ಗುಲಬಳ, ಸಂಗನಗೌಡ ಮಗನೂರ್, ರಾಜನ ಕೋಳೂರ ಗ್ರಾ.ಪಂ ಸದಸ್ಯರಾದ ರಾಮನಗೌಡ ವಾಟರ್ ಇವರುಗಳು ಕಾರ್ಯಕ್ರಮವನ್ನು ದೀಪಾ ಬೆಳಗಿಸುವ ಮೂಲಕ ಉದ್ಘಾಟಿಸಿದರು.

ಶಿವರಾಜ್ ಬಿರಾದಾರ್ ಮುಖ್ಯ ಗುರುಗಳ ರಾಜನಕೋಳೂರ ಹೆಣ್ಣು ಮಕ್ಕಳ ಸಬಲೀಕರಣದಲ್ಲಿ ಕ್ರೀಡೆಯ ಮಹತ್ವ ಕೂಡ ಪ್ರಮುಖವಾಗಿತ್ತು ಶಿಕ್ಷಣ ಜೊತೆ ಕ್ರೀಡೆ ಕೂಡ ವಿದ್ಯಾರ್ಥಿಗಳಿಗೆ ತುಂಬಾ ಅವಶ್ಯಕತೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬಸವರಾಜ ಮಂಟೇ ದೈಹಿಕ ಶಿಕ್ಷಕರ ರಾಜನಕೋಳೂರು, ಚಿಂತನ್ ಡಿ ಸೋಜಾ ಆಕಅ ಜಿಲ್ಲಾ ಸಂಯೋಜಕರು ಯಾದಗಿರಿ, ಶಿವರಾಜ ನಾಯಕ ಖಿಅ ತಾಲೂಕು ಸಂಯೋಜ-ಕರು ಹುಣಸಗಿ, ಅನುಸೂಯ ಮುಖ್ಯ ಗುರುಗಳು MPS ರಾಜನಕೋಳೂರು, ರಾಜನಕೋಳೂರ ಗ್ರಾಮದ ಯುವಕರು, ಏಲೂಕಖಿ ಸಿಬ್ಬಂದಿ ವರ್ಗ ಪ್ರತಿ ಗ್ರಾಮ ಪಂಚಾಯತ್ ಮೂಲಕ ದೈಹಿಕ ಶಿಕ್ಷಕರು, ಹುಣಸಗಿ ತಾಲೂಕು ಎಲ್ಲಾ ಗ್ರಾಮ ಪಂಚಾಯತ್ ಸಂಬಂಧಿಸಿದ ಹದಿಹರಿಯದ ಹೆಣ್ಣು ಮಕ್ಕಳ ಭಾಗವಹಿಸಿದರು.

ಕಾರ್ಯಕ್ರಮವನ್ನು ವಿದ್ಯಾ ರಾಜನಕೋಳೂರ ಸ್ವಾಗತಿಸಿ, ರೇಣುಕಾ ನಿರೂಪಿಸಿ, ಏಲೂಕಖಿ ತಾಲೂಕು ಸಂಯೋಜಕರಾದ ಶಿವರಾಜ ನಾಯಕ ವಂದಿಸಿದರು.

ಬಳ್ಳಾರಿಯಲ್ಲಿ ಸಂಭ್ರಮದ ಮಹಾಯೋಗಿ ವೇಮನ 613 ನೇ ಜಯಂತ್ಯೋತ್ಸವ

# ಮಾನವ ಕುಲದ ಏಳಿಗೆಗಾಗಿ ಶ್ರಮಿಸಿದ ವೇಮನರ ಬದುಕು, ಬರಹ ಸ್ಫೂರ್ತಿದಾಯಕ: ಶಾಸಕ ನಾರಾ ಭರತ್ ರೆಡ್ಡಿ



**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.20: ಶ್ರೇಷ್ಠ ವಚನಕಾರ, ಕವಿ ಸಮಾಜ ಚಿಂತಕರು, ಮಾನವ ಕುಲದ ಏಳಿಗೆಗಾಗಿ ಶ್ರಮಿಸಿದ ಮಹಾಯೋಗಿ ವೇಮನ ಅವರ ಬದುಕು, ಬರಹ ಸ್ಫೂರ್ತಿದಾಯಕ. ಅವರ ವಚನಗಳ ತತ್ವಗಳನ್ನು ಅಳವಡಿಸಿಕೊಂಡು ಸಮಾಜದ ಏಳಿಗೆಗಾಗಿ ನಾವೆಲ್ಲರೂ ಶ್ರಮಿಸಬೇಕು ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡರಂಗಮಂದಿರದಲ್ಲಿ ಭಾನುವಾರ ಏರ್ಪಡಿಸಿದ್ದ ಮಹಾಯೋಗಿ ವೇಮನ ಜಯಂತಿ ಕಾರ್ಯಕ್ರಮವನ್ನು ವೇಮನರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ರೆಡ್ಡಿ ಸಮುದಾಯದವರು ಆರ್ಥಿಕವಾಗಿ ಸಬಲರು. ಸಂಕಷ್ಟದಲ್ಲಿರುವ ಜನರಿಗೆ ತಕ್ಷಣ ಆರ್ಥಿಕವಾಗಿ ನೆರವಾಗುವ ಸಹಾಯ ಮನೋಭಾವನೆ ಮತ್ತು ನಾಯಕತ್ವದ ಗುಣ ರೆಡ್ಡಿ ಸಮುದಾಯವರು ಹೊಂದಿದ್ದಾರೆ. ನನ್ನ ರಾಜಕೀಯ ಬೆಳವಣಿಗೆಗೆ ಇತರೆ ಸಮಾಜಗಳಂತೆ ರೆಡ್ಡಿ ಸಮುದಾಯದವರ ಸಹಕಾರವೂ ಇದೆ ಎಂದರು. ನಗರದ ತಾಳೂರು ರಸ್ತೆಗೆ ಮಹಾಯೋಗಿ ವೇಮನರ ಹೆಸರು ನಾಮಕರಣ ಮಾಡುವ ಕುರಿತು ಈಗಾಗಲೇ ಪಾಲಿಕೆಯ ಸಾಮಾನ್ಯ ಸಭೆಯಲ್ಲಿ ಚರ್ಚಿಸಲಾಗಿದ್ದು, ಆದಷ್ಟು ಶೀಘ್ರವಾಗಿ ಕಾರ್ಯರೂಪಕ್ಕೆ ತರಲಾಗುವುದು ಎಂದರು. ಬಳ್ಳಾರಿಯಲ್ಲಿ ರೆಡ್ಡಿ ಸಮುದಾಯದ ಹೆಣ್ಣುಮಕ್ಕಳಿಗೆ ವಸತಿ ನಿಲಯ ನಿರ್ಮಿಸಲು ರಾಜ್ಯ ಸರ್ಕಾರದ ಗಮನಕ್ಕೆ ತರಲಾಗುವುದು. ನಗರದಲ್ಲಿ ರೆಡ್ಡಿ ಭವನದ ನಿರ್ಮಾಣ ಕಾರ್ಯ ಪೂರ್ಣಗೊಳ್ಳುವ ಹಂತದಲ್ಲಿದ್ದು, ಶೀಘ್ರದಲ್ಲಿ ಉದ್ಘಾಟನೆಯಾಗಲಿದೆ ಎಂದು ಹೇಳಿದರು.

ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್ ಅವರು ಮಾತನಾಡಿ, 15 ನೇ ಶತಮಾನದ ವಚನಕಾರರಾದ ಮಹಾಯೋಗಿ ವೇಮನ ವಚನಗಳು ಸಮಾಜಕ್ಕೆ ಬಹಳಷ್ಟು ಕೊಡುಗೆ ನೀಡಿವೆ ಹಾಗೂ ಅವರ ತತ್ವಗಳನ್ನು ನಾವೆಲ್ಲರೂ ಪಾಲಿಸೋಣ ಎಂದರು. ಶ್ರೀ ಸತ್ಯಂ ಶಿಕ್ಷಣ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಅಲ್ಲಂ ಭಾಷ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಜನಸಾಮಾನ್ಯ ಕವಿಯಾದ ಯೋಗಿ ವೇಮನರು ಜಾತೀಯತೆ, ಅಂಧ ಶ್ರದ್ಧೆ, ಮೇಲು-ಕೀಳುಗಳನ್ನು ತಮ್ಮ ಕಾವ್ಯದ ಮೂಲಕ ಧಿಕ್ಕರಿಸಿದವರು ಮತ್ತು ಅಪೂರ್ವ ಸಮಾಜ ಸುಧಾರಕರು ಎಂದು ತಿಳಿಸಿದರು. ಆಂಧ್ರಪ್ರದೇಶದ ಗುಂಟೂರ ಜಿಲ್ಲೆಯ ಕೊಂಡವೀಡು ಗ್ರಾಮದಲ್ಲಿ ಕ್ರಿ.ಶ. 1412ರಲ್ಲಿ ತಂದೆ ಕುಮಾರಗಿರಿರೆಡ್ಡಿ ಹಾಗೂ ತಾಯಿ ರಾಣಿ ಮಲ್ಲಮಾಂಬೆ ಇವರ ಮಗನಾಗಿ ಜನಿಸಿದವರು. ಮಹಾಯೋಗಿ ವೇಮನರು ಸರಳತೆಯಿಂದ ಬದುಕಿ, ಸಂತ ಜೀವನಕ್ಕೆ ಮಾದರಿ ಎನಿಸಿಕೊಂಡಿದ್ದವರು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಬಳ್ಳಾರಿಯ ಎನ್.ಬಸವರಾಜು ಮತ್ತು ತಂಡದಿಂದ ಸುಗಮ ಸಂಗೀತ ಹಾಗೂ ವೇಮನ ಪದ್ಯಗಳನ್ನು ಪ್ರಸ್ತುತಪಡಿಸಿದರು. ಈ ಸಂದರ್ಭದಲ್ಲಿ ಮಾಜಿ ಶಾಸಕ ಜಿ.ಸೋಮಶೇಖರ್ ರೆಡ್ಡಿ, ಜಿಲ್ಲಾ ಶಸ್ತ್ರಚಿಕಿತ್ಸಕ ಎನ್.ಬಸರೆಡ್ಡಿ, ರೆಡ್ಡಿ ಜನಸಂಘ ಜಿಲ್ಲಾ ಅಧ್ಯಕ್ಷ ಎನ್.ಪ್ರತಾಪ್ ರೆಡ್ಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಮಹಾನಗರ ಪಾಲಿಕೆಯ ಸದಸ್ಯರು, ಸಮಾಜದ ಮುಖಂಡರು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಸಂಭ್ರಮದ ಮೆರವಣಿಗೆ: ಮಹಾಯೋಗಿ ವೇಮನ ಜಯಂತಿಯ ಅಂಗವಾಗಿ ನಗರದ ಡಾ.ರಾಜ್‌ಕುಮಾರ್ ರಸ್ತೆಯ ರೆಡ್ಡಿ ಜನ ಸಂಘ ಭವನದ ಆವರಣದಿಂದ ಆಯೋಜಿಸಿದ್ದ ಮೆರವಣಿಗೆಯು ವೀರಗಾಸೆ, ಡೊಳ್ಳುಕುಣಿತ, ಕಂಸಾಳೆ ವಾದ್ಯ ಸೇರಿದಂತೆ ಇತರೆ ಸಾಂಸ್ಕೃತಿಕ ಕಲಾತಂಡಗಳಿಂದ ಅದ್ದೂರಿ ಮೆರವಣಿಗೆ ನಡೆಯಿತು. ಮೆರವಣಿಗೆಯು ರೆಡ್ಡಿ ಜನ ಸಂಘ ಭವನದ ಆವರಣದಿಂದ ಆರಂಭವಾಗಿ ಇಂದಿರಾ ವೃತ್ತದಿಂದ, ಗಡಗಿ ಚೆನ್ನಪ್ಪ ವೃತ, ಬೆಂಗಳೂರು ರಸ್ತೆ, ತೇರು ಬೀದಿ, ಜೈನ್ ಮಾರ್ಕೆಟ್, ಹೆಚ್.ಆರ್.ಗವಿಯಪ್ಪ ವೃತದ ಮೂಲಕ ಡಾ.ಜೋಳದ ರಾಶಿ ದೊಡ್ಡನಗೌಡ ರಂಗಮಂದಿರಕ್ಕೆ ತಲುಪಿ ಸಂಪನ್ನಗೊಂಡಿತು.

# ಸೈಬರ್ ವಂಚನೆಯಿಂದ ಜಾಗೃತರಾಗಿರಿ: ಐಜಿಪಿ ಬಿ.ಎಸ್.ಲೋಕೇಶ್ ಕುಮಾರ್ ಕರೆ



**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.20: ಇಂದಿನ ಡಿಜಿಟಲ್ ಯುಗದಲ್ಲಿ ಯುವ ಸಮುದಾಯ ಸೇರಿದಂತೆ ಸಾರ್ವಜನಿಕರು ಸೈಬರ್ ವಂಚನೆಯಿಂದ ಜಾಗೃತರಾಗಬೇಕು ಎಂದು ಬಳ್ಳಾರಿ ವಲಯ ಪೊಲೀಸ್ ಮಹಾನಿರೀಕ್ಷಕ ಬಿ.ಎಸ್.ಲೋಕೇಶ್ ಕುಮಾರ್ ಅವರು ಕರೆ ನೀಡಿದರು.

ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಸೈಬರ್ ಸುರಕ್ಷತೆ, ಮಹಿಳಾ ಮತ್ತು ಮಕ್ಕಳ ಸುರಕ್ಷತೆ, ರಸ್ತೆ ಸುರಕ್ಷತೆ, ಡ್ರಗ್ಸ್ ಮುಕ್ತ ಕರ್ನಾಟಕಕ್ಕಾಗಿ ಸಾರ್ವಜನಿಕರಿಗೆ ಅರಿವು ಮೂಡಿಸಲು ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನದ ಆವರಣದಲ್ಲಿ ಭಾನುವಾರ ಆಯೋಜಿಸಿದ್ದ 'ಜನಜಾಗೃತಿ ಓಟ'ಗೆ ಚಾಲನೆ ನೀಡಿ, ಬಳಿಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇಂದು ಸೈಬರ್ ಅಪರಾಧ ಪ್ರಕರಣಗಳ ಸಂಖ್ಯೆ ಏರಿಕೆಯಾಗುತ್ತಿದೆ. ಇತ್ತೀಚಿನ ದಿನಗಳಲ್ಲಿ ಸೈಬರ್ ಅಪರಾಧಗಳಿಗೆ ವಿದ್ಯಾವಂತರೂ ಬಲಿಯಾಗುತ್ತಿದ್ದಾರೆ. ಈ ಬಗ್ಗೆ ಪ್ರತಿಯೊಬ್ಬರೂ ಎಚ್ಚರ ವಹಿಸಬೇಕು ಎಂದು ತಿಳಿಸಿದರು. ಯಾವುದೇ ಅಪರಿಚಿತ ಕರೆ ಬಂದಲ್ಲಿ ಪ್ರತಿಕ್ರಿಯಿಸಬಾರದು. ಮೋಸಕ್ಕೆ ಬಲಿಯಾಗಿ, ಹಣ ಕಳೆದುಕೊಳ್ಳಬೇಡಿ; ಇದರಿಂದ ಮಾನಸಿಕ ನೆಮ್ಮದಿಯೂ ಹಾಳಾಗುತ್ತದೆ ಎಂದು ತಿಳಿಸಿದರು. ವಾಹನ ಸವಾರರು ತಪ್ಪದೇ ಸಂಚಾರಿ ನಿಯಮಗಳನ್ನು ಪಾಲನೆ ಮಾಡಬೇಕು. ಯುವ ಸಮುದಾಯ ಮಾದಕ ವಸ್ತುಗಳಿಂದ ದೂರವಿರಬೇಕು ಎಂದು ಅವರು ಹೇಳಿದರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಮಾತನಾಡಿ, ಯುವ ಸಮೂಹ ಸೇರಿದಂತೆ ಮೊಬೈಲ್ ಬಳಸುವ ಪ್ರತಿಯೊಬ್ಬರೂ ಜಾಗೃತರಾಗಿರಬೇಕು. ಸೈಬರ್ ವಂಚನೆಗೆ ಒಳಗಾಗದಂತೆ ನಿಮ್ಮರಿಗೂ, ನಿಮ್ಮ ಸುತ್ತಮುತ್ತಲಿನವರಿಗೂ ಈ ಕುರಿತ ಜಾಗೃತಿ ನೀಡಬೇಕು ಎಂದು ಹೇಳಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ ಅವರು ಮಾತನಾಡಿ, ಸೈಬರ್ ಸುರಕ್ಷತೆ, ಮಹಿಳಾ ಮತ್ತು ಮಕ್ಕಳ ಸುರಕ್ಷತೆ, ರಸ್ತೆ ಸುರಕ್ಷತೆ, ಡ್ರಗ್ಸ್ ಮುಕ್ತ ಕರ್ನಾಟಕಕ್ಕಾಗಿ ಸಾರ್ವಜನಿಕರಿಗೆ ಅರಿವು ಮೂಡಿಸಲು ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಇದೇ ವೇಳೆ ರಸ್ತೆ ಸಂಚಾರಿ ನಿಯಮಗಳನ್ನು ತಪ್ಪದೇ ಪಾಲಿಸುತ್ತೇನೆ ಎಂದು ಪ್ರತಿಜ್ಞೆ ಕೈಗೊಳ್ಳುವ ಆನ್ ಲೈನ್ ಆಪ್ ಕ್ಯೂರ್ ಆರ್ ಕೋಡ್ ಅನ್ನು ಬಿಡುಗಡೆಗೊಳಿಸಲಾಯಿತು. ಜನ ಜಾಗೃತಿ ಓಟವು ನಗರದ ನೂತನ ಜಿಲ್ಲಾಡಳಿತ ಭವನದ ಆವರಣದಿಂದ ಆರಂಭಗೊಂಡು ಗಡಿಗಿ ಚೆನ್ನಪ್ಪ ವೃತ್ತ, ಹಳೇ ತಾಲ್ಲೂಕು ಕಚೇರಿ ರಸ್ತೆ, ಹೆಚ್.ಆರ್.ಗವಿಯಪ್ಪ (ಮೋತಿ ಸರ್ಕಲ್), ವಾಲ್ಮೀಕಿ ಸರ್ಕಲ್, ಕನಕದುರ್ಗಮ್ಮ ದೇವಸ್ಥಾನದಿಂದ ಹಳೇ ಬಸ್ ನಿಲ್ದಾಣ ಮುಖಾಂತರ ಮರಳಿ ನೂತನ ಜಿಲ್ಲಾಡಳಿತ ಭವನದ ಆವರಣದವರೆಗೆ ನಡೆಯಿತು. ಓಟದಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ವಿಜೇತರಿಗೆ ಬಹುಮಾನ ಮತ್ತು ಪ್ರಮಾಣ ಪತ್ರ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಎಎಸ್ಪಿ ನವೀನ್ ಕುಮಾರ್, ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವ ವಿದ್ಯಾಲಯದ ಕುಲಸಚಿವ ಎಸ್.ಎನ್.ರುದ್ರೇಶ್ ಸೇರಿದಂತೆ ಅಧಿಕಾರಿಗಳು, ಕ್ರೀಡಾಪಟುಗಳು, ಸಾರ್ವಜನಿಕರು ಭಾಗವಹಿಸಿದ್ದರು.

# ಹಾಸ್ಟಲ್ ನಲ್ಲಿ ಕಳಪೆ ಆಹಾರವಾರ್ಡನ್ ಶೇಖಣ್ಣ ಅಮಾನತಿಗೆ ಉಪ ಲೋಕಾಯುಕ್ತ ಆದೇಶ



**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.20: ನಗರದ ಮಯೂರ ಹೋಟೇಲ್ ಹಿಂಭಾಗದಲ್ಲಿನ ಪರಿಶಿಷ್ಟ ಸಮುದಾಯದ ವಿದ್ಯಾರ್ಥಿಗಳ ಹಾಸ್ಟಲ್ ನಲ್ಲಿ ಕಳಪೆ ಗುಣಮಟ್ಟದ ಆಹಾರ ನೀಡುತ್ತಿರುವುದು ಸೇರಿದಂತೆ ಅನೇಕ ವಿಷಯಗಳನ್ನು ಇಂದು ಬೆಳಿಗ್ಗೆ ಪರಿಶೀಲನೆ ನಡೆಸಿದ ಉಪ ಲೋಕಾಯುಕ್ತ ಬಿ.ವೀರಪ್ಪ ಅವರು ಹಾಸ್ಟಲ್ ವಾರ್ಡನ್ ಶೇಖಣ್ಣ ಅವರನ್ನು ಅಮಾನತು ಮಾಡುವಂತೆ ಆದೇಶ ಮಾಡಿದರು. ಶಾಲಾ ಮಕ್ಕಳ ಹಾಸ್ಟಲ್ ನಲ್ಲಿ ಮಕ್ಕಳಿಂದಲೇ ಶೌಚಾಲಯ ಕ್ಲೀನ್ ಮಾಡಿಸಲಾಗುತ್ತಿದೆಯಂತೆ. ಆದರೆ ವಾರ್ಡ್ ನ್ ಇಲ್ಲ ಸಾರ್ ಮಾಯಪ್ಪ ಎಂಬುವವರು ಮಾಡುತ್ತಾರೆಂದು ಹೇಳಿದ ಅವರಿಗೆ ಸರ್ಕಾರ 2500 ನೀಡಿದರೆ ನೀನು ಐದು ಸಾವಿರ ಹೇಗೆ ನೀಡುತ್ತೀಯ, ನಿನ್ನ ಕೈನಿಂದ ಕೊಡುವೆಯಾ ಎಂಬ ಪ್ರಶ್ನೆಗೆ ಉತ್ತರವಿಲ್ಲ. ಇನ್ನು ಈ ಹಾಸ್ಡಲ್ ನಲ್ಲಿ ಸಂಗ್ರಹಿಸಿ ಇಟ್ಟಿದ್ದ ಕಾಳು, ಅಕ್ಕಿ, ರವೆಯಲ್ಲಿ ಹುಳುಗಳು ಇರುವುದನ್ನು ಕಂಡು ಲೋಕಾಯುಕ್ತರು ಕೆಂಡ ಮಂಡಲರಾಗಿ, ನಾವು ಬರುವುದು ಗೊತ್ತಿದ್ದು ಇಂತಹದನ್ನು ಕೊಡುತ್ತಿದ್ದೀರಿ ಎಂದರೆ ಬೇರೆ ದಿನದಲ್ಲಿ ಹೇಗೆ. ಇಂತಹ ಆಹಾರ ಮಕ್ಕಳಿಗೆ ನೀಡಿದರೆ ಹೇಗೆ ಎಂದರು. ಮಕ್ಕಳಿಗೆ ನೀಡುವ ಹಾಲನ್ನು ಕಡಿಮೆ ಪ್ರಮಾಣದಲ್ಲಿ ನೀಡಲಾಗುತ್ತದೆಂಬ ದೂರು ಬಂದಿರುವುದಾಗಿ ತಿಂಗಳಿಗೆ 240 ಲೀಟರ್ ಹಾಲು ಖರೀದಿಗೆ ಕೇವಲ 150 ಲೀಟರ್ ಖರೀದಿ ಮಾಡಿದರೆ ಹೆಂಗೆ ಎಂದರು. ಪಕ್ಕದಲ್ಲಿನ ಕಾಲೇಜು ವಿದ್ಯಾರ್ಥಿಗಳ ಹಾಸ್ಟಲ್ ಪರೀಶೀಲನೆ ನಡೆಸಿದಾಗ ಅಲ್ಲಿನ ವಿದ್ಯಾರ್ಥಿಗಳು ವಾರ್ಡ್ ನ್ ವಾರಕ್ಕೊಮ್ಮೆ ಬರುತ್ತಾರೆ. ನೀವು ಬರುತ್ತೀರೆಂದು ಈಗ ಎರೆಡು ದಿನದಿಂದ ಊಟ ಚೆನ್ನಾಗಿ ಮಾಡುತ್ತಿದ್ದಾರೆ. ಇಲ್ಲದಿದ್ದರೆ ನೀರು ಸಾರ್, ಹುಳಹುಪ್ಪಡಿಯ ಅನ್ನ, ವಾಸನೆ ಬರುವ ಮಾಂಸ ಇದೇ ನಮಗೆ ಗತಿ ಎಂದು ದೂರಿದರು. ಬಿಸಿನೀರಿನ ವ್ಯವಸ್ಥೆ ಇಲ್ಲ ಎಂದರು. ಇದೆಲ್ಲವುದನ್ನು ಕಂಡು ನೀವು ಮನುಷ್ಯರೋ, ನಿಮಗೆ ಮಾನವೀಯತೆ ಇಲ್ವಾ ಎಂದು ಪ್ರಶ್ನಿಸಿ. ಅಮಾನತು ಮಾಡಲು ಸೂಚಿಸಿದರು.

# ಗಾಳಿಪಟ ಮಹತ್ವ ಕುರಿತು ವಿಶ್ಲೇಷಣೆ




**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ, ಜ.20: ಗಾಳಿಯ ಸಹಾಯದಿಂದ ಹಾರುವ ದಾರದ ನಿಯಂತ್ರಣಕ್ಕೆ ಒಳಪಡುವ ಸಾಧನವೇ ಗಾಳಿಪಟ ಎಂದು ಕರ್ನಾಟಕ ರಾಜ್ಯ ಕ್ರಿಯಾಶೀಲ ಶಿಕ್ಷಕರ ವೇದಿಕೆ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷ ರವಿಚೇಳ್ಳಗುರ್ಕಿ ಹೇಳಿದರು. ತಾಲೂಕಿನ ಸಂಜೀವರಾಯನಕೋಟೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಂಕ್ರಾಂತಿ ಹಬ್ಬದ ಪ್ರಯುಕ್ತ ಗಾಳಿಪಟ ವಿಶೇಷತೆ ಮತ್ತು ಪ್ರದರ್ಶನ ಉದ್ಘಾಟಿಸಿ ಮಾತನಾಡಿದರು. ಬಣ್ಣದ ಕಾಗದ, ತೆಳು ಪ್ಲಾಸ್ಟಿಕ್, ಬಟ್ಟೆ, ಬಿದಿರಿನ ಕಡ್ಡಿ ಬಳಸಿ, ಅಗತ್ಯ ಸೂತ್ರದೊಂದಿಗೆ ತಯಾರಿಸುತ್ತಾರೆ. ಆಟವಾಗಿಯು, ಸ್ಪರ್ಧೆಯಾಗಿಯು, ಕಲೆಯಾಗಿಯು, ಸಂಕೇತವಾಗಿಯು ಹಾರಿಸುವ ಪದ್ಧತಿ ಇದೆ. ಭಾರತದಲ್ಲಿ ಮಕರಸಂಕ್ರಾಂತಿ ಹಬ್ಬದಂದು ಸಂಭ್ರಮದಲ್ಲಿ ಹಾರಿಸುತ್ತಾರೆ. ಊರಹೊರಗಿನ ಬಯಲು ಪ್ರದೇಶ, ಸಮುದ್ರ ದಂಡೆಯಲ್ಲಿ ಹಾರಿಸುವುದು ರೂಡಿ. ಹೆಚ್ಚು ಎತ್ತರಕ್ಕೆ ಹಾರುವಂತೆ ಮಾಡಲು ಬಾಲಂಗೋಚಿ ಬಳಸುತ್ತಾರೆ. ಇದನ್ನು ಐದನೇ ಶತಮಾದಲ್ಲಿ ಚೀನಾ ದೇಶದಲ್ಲಿ ಕಂಡುಹಿಡಿಯಲಾಯಿತು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಶಿಕ್ಷಕರಾದ ರಾಮಾಂಜಿನೇಯ ನಲಿಕಲಿ ವಿದ್ಯಾರ್ಥಿನಿ ಮಂದಾರಗೆ ಬಹುಮಾನ ವಿತರಿಸಿದರು. ಶಿಕ್ಷಕರಾದ ದಿಲ್ಷಾದ್ ಬೇಗಂ, ಚನ್ನಮ್ಮ, ಸುಮತಿ, ವೈಶಾಲಿ, ಶ್ವೇತಾ, ಉಮ್ಮೇಹಾನಿ, ಶಶಮ್ಮ, ಗುರುಪ್ರಸಾದ್, ವಿಜಯ ಮುಂಡ್ರಿಗಿ, ವಿದ್ಯಾರ್ಥಿ ಪ್ರತಿನಿಧಿ ಕೆ.ಎಸ್. ಅನುಷ, ರೋಜ ಮುಂತಾದವರು ಉಪಸ್ಥಿತರಿದ್ದರು.

# ದಾಸೋಹ ದಿನ: ಕೈಲಾದಷ್ಟು ದಾಸೋಹ ಮಾಡಲು ಮನವಿ

**ಮಲ್ಲಮ್ಮ ನುಡಿ ವಾರ್ತೆ**

ಭಾಲ್ಕಿ: ತ್ರಿವಿಧ ದಾಸೋಹಿ, ಮಾನವೀಯತೆಯ ನೈಜ ಪರಿಪಾಲಕ ತುಮಕೂರಿನ ಶಿವಕುಮಾರಮಹಾಸ್ವಾಮೀಜಿಯ 6ನೇ ಪುಣ್ಯ ಸ್ಮರಣೆ ನಿಮಿತ್ತ ಜನವರಿ 21ರಂದು ಭಕ್ತರು ಪೂಜ್ಯರ ಹೆಸರಿನಲ್ಲಿ ಕೈಲಾದಷ್ಟು ದಾಸೋಹ ಮಾಡುವುದರ ಮೂಲಕ ದಾಸೋಹ ದಿನ ಆಚರಿಸಬೇಕು ಎಂದು ಶ್ರೀ ಸಿದ್ಧಗಂಗಾ ಹಳೇ ವಿದ್ಯಾರ್ಥಿಗಳ ಹಾಗೂ ಹಿತೈಷಿಗಳ ಸಂಘದ



ಜಿಲ್ಲಾಧ್ಯಕ್ಷ ಶಿವಕುಮಾರ್ ಪಾಟೀಲ ತೇಗಂಪೂರ ತಿಳಿಸಿದ್ದಾರೆ. ಲಕ್ಷಾಂತರ ವಿದ್ಯಾರ್ಥಿಗಳಿಗೆ ಅನ್ನ, ಆಶ್ರಯ, ಶಿಕ್ಷಣ ನೀಡಿ ಸಾವಿರಾರೂ ವಿದ್ಯಾರ್ಥಿಗಳ ಬಾಳು ಬೆಳಗಿರುವ ಶಿವಕುಮಾರ ಸ್ವಾಮೀಜಿ ನಡೆದಾಡುವ ದೇವರು ಆಗಿದ್ದರು. ಜಿಲ್ಲೆಯಲ್ಲಿರುವ ಶಿವಕುಮಾರ ಸ್ವಾಮೀಜಿ ಅವರ ಭಕ್ತರು, ಸಿದ್ಧಗಂಗಾದ ಹಳೇ ವಿದ್ಯಾರ್ಥಿಗಳು ತಮ್ಮ ಕೈಲಾದಷ್ಟು ದಾಸೋಹ ಮಾಡುವುದರ ಮೂಲಕ ಮೂರನೇ ಪುಣ್ಯ ಸ್ಮರಣೆಯನ್ನು ಅರ್ಥಪೂರ್ಣವಾಗಿ ಆಚರಿಸಬೇಕು ಎಂದು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# "ನಗರೋತ್ಥಾನ ಯೋಜನೆಯಡಿ ಕಾಮಗಾರಿ ಗುಣಮಟ್ಟತೆ ಆಧಾರದ ಮೇಲೆ ಅನುದಾನ ನೀಡಿ" ಪೌರಾಡಳಿತ ಹಾಗೂ ಹಜ್ ಸಚಿವ ರಹೀಂ ಖಾನ್



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜ:20-ನಗರೋತ್ಥಾನ ಯೋಜನೆಯಡಿ ಗುಣಮಟ್ಟದ, ಸಮರ್ಪಕ ಕಾಮಗಾರಿ ಆಧಾರದ ಮೇಲೆ ಅನುದಾನ ಮಂಜೂರು ಮಾಡುವಂತೆ ಪೌರಾಡಳಿತ ಹಾಗೂ ಹಜ್ ಖಾತೆ ಸಚಿವರಾದ ಶ್ರೀ ರಹೀಂ ಖಾನ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು ನಗರ ಸ್ಥಳೀಯ ಸಂಸ್ಥೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ನಗರೋತ್ಥಾನ ಹಂತ- 3ರ ಕಾಮಗಾರಿಗಳು ಪೂರ್ಣಗೊಂಡಿವೆ. ನಗರೋತ್ಥಾನ ಹಂತ-4ರ ಅಡಿಯಲ್ಲಿ ಬಾಕಿ ಇರುವ ಕಾಮಗಾರಿಗಳನ್ನು ಆದ್ಯತೆ ಮೇಲೆ ಪೂರ್ಣಗೊಳಿಸಬೇಕು. ಗುಣಮಟ್ಟದ ಕಾಮಗಾರಿಗಳ ಕುರಿತು ಜಿಲ್ಲಾಧಿಕಾರಿಗಳು ಮತ್ತು ಶಾಸಕರ ಸಮೀಕ್ಷೆ ಆಧಾರದ ಮೇಲೆ ಗುಣಮಟ್ಟದ, ತೃಪ್ತಿಕರ ಕೆಲಸ ಪರಿಶೀಲಿಸಿ ಅನುದಾನ ಬಿಡುಗಡೆ ಮಾಡುವಂತೆ ಸೂಚನೆ ನೀಡಿದರು.

ಜಿಲ್ಲೆಯ ಶಹಾಪುರ,ಸ ುರಪುರ,ಗುರುಮಠಕಲ್,ಕೆಂಬ ಾವಿ ನಗರಸ್ಥಳಿಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನಗರೋತ್ಥಾನ ಯೋಜನೆಯ ಸುಮಾರು 9 ಕೋ.ರೂಗಳಿಗೂ ಹೆಚ್ಚು ವೆಚ್ಚದ ಒಟ್ಟು ಆರು ಕಾಮಗಾರಿಗಳನ್ನು ಕರ್ನಾಟಕ ನಗರ ನೀರು ಸರಬರಾಜು ಇಲಾಖೆ ಮೂಲಕದ ಕಾಮಗಾರಿಗಳಿಗೆ ಅನುದಾನ ಒದಗಿಸಲು ಸೂಚಿಸಲಾಗಿದೆ. ಈವರೆಗೆ ಈ ಕುರಿತು ಕ್ರಮ ಆಗದೇ ಇರುವುದರಿಂದ ತಕ್ಷಣ ಸಂಬಂಧಪಟ್ಟ ಅಧಿಕಾರಿಗಳು ಪೌರಾಡಳಿತ ಇಲಾಖೆಯ ಗಮನಕ್ಕೆ ತಂದು ನಗರ ನೀರು ಸರಬರಾಜು ಇಲಾಖೆಗೆ ಅನುದಾನ ಹಸ್ತಾಂತರಿಸುವ ಬಗ್ಗೆ ಕ್ರಮ ಕೈಗೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸುರಪುರದಲ್ಲಿ ಒಳಚರಂಡಿ ಯೋಜನೆ ಭಾಗಶಃ ಪೂರ್ಣಗೊಂಡಿದೆ. ಪುನರ್ನವೀಕರಣ ಕಾಮಗಾರಿಗೆ ಸಂಬಂಧಪಟ್ಟಂತೆ 50 ಕೋಟಿ.ರೂ ವೆಚ್ಚದ ಡಿಪಿಆರ್ ಸಲ್ಲಿಸಲಾಗಿದೆ. ಈ ಕುರಿತು ಕ್ರಿಯಾಯೋಜನೆ ಶೀಘ್ರ ಸಲ್ಲಿಸಿ ಕಾಮಗಾರಿ ಪೂರ್ಣಗೊಳಿಸಲು ಪ್ರಯತ್ನಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ವಿವಿಧ ನಗರಸ್ಥಳಿಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸಿಬ್ಬಂದಿ ಕೊರತೆ ನೀಗಿಸಲು ಖಾಲಿ ಹುದ್ದೆಗಳಿಗೆ ಸಂಬಂಧಪಟ್ಟಂತೆ ಸೂಕ್ತ ವರದಿಯನ್ನು ಸಲ್ಲಿಸಬೇಕು. ಈ ಕುರಿತು ಪೌರಾಡಳಿತ ಇಲಾಖೆಯ ಗಮನಕ್ಕೆ ತಂದು ಸಮಸ್ಯೆ ಪರಿಹರಿಸಲು ತಿಳಿಸಿದರು.

ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪುರ ಅವರು ನಗರೋತ್ಥಾನ ಯೋಜನೆಯಡಿ ಸಮರ್ಪಕ ಪ್ರಸ್ತಾವನೆಯನ್ನು ಸಲ್ಲಿಸಬೇಕು. ಖಾಲಿ ಹುದ್ದೆ ಗಳ ಭರ್ತಿ ಗೆ ಸಂಬಂಧಿಸಿದಂತೆ ಪೌರಾಡಳಿತ ಇಲಾಖೆ ಹಾಗೂ ಹಣಕಾಸು ಇಲಾಖೆ ಅನುಮತಿ ಕುರಿತು. ಸ್ಪಷ್ಟತೆಯನ್ನು ಮಾಡಿಕೊಳ್ಳಬೇಕು.ಎಸ್.ಎಫ್.ಸಿ ಯೋಜನೆ,15ನೇ ಹಣಕಾಸು ಆಯೋಗದ ಯೋಜನೆ ಸೇರಿದಂತೆ ವಿವಿಧ ಯೋಜನೆಗಳಡಿ ಸೂಕ್ತ ಪ್ರಗತಿ ಸಾಧಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಶಾಸಕರಾದ ಚನ್ನಾರಡ್ಡಿ ಪಾಟೀಲ್ ತುನ್ನೂರ್,ಶರಣಗೌಡ ಕಂದಕೂರ, ವೇಣುಗೋಪಾಲ್ ನಾಯಕ, ಪ್ರಭಾರಿ ಜಿಲ್ಲಾಧಿಕಾರಿ ಲವೀಶ ಒರಡಿಯಾ, ಕಾರ್ಯಪಾಲಕ ಅಭಿಯಂತರ ವಿಶ್ವನಾಥ್,ಪೌರಾಡಳಿತ ಸಚಿವರ ಆಪ್ತ ಕಾರ್ಯದರ್ಶಿ ಕೆ.ಮುರಲಿಧರ ಉಪಸ್ಥಿತರಿದ್ದರು.

# ಪಕ್ಷಕ್ಕಾಗಿ ದುಡಿದ ಕಾರ್ಯಕರ್ತರಿಗೆ ಸೂಕ್ತ ಸ್ಥಾನಮಾನ ಪಕ್ಷ ನೀಡುತ್ತದೆ ; ಸಚಿವ ರಹೀಮ್ ಖಾನ್




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ದೇಶದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಭವ್ಯ ಇತಿಹಾಸವಿದೆ,ರಾಜ್ಯದಲ್ಲಿ ಪಕ್ಷ ಅಧಿಕಾರಕ್ಕೆ ಬರಲು ಶ್ರಮಿಸಿದ ಕಾರ್ಯಕರ್ತರಿಗೆ ಪಕ್ಷ ಸಕಾಲದಲ್ಲಿ ಸೂಕ್ತ ಸ್ಥಾನ-ಮಾನ ನೀಡುತ್ತದೆ ಎಂದು ರಾಜ್ಯ ಪೌರಾಡಳಿತ ಹಾಗೂ ಹಜ್ ಖಾತೆ ಸಚಿವ ರಹೀಮ್ ಖಾನ್ ಹೇಳಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಛೇರಿಯಲ್ಲಿ ಹಮ್ಮಿಕೊಂಡಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಸಚಿವರು, ವಿಧಾನಸಭಾ ಚುನಾವಣೆ ಪೂರ್ವದಲ್ಲಿ ಪಕ್ಷ ಜನರಿಗೆ ನೀಡಿದ ಭರವಸೆಗಳನ್ನು ಅಧಿಕಾರಕ್ಕೆ ಬಂದ ಕೂಡಲೇ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸರ್ಕಾರ 5 ಗ್ಯಾರಂಟಿಗಳನ್ನು ಜಾರಿಗೆ ತರುವ ಮೂಲಕ ಪ್ರತಿಯೊಂದು ಕುಟುಂಬಕ್ಕೆ ಅದರ ಲಾಭ ತಲುಪಿಸಲು ಪ್ರಾಮಾಣಿಕ ಪ್ರಯತ್ನ ಮಾಡಿದೆ ಎಂದು ತಿಳಿಸಿದರು.

ಕಾಂಗ್ರೆಸ್ ಪಕ್ಷದ ಆಡಳಿತದಿಂದ ಮಾತ್ರ ರಾಜ್ಯದಲ್ಲಿ ಶಾಂತಿ, ಸಾಮರಸ್ಯ, ಅಭಿವೃದ್ಧಿ ಸಾಧ್ಯ, ಜೊತೆಗೆ ಎಲ್ಲಾ ವರ್ಗದ ಜನರಿಗೆ ಸಾಮಾಜಿಕ ನ್ಯಾಯ ನೀಡಿದೆ, ಬಿಜೆಪಿ ಅಧಿಕಾರವಧಿಯಲ್ಲಿ ನಡೆದ ಭ್ರಷ್ಟಾಚಾರ ಆಡಳಿತ, ಶಾಂತಿ ಕದಡುವ ಪ್ರಯತ್ನಕ್ಕೆ ರಾಜ್ಯದ ಜನರು ವಿಧಾನಸಭಾ ಚುನಾವಣೆಯಲ್ಲಿ ಅವರಿಗೆ ತಕ್ಕ ಉತ್ತರ ನೀಡಿದ್ದಾರೆ ಎಂದು ಅವರ ಕಾರ್ಯವೈಖರಿಯನ್ನು ಟೀಕಿಸಿದರು.

ಗಿರಿಜಿಲ್ಲೆಯೊಂದಿಗೆ ನಮ್ಮ ಕುಟುಂಬದ ಸಂಬಂಧ ಅವಿನಾಭಾವ, ಕಾರಣ ನಮ್ಮ ತಂದೆಯವರು ಗುರುಮಿಠಕಲ್ ಮತಕ್ಷೇತ್ರದ ಕಡೆಚೂರ ಗ್ರಾಮದವರು, ಬೇರೆ ಬೇರೆ ಕಾರಣಗಳಿಂದ ನಮ್ಮ ಕುಟುಂಬ ಬೀದರದಲ್ಲಿ ಶಾಶ್ವತವಾಗಿ ನೆಲೆಸಿದೆ, ನಾನು ಬಡತನದಲ್ಲಿ ಹುಟ್ಟಿ, ಬೆಳೆದು ಎಲ್ಲಾ ವರ್ಗದ ಜನರ ಜೊತೆ ಪ್ರೀತಿ, ವಿಶ್ವಾಸದಿಂದ ಬದುಕು ನಿರ್ವಹಿಸಿಕೊಂಡು ಬಂದಿದ್ದೇನೆ, ಪರಿಣಾಮ ಕಾಂಗ್ರೆಸ್ ಪಕ್ಷವೂ ನನ್ನ ಪ್ರಾಮಾಣಿಕತೆ, ಸಂಘಟನೆ ಗಮನಿಸಿ, ಈ ಹಿಂದೆ ಬೀದರ ಉತ್ತರ ಕ್ಷೇತ್ರದ ವಿಧಾನಸಭಾ ಉಪಚುನಾವಣೆಗೆ ಟಿಕೇಟ್ ನೀಡಿ, ಎಲ್ಲಾ ಕಾರ್ಯಕರ್ತರ, ಎಲ್ಲಾ ಸಮಾಜದ ಜನರು ಮತ ನೀಡಿ, ಗೆಲ್ಲಿಸಿದ ಪರಿಣಾಮ ಇಂದು ನಾನು ಸಚಿವನಾಗಿ ರಾಜ್ಯದ ಜನರ ಕೆಲಸ ಮಾಡುತ್ತಿದ್ದೇನೆ ಎಂದು ಭಾವುಕರಾಗಿ ತಮ್ಮ ಆಕಸ್ಮಿಕ ರಾಜಕೀಯ ಪ್ರವೇಶ ಕುರಿತು ಅಭಿಪ್ರಾಯ ವ್ಯಕ್ತಪಡಿಸಿದರು.

ಜಿಲ್ಲೆಯಲ್ಲಿ ಬರುವ ಎಲ್ಲಾ ಪಟ್ಟಣ ಪಂಚಾಯತ, ಪುರಸಭೆ ಹಾಗೂ ನಗರಸಭೆಗಳ ಕಾರ್ಯಚಟುವಟಿಕೆಗಳ ವಾಸ್ತವಿಕ ಅಭಿವೃದ್ಧಿ ತಿಳಿದುಕೊಂಡು ಬದಲಾವಣೆಗೆ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪದರ್ಶನಾಪೂರ, ಶಾಸಕರೊಂದಿಗೆ,ಅಧಿಕಾರಿಗಳೊಂದಿಗೆ ಚರ್ಚಿಸಿ, ಹೆಚ್ಚಿನ ಅನುದಾನ ನೀಡುತ್ತೇನೆ ಎಂದು ಭರವಸೆ ನೀಡಿದರು.

ಪ್ರಾಸ್ತಾವಿಕವಾಗಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಬಸರಡ್ಡಿ ಪಾಟೀಲ್ ಅನಪೂರ ಮಾತನಾಡಿ, ನೂತನ ಜಿಲ್ಲೆಯಾಗಿರುವ ಯಾದಗಿರಿ ಜಿಲ್ಲೆಯಲ್ಲಿ ಇನ್ನೂ ಅಭಿವೃದ್ಧಿ ಸಾಧಿಸುವುದು ಅಗತ್ಯವಾಗಿದೆ,ಅಲ್ಲದೇ ಸ್ಥಳಿಯ ಸಂಸ್ಥೆಗಳ ಚುನಾವಣೆ ಹತ್ತಿರವಾಗಿದೆ, ಕಾರಣ ತಾವೂ ವಿಶೇಷ ಕಾಳಜಿವಹಿಸಿ ಪ್ರಗತಿಗೆ ಹೆಚ್ಚಿನ ಅನುದಾನವನ್ನು ನೀಡಬೇಕು, ಇದು ಚುನಾವಣೆಯಲ್ಲಿ ಪಕ್ಷ ಅಧಿಕಾರ ಹಿಡಿಯಲು ಸಹಕಾರಿಯಾಗುತ್ತದೆ ಎಂದು ಮನವಿ ಮಾಡಿದರು.

ಸಭೆಯಲ್ಲಿ ರಾಜ್ಯ ಸಣ್ಣ ಕೈಗಾರಿಕೆ ಹಾಗೂ ಜಿಲ್ಲಾ ಉಸ್ತವಾರಿ ಸಚಿವ ಶರಣಬಸಪ್ಪದರ್ಶನಾಪೂರ,ಶಾಸಕರಾದ ಚನ್ನಾರಡ್ಡಿ ಪಾಟೀಲ್ ತುನ್ನೂರ, ರಾಜಾ ವೇಣುಗೋಪಾಲ ನಾಯಕ, ಚಿದಾನಂದಪ್ಪ ಕಾಳೆಬೆಳಗುಂದಿ, ಡಾ. ಭೀಮಣ್ಣ ಮೇಟಿ, ಸುದರ್ಶನ ನಾಯಕ, ಶ್ಯಾಮಸನ್ ಮಾಳಿಕೇರಿ, ಶರಣಪ್ಪಗೌಡ ಕೌಳೂರ, ಬಸ್ಸುಗೌಡ ಬಿಳ್ಹಾರ, ಮಂಜುಳಾ ಗೂಳಿ, ಇರ್ಫಾನ್ ಬಾದಲ್, ಮಲ್ಲಣ್ಣ ದಾಸನಕೇರಿ ಸೇರಿದಂತೆ ವಿವಿಧ ಬ್ಲಾಕ್‌ಗಳ ಅಧ್ಯಕ್ಷರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ರಾಜೇಶ್ವರ; ಪಿಕೆಪಿಎಸ್‌ಗೆ ಅಧ್ಯಕ್ಷರಾಗಿ ರೇವಣ್ಣಸಿದ್ದಪ್ಪ ಪಾಟೀಲ್ ಉಪಾಧ್ಯಕ್ಷರಾಗಿ ಮಂಜುಳಾ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:-ತಾಲೂಕಿನ ರಾಜೇಶ್ವರ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾಗಿ ರೇವಣ್ಣಸಿದ್ದಪ್ಪ ಪಾಟೀಲ್ ಉಪಾಧ್ಯಕ್ಷರಾಗಿ ಮಂಜುಳಾ ಭಾನುತೇಜ್ ಆಯ್ಕೆಯಾದರು. ಪಿಕೆಪಿಎಸ್ ಕಾರ್ಯಾಲಯದಲ್ಲಿ ಶುಕ್ರವಾರ ಜರುಗಿದ ಚುನಾವಣೆಯಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಒಬ್ಬರೆ ನಾಮಪತ್ರ ಸಲ್ಲಿಸಿದ ಹಿನ್ನಲೆಯಲ್ಲಿ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾಧಿಕಾರಿ ಶಿವಪುತ್ರ ನಂದಗಿ ಘೋಷಿಸಿದರು. ಬಳಿಕ ಬೆಂಬಲಿಗರು ಪಟಾಕಿ ಸಿಡಿಸಿ ಸಿಹಿ ಹಂಚಿ ಸನ್ಮಾನಿಸಿ ಅಭಿನಂದಿಸಿದರು. ನಿರ್ದೇಶಕರಾದ ಭದ್ರಪ್ಪ ಸಿಗಿ, ಅಶ್ವಿನ್ ಕುಮಾ, ನಾಸಿರೋದ್ದಿನ, ಶಿವಶರಣಪ್ಪ, ಕರಬಸಪ್ಪ, ಹಣಮಂತ, ಅಯೂಬ ಖಾನ್, ರಾಜಪ್ಪ ಸಿಗಿ, ಸ್ನೇಹಾ ಪಂಕಜ ಉಪಸ್ಥಿತರಿದ್ದರು. ರಾಜಕುಮಾರ ಗೌಣಿ ವಂದಿಸಿದರು.



ಬಸವಕಲ್ಯಾಣ :- ತಾಲೂಕಿನ ಸುಕ್ಷೇತ್ರ ಹಾರಕೂಡ ಶ್ರೀಮಠದಲ್ಲಿ ರಾಜ್ಯಮಟ್ಟದ ಎಪಿಎ ಅವಾರ್ಡ್ ಗೆ ಭಾಜನರಾದ ಡಾ. ಚಂದ್ರಕಾಂತ ಗುದಗೆ ಅವರಿಗೆ ಹಾರಕೂಡ ಶ್ರೀಮಠದ ವತಿಯಿಂದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಶ್ರೀ ಚನ್ನ ರತ್ನ ಪ್ರಶಸ್ತಿ ಪ್ರಧಾನ ಮಾಡಿ ಆಶೀರ್ವದಿಸಿದರು.ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹರಕೂಡ, ಬಸವರಾಜ ತೊಂಡಾರೆ, ಬಾಬು ಹೊನ್ನಾನಾಯಕ, ಉಮಾ ಕಾಂತ ಭಂಗೆ, ಅಪ್ಪಣ್ಣ ಜನವಾಡ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಜಯಂತಿ

ಇಂಡಿ : ಶ್ರೀ ಶಿವಯೋಗಿ ಸಿದ್ದರಾಮೇಶ್ವರ 12ನೇ ಶತಮಾನದಲ್ಲಿ ವೀರಶೈವ ಧರ್ಮದ ಅಮರ್ ರಲ್ಲಿ ಬಸವಣ್ಣ, ಚನ್ನಬಸವಣ್ಣ, ಪ್ರಭೇದಗಳಂತಹ ಅನೇಕ ಸಂತರೊಂದಿಗೆ ಸಿದ್ದರಾಮೇಶ್ವರ ವಿಶಿಷ್ಟವಾದ ಸ್ಥಾನಗಳನ್ನು ಪಡೆದುಕೊಂಡಿ-ದ್ದಾರೆ. ನಾವು ಪ್ರತಿನಿತ್ಯ ಅವರ ತತ್ವಗಳನ್ನು ಅರಿತುಕೊಳ್ಳಬೇಕು ಎಂದು ತಾಲೂಕು ಗ್ರೇಡ್ 2 ತಹಶೀಲ್ದಾರ್ ಧನಪಾಲಶೆಟ್ಟಿ ದೇವೂರ ಹೇಳಿದರು.

ಪಟ್ಟಣದ ಆಡಳಿತ ಸಭಾ ಭವನದಲ್ಲಿ ಶನಿವಾರ ಬೆಳಗ್ಗೆ ನಡೆದ ಶಿವಯೋಗಿ ಸಿದ್ದರಾಮ ಜನ್ಮದಿನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಇಂದಿನ ಸಮಾಜದಲ್ಲಿ ಜನರು ಎಲ್ಲಾ ಸಾಧು ಸಂತರು, ಶರಣರು, ದಾಸರನ್ನು ಆಯಾ ಜಾತಿಗೆ ಸೀಮಿತ ಮಾಡಲಾಗಿದೆ. ಕನಕದಾಸರು, ಬಸವಣ್ಣನವರು ಹೀಗೆ ಎಲ್ಲಾ ಮಹಾತ್ಮರು ವಿಶ್ವಕ್ಕೆ ಮಾನ್ಯರಾಗಿರುವಂತವರು ಇವರನ್ನು ಜಾತಿಯ ಸಂಕೋಲೆಯಲ್ಲಿ ಬಂಧಿಸಿಟ್ಟಿರುವುದು ಬಹಳ ವಿಪರ್ಯಾಸದ ಸಂಗತಿ. ಇವರೆಲ್ಲರೂ ವಿಶ್ವಕ್ಕೆ ಬೇಕಾಗುವ ಸಂದೇಶಗಳನ್ನು ಕೊಟ್ಟಿರುವವರು ಅಂತವರ ಜಯಂತಿಯನ್ನು ಎಲ್ಲರೂ ಸೇರಿ ಮಾಡುವಂತೆ ಆಗಬೇಕು ಎಂದರು. ಈ ಸಂದರ್ಭದಲ್ಲಿ ಶಿರಸ್ತೇದಾರ್ ಬಸವರಾಜ ರಾವೂರ, ಎಚ್ ಎಚ್ ಗುನ್ನಾಪೂರ, ಎಸ್ ಆರ್ ಮುಜಗೊಂಡ, ಬಳೊಳ್ಳಿ ಕಂದಾಯ ನೀರೀಕ್ಷಕರಾದ ಬಸವರಾಜ ಅವಜಿ, ತಾಲೂಕು ಪಂಚಾಯಿತಿ ಮ್ಯಾನೇಜರ್ ಮುರುಗೇಶ್ ನಾರಾಯಣಪುರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತಿತ್ತರು ಉಪಸ್ಥಿತರಿದ್ದರು.

# ವ್ಯಾಪಾರಸ್ತರಿಗೆ ಕಾನೂನು ಅರಿವು ಮೂಡಿಸಿದ ಕೊಡೇಕಲ್ ಪಿಎಸ್‌ಐ ಆಯಣ್ಣ.



ಮಲ್ಲಮ್ಮ ನುಡಿ ವಾರ್ತೆ

ಹುಣಸಗಿ: ಇಂದು ಕೊಡೇಕಲ್ ಪೋಲಿಸ ಠಾಣೆಯ ವ್ಯಾಪ್ತಿಯಲಿ ಬರುವ .ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ .ಕೆನರಾ ಬ್ಯಾಂಕ್. ಕರ್ನಾಟಕ ಬ್ಯಾಂಕ್ ಹಾಗೂ. ಕರ್ನಾಟಕ ಗ್ರಾಮೀಣ ಬ್ಯಾಂಕ್ ನ ಎಲ್ಲಾ ಮ್ಯಾನೇಜರ್ ರವರನ್ನು ಠಾಣೆಗೆ ಬರಮಾಡಿಕೊಂಡು, ಬ್ಯಾಂಕ್ ಸುರಕ್ಷತಾ ಕ್ರಮಗಳಾದ ಭದ್ರತ ಗಾರ್ಡ್, ಏಟಿಎಮ್ ಗಾರ್ಡ್ಸ್, ಸಿಸಿಟಿವಿ ಕ್ಯಾಮರಾ, ಂಟಚಿಡಿಟಥಿಣಜಟಛ ವಿಷಯಗಳ ಬಗ್ಗೆ ತಿಳಿಸಲಾಯಿತು ಹಾಗೂ ಸುರಕ್ಷತಾ ನಿಯಮದ ಬಗ್ಗೆ ನೋಟೀಸ್ ಕೊಡೇಕಲ್ ಪೋಲಿಸ ಠಾಣೆಯ ಪಿಎಸ್‌ಐ ಆಯಣ್ಣ ರವರಿಗೆ ನೀಡಲಾಯಿತು.

ಇದರ ಜೊತೆಯಲ್ಲಿ ಫೈನಾನ್ಸ & ಪೆಟ್ರೋಲ್ ಪಂಪ್ ಮ್ಯಾನೇಜರ್ ರವರನು ಠಾಣೆಗೆ ಬರಮಾಡಿಕೊಂಡು ಸಿಸಿಟಿವಿ ಕ್ಯಾಮರಾ, Alarmsystems ವಿಷಯಗಳ ಬಗ್ಗೆ ತಿಳಿಸಲಾಯಿತು ಹಾಗೂ ಸುರಕ್ಷತಾ ನಿಯಮದ ಬಗ್ಗೆ ಅರಿವು ಮೂಡಿಸಿದರು.

# ಸಂವಿಧಾನ ಸಂರಕ್ಷಣಾ ಅಭಿಯಾನ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಗರದ ಭಾಗ್ಯನಗರ ರಸ್ತೆಯಲ್ಲಿ ಬರುವ ಬಾಲಾಜಿ ಫಂಕ್ಷನ್ ಹಾಲ್ ನಲ್ಲಿ ನಡೆದ ಕಾರ್ಯಕ್ರಮವನ್ನು ಉದ್ದೇಶಿಸಿ ಕಾರ್ಮಿಕ ಸಚಿವರಾದ ಸಂತೋಷ ಲಾಡ್ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಸಂಸದ ವಕೆ. ರಾಜಶೇಖರ ಹಿಟ್ನಾಳ, ಶಾಸಕ ಕೆ. ರಾಘವೇಂದ್ರ ಹಿಟ್ನಾಳ, ಎಂಎಲ್ ಸಿ ಬಿಲ್ಕಿಸ್ ಬಾನು, ಕಾಡಾ ಅಧ್ಯಕ್ಷ ಹಸನಸಾಬ್ ದೋಟಿಹಾಳ, ಮಾಜಿ ಸಂಸದ ಸಂಗಣ್ಣ ಕರಡಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಅಮರೇಗೌಡ ಬಯ್ಯಾಪೂರ, ನಗರಸಭೆ ಅಧ್ಯಕ್ಷ ಅಮ್ಜದ್ ಪಟೇಲ್, ಕುಡಾ ಅಧ್ಯಕ್ಷ ಶ್ರೀನಿವಾಸ ಗುಪ್ತಾ, ಗಂಗಾವತಿ ಪ್ರಾಧಿಕಾರ ಅಧ್ಯಕ್ಷ ಇಲಿಯಾಸ್ ಅನ್ಸಾರಿ, ನಗರಸಭೆ ಸದಸ್ಯರಾದ ಮುತ್ತುರಾಜ ಕುಷ್ಟಗಿ, ಅಕ್ಬರ್ ಪಾಶಾ ಪಲ್ಟನ್, ಅಜಿಮ್ ಅಕ್ತಾರ್, ಗ್ಯಾರಂಟಿ ಸಮಿತಿ ಜಿಲ್ಲಾ ಉಪಾಧ್ಯಕ್ಷರಾದ ಮಂಜುನಾಥ ಜಿ. ಗೊಂಡಬಾಳ ಮತ್ತು ಎಂ. ಎಸ್. ಖಾದ್ರಿ, ರಾಜ್ಯ ಮುಖಂಡರುಗಳಾದ ಜಕ್ಕಪ್ಪನವರ್, ಸಿರಾಜ್, ಇರ್ಷಾದ್ ಜಿಲ್ಲಾ ಮುಖಂಡರುಗಳಾದ ಕೃಷ್ಣಾ ಇಟ್ಟಂಗಿ, ಕೃಷ್ಣಾ ಗಲಿಬಿ, ಗೂಳಪ್ಪ ಹಲಗೇರಿ, ಕಾಟನ್ ಪಾಶಾ, ಕೆ.ಎಂ. ಸೈಯ್ಯದ್, ಖಾಜಾ ಮೈನುದ್ದೀನ್ ಮುಲ್ಲಾ, ಗಾಳೆಪ್ಪ ಪೂಜಾರ, ಟಿ. ರತ್ನಾಕರ, ಯಮನಪ್ಪ ಕಬ್ಬೇರ ಅನೇಕರಿದ್ದರು.

# ಚಿಟಗುಪ್ಪ ಪಿಕೆಪಿಎಸ್ ಸಹಕಾರಿ ಸಂಘ ಮಾದರಿ ಸಂಘ ಮಾಡಲು ಶ್ರಮಿಸುತ್ತೇನೆ:- ಸಿದ್ದರೊಡ ಎಸ್. ಒಂಟಿಮಾರಿ







ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾಗಿ ಸಿದ್ದರೊಡ ಶಿವಲಿಂಗಪ್ಪ ಒಂಟಿಮಾರಿ ಉಪಾಧ್ಯಕ್ಷರಾಗಿ ಅಂಬದಾಸ ಶಂಕರೆಪ್ಪ ಅವಿರೋಧ ಆಯ್ಕೆಯಾದರು. ಸೋಮವಾರ ಇಲ್ಲಿಯ ಪಿಕೆಪಿಎಸ್ ಕಾರ್ಯಾಲಯದಲ್ಲಿ ಜರುಗಿದ ಚುನಾವಣೆಯಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಒಬ್ಬರೆ ನಾಮಪತ್ರ ಸಲ್ಲಿಸಿದ ಹಿನ್ನೆಲೆಯಲ್ಲಿ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾಧಿಕಾರಿ ಕೆರೆಸಿದ್ದ ಮೋರಟಗಿ ತಿಳಿಸಿದರು. ಮುಖ್ಯ ಕಾರ್ಯನಿರ್ವಾಹಕ ಸಂಗಮೇಶ ಪಡಗಿ ನೂತನವಾಗಿ ಅಯ್ಕೆಯಾದ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ನಿರ್ದೇಶಕರನ್ನು ಸನ್ಮಾನಿಸಿದರು. ಬಳಿಕ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಸಿದ್ದರೊಡ ಶಿವಲಿಂಗಪ್ಪ ಒಂಟಿಮಾರಿ ಪತ್ರಕರ್ತರೊಂದಿಗೆ ಮಾತನಾಡಿ, ಬೀದರ್ ಜಿಲ್ಲೆಯಲ್ಲಿಯೇ ಚಿಟಗುಪ್ಪ ಪಿಕೆಪಿಎಸ್ ಸಹಕಾರ ಸಂಘ ಮಾದರಿ ಸಂಘ ಮಾಡಲು ಹಗಲಿರಳು ಶ್ರಮಿಸುತ್ತೇನೆ. ರೈತರಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳು ರೈತರ ಮನೆ ಬಾಗಿಲಿಗೆ ಮುಟ್ಟಿಸುವಂತಹ ಕಾರ್ಯ ಮಾಡುತ್ತೇನೆ ಎಂದು ಆಶ್ವಾಸನೆ ನೀಡಿದರು. ಸಹಕಾರ ಕ್ಷೇತ್ರದಲ್ಲಿ ಸೇವಾ ಮನೋಭಾವನೆ ಇರಬೇಕು ರಾಜಕೀಯ ಹೊರತಾಗಿ ಸಹಕಾರ ಕ್ಷೇತ್ರ ಬೆಳೆಯಬೇಕು ಸಹಕಾರ ಸಂಘ ಕೇವಲ ಬಡ್ಡಿ ಆದಾಯದಿಂದ ಬೆಳೆಯಲು ಸಾಧ್ಯವಿಲ್ಲ ಬೆಳವಣಿಗೆಗೆ ವಿಭಿನ್ನ ಆದಾಯ ಮೂಲ ಅಗತ್ಯವಾಗಿದೆ ಎಂದರು. ರೈತರಿಗೆ ನೀಡುವ ಕಡಿಮೆ ಬಡ್ಡಿ ದರದ ಸಾಲಕ್ಕೆ ನಬಾರ್ಡ್ ಇದರಿಂದ ರೈತರಿಗೆ ಅಗತ್ಯ ಇರುವಷ್ಟು ಸಾಲ ನೀಡಲು ಸಾಧ್ಯವಾಗುತ್ತಿಲ್ಲ ಸರ್ಕಾರ ಇನ್ನು ಹೆಚ್ಚಿನ ಅನುದಾನ ನೀಡಿ ರೈತರಿಗೆ ಹೆಚ್ಚಿನ ಸಾಲ ಸೌಲಭ್ಯ ನೀಡಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ನೂತನ ನಿರ್ದೇಶಕರಾದ ಮಹಾರುದ್ರಯ್ಯ ಸ್ವಾಮಿ, ಇಸ್ಮಾಯಿಲ್ ಲಾಥೋಡಿ, ಪಾಂಡುರಂಗ, ಸೈಯದ್ ರಾಶೀದ್ ಪಟೇಲ್, ಮೋಯಿಜೋದ್ದಿನ ಬಾರುದವಾಲೇ, ಪ್ರಕಾಶ ಗೌಳಿ, ಸುನೀಲಕುಮಾರ್, ಅಮೃತ, ಈರಮ್ಮಾ ರಾಂಪುರ, ನಿವೃತ್ತ ಮುಖ್ಯ ಕಾರ್ಯನಿರ್ವಾಹಕ ಶಂಕರ ಚಾಮಾ, ಸಿಬ್ಬಂದಿಗಳಾದ ಶ್ರೀಶೈಲ ಸಾದಾ, ರಮೇಶ, ಕೈಲಾಸ ಗಿರಿ, ರಾಚಪ್ಪ, ಮದರಸಾಬ್, ಪ್ರಮುಖರಾದ ದಿಲೀಪಕುಮಾರ್ ಬಗ್ದಲ್ಕರ್, ಬಸವರಾಜ ಪಾಟೀಲ್, ಮುಜಾಫರ್ ಪಟೇಲ್, ವಿಜಯಕುಮಾರ ಆರ್. ಮಂಕಾಲ, ವಿಶಾಲ ಬೋರಳೆ, ಭಾಸ್ಕರ್, ಬಾಬಾ ಆರ್.ಸಿಸಿ. ವೆಂಕಟ ಪೂಜಾರಿ, ರವೀಂದ್ರರೆಡ್ಡಿ, ಕರೇಪ್ಪಾಗಡಮಿ ಸೇರಿದಂತೆ ಇತರರಿದ್ದರು.

"ಮಾಜಿ ಸಚಿವರಾದ ರಾಜಶೇಖರ ಪಾಟೀಲ್ ಅವರ ಆಶೀರ್ವಾದದಿಂದ ನಾವು ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳು ಜಯಭೇರಿ ಹೊಂದಿದ್ದೇವೆ, ಈ ಸಂಘ ಮಾದರಿ ಸಂಘ ಮಾಡಲು ಆಡಳಿತ ಮಂಡಳಿ ಸಹಕಾರದೊಂದಿಗೆ ಹಗಲಿರಳು ಶ್ರಮಿಸುತ್ತೇನೆ, ಸಹಕಾರಿ ಸಂಘ ಕಾಂಗ್ರೆಸ್ ಬೆಂಬಲಿತರ ವಶಕ್ಕೆ ಬರಲು ಕಾರಣರಾದ ಮತದಾರ ಭಾಂದವರಿಗೆ ಅಭಿಮಾನಿಗಳಿಗೆ ಧನ್ಯವಾದಗಳು ಸಲ್ಲಿಸುತ್ತೇನೆ.

-ನೂತನ ಅಧ್ಯಕ್ಷ ಸಿದ್ದರೊಡ ಎಸ್. ಒಂಟಿಮಾರಿ

"ಚಿಟಗುಪ್ಪ ಪಿಕೆಪಿಎಸ್ ಸಹಕಾರ ಸಂಘ ಕಾಂಗ್ರೆಸ್ ಬೆಂಬಲಿತರ ವಶಕ್ಕೆ ಬರಲು ಕಾರಣಿಭೂತರಾದ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರಿಗೆ ಧನ್ಯವಾದಗಳು ಸಲ್ಲಿಸುತ್ತೇನೆ ಎಂದರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದೆ ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಮಂಜೂರಿ ಮಾಡಿಸಲು ರಾಜಶೇಖರ ಪಾಟೀಲ್ ಅವರಿಗೆ ಮನವಿ ಮಾಡುತ್ತೇವೆ ಎಂದರು.



-ಕಾಂಗ್ರೆಸ್ ಹಿರಿಯ ಮುಖಂಡ ಅಶೋಕ ಸ್ವಾಮಿ ಫಾತ್ಮಪುರ್

# ಕಬ್ಬು ಹಾನಿಗೆ

## ಪರಿಹಾರ ನೀಡಲು ನಿಧಿ ಸ್ಥಾಪನೆ

ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ:ಜ.20:ಅಗ್ನಿ ದುರಂತದಲ್ಲಿ ಸಂಭವಿಸುವ ಕಬ್ಬಿನ ಹಾನಿಗೆ ಪರಿಹಾರ ನೀಡಲು ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಿಂದನಿಧಿಸ್ಥಾಪಿಸಲಿದ್ದು, ಈ ವರ್ಷದಿಂದಲೇ ರೂ 50 ಲಕ್ಷ ತೆಗೆದಿರಿಸಲಾಗುವುದು ಎಂದು ಸಕ್ಕರೆ ಮತ್ತು ಕಬ್ಬು ಅಭಿವೃದ್ಧಿ ಸಚಿವ ಶಿವಾನಂದ ಪಾಟೀಲಘೋಷಣೆಮಾಡಿದರು.

ಇಲ್ಲಿನ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತುಹಸಿರುಸೇನೆಯರಾಜ್ಯಾಧ್ಯಕ್ಷ ಚುನ್ನಪ್ಪ ಪೂಜೇರಿ ನೇತೃತ್ವದ ರೈತ ಮುಖಂಡರೊಂದಿಗೆ ಕಬ್ಬು ಬೆಳೆಗಾರರ ಸಮಸ್ಯೆ ಬಗ್ಗೆ ಚರ್ಚಿಸಿದ ಸಚಿವರು, ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿಯಿಂದ ನೀಡುವ ಪರಿಹಾರ ಅತ್ಯಲ್ಪ ಎಂಬ ಕಾರಣಕ್ಕೆ ನಿಜಲಿಂಗಪ್ಪ ಸಂಸ್ಥೆಯಿಂದಲೂ ಪರಿಹಾರ ನೀಡುವ ನಿರ್ಧಾರ ಕೈ ಗೊಳ್ಳಲಾಗಿದೆ ಎಂದು ಹೇಳಿದರು.

ಆರಂಭದಲ್ಲಿ ಗರಿಷ್ಠ ಐದು ಎಕರೆ ಮಿತಿಯಲ್ಲಿ ಪರಿಹಾರ ನೀಡಲಿದ್ದು, ನಂತರ ಈ ಪರಿಹಾರ ಯೋಜನೆಯನ್ನು ವಿಸ್ತರಣೆ ಮಾಡುವ ಬಗ್ಗೆ ಚಿಂತನೆ ಮಾಡಲಾಗುವುದು. ವಿದ್ಯುತ್ ಶಾರ್ಟ್ ಸರ್ಕ್ಯೂಟ್ ಮತ್ತಿತರ ಕಾರಣಗಳಿಂದ ಕಬ್ಬು ಹಾನಿಗೀಡಾದರೂ ಸಕ್ಕರೆ ಕಾರ್ಖಾನೆಗಳು ಈ ಕಬ್ಬನ್ನು ನುರಿಸಲಿವೆ. ಆದರೂ ಸರ್ಕಾರ ಕಬ್ಬು ಬೆಳೆಗಾರರ ಹಿತದೃಷ್ಟಿಯಿಂದ ಪರಿಹಾರ ನೀಡುವ ನಿರ್ಧಾರ ಕೈಗೊಂಡಿದೆ ಎಂದು ತಿಳಿಸಿದರು.

ಬಹುಮಾನದ ಮೊತ್ತ ಹೆಚ್ಚಳ ತೂಕದಲ್ಲಿ ವಂಚನೆ ಮಾಡುವ ಸಕ್ಕರೆ ಕಾರ್ಖಾನೆಗಳ ಆಡಳಿತ ಮಂಡಳಿ ವಿರುದ್ಧ ಸೂಕ್ತ ದಾಖಲೆಗಳೊಂದಿಗೆ ದೂರು ನೀಡುವ ರೈತರಿಗೆ ರೂ 1 ಲಕ್ಷ ನಗದು ಬಹುಮಾನ ನೀಡಲಾಗುವುದು ಎಂದು ಬೆಳಗಾವಿ ಅಧಿವೇಶನದ ವೇಳೆ ಘೋಷಣೆ ಮಾಡಲಾಗಿತ್ತು. ಈ ಬಹುಮಾನದ ಮೊತ್ತವನ್ನು ರೂ 2.5 ಲಕ್ಷಗಳಿಗೆ ಹೆಚ್ಚಿಸಲಾಗಿದ್ದು, ದೂರು ನೀಡುವ ಕಬ್ಬು ಬೆಳೆಗಾರರಿಗೆ ಯಾವುದೇ ಸಮಸ್ಯೆಯಾಗದಂತೆ ಸರ್ಕಾರ ಜವಾಬ್ದಾರಿ ತೆಗೆದುಕೊಳ್ಳಲಿದೆ.

# ಶ್ವಾನಪ್ರಿಯರ ಮನ ತಣಿಸಿದ 'ಡಾಗ್ ಶೋ'



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 20 : ಬೌ.. ಬೌ.., ಕುಂಯಿ.. ಕುಂಯಿ.., ಘುರ್.. ಘುರ್.. ಹೀಗೆ ನಾನಾ ಬಗೆಯ ಸದ್ದಿನ ಮೂಲಕ ಗಮನ ಸೆಳೆದದ್ದು ವಿವಿಧ ತಳಿಯ ನಾಯಿಗಳು. ಕೆಲವು ನಾಯಿಗಳು ನೋಡಲು ಹೂವಿನಂತೆ ನಾಜೂಕು, ಮತ್ತೆ ಕೆಲವು ವ್ಯಾಘ್ರ. ಅವುಗಳ ಆಟ ಒಂದೆರಡಲ್ಲ. ಅವುಗಳನ್ನು ಸಂಭಾಳಿಸಿ, ಜನರ ಮುಂದೆ ತಂದು ಪ್ರದರ್ಶಿಸಿದ್ದೇ ದೊಡ್ಡ ಸಾಹಸವಾಗಿತ್ತು.

ಚೌಕಾಕಾರದ ಸ್ಥಳದಲ್ಲಿ ಒಂದರ ಹಿಂದೆ ಒಂದು ನಾಯಿ ಹೆಜ್ಜೆ ಹಾಕುತ್ತ ಹೋದಾಗ ಥೇಟ್ ???ಯಾಂಪ್ ಮೇಲೆ ರೂಪದರ್ಶಿಯರು ನಡೆದ ಅನುಭವ. ಇದನ್ನು ನೋಡಿ ಜನ ಕರತಾಡನ, ಶಿಳ್ಳೆ ಮೂಲಕ ಮೆಚ್ಚುಗೆ ವ್ಯಕ್ತಪಡಿಸಿದರು.

'ಸೈಬೇರಿಯನ್ ಹಸ್ಕಿ', 'ಬೆಲ್ಜಿಯಂ ಮಲ್ನೊಸ್', 'ಪಮೇರಿಯನ್', ಭಾರತೀಯ ಸೇನೆಗೆ ಸೇರಿಸಿರುವ 'ಮುಧೋಳ ಹೌಂಡ್' ನಾಯಿಗಳು ಎಲ್ಲರ ಗಮನ ಸೆಳೆದು ಚಪ್ಪಾಳೆ ಗಿಟ್ಟಿಸಿದವು. 'ಪಪ್ಪಿ ರೌಂಡ್', 'ಲ್ಯಾಬ್ರಾಡರ್ ರಿಟ್ರಿವರ್','ಜರ್ಮನ್ ಶೆಫರ್ಡ್','ಪಮೇರಿಯನ್' ಜಾತಿಯ ಗಂಡು ಮತ್ತು ಹೆಣ್ಣು ನಾಯಿಗಳ ವಿಭಾಗದ ನಾಯಿಗಳನ್ನು ಪ್ರದರ್ಶಿಸಲಾಯಿತು. ಪಶು ವೈದ್ಯಾಧಿಕಾರಿಗಳು ನಾಯಿಗಳ ಹಲ್ಲು, ಅದರ ನಡಿಗೆ, ಮೈಕಟ್ಟು, ಚುರುಕುತನ, ಅದರ ಒಟ್ಟಾರೆ ಆರೋಗ್ಯವನ್ನು ಸ್ಥಳದಲ್ಲೇ ಪರೀಕ್ಷಿಸಿ ಬಹುಮಾನಕ್ಕೆ ಆಯ್ಕೆ ಮಾಡಿದರು.

ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ



20ನೇ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಭಾನುವಾರ ವಿ.ವಿ. ಆವರಣದಲ್ಲಿ ಏರ್ಪಡಿಸಿದ್ದ ಶ್ವಾನ ಪ್ರದರ್ಶನದಲ್ಲಿ ಕಂಡು ಬಂದ ದೃಶ್ಯಗಳಿವು.

ಕುಲಪತಿ ಡಾ.ಕೆ.ಸಿ.ವೀರಣ್ಣ ಬಹುಮಾನ ವಿತರಿಸಿದರು.

ಆಡಳಿತ ಮಂಡಳಿ ಸದಸ್ಯ ಬಸವರಾಜ ಭತಮುರ್ಗೆ, ಕಾರ್ಯಕ್ರಮದ ಸಂಯೋಜಕ ಡಾ.ಚನ್ನಪ್ಪಗೌಡ, ತಹಶೀಲ್ದಾರ್ ದತ್ತಾತ್ರೇಯ ಗಾದಾ, ಡಾ.ಬಸವರಾಜ, ಡಾ.ಗೌತಮ ಅರಳಿ, ಡಾ.ಸುರೇಶ, ಡಾ.ಸತೀಶ ಬಿರಾದಾರ, ಡಾ.ಭುರೆ ಮತ್ತಿತರರು ಹಾಜರಿದ್ದರು.

ವಿವಿಧ ಭಾಗಗಳಿಂದ ಜನ ಬಂದು ಪ್ರದರ್ಶನ ಕಣ್ತುಂಬಿಕೊಂಡರು. 120ಕ್ಕೂ ಹೆಚ್ಚು ನಾಯಿಗಳು ಶ್ವಾನ ಪ್ರದರ್ಶನದಲ್ಲಿ ಪಾಲ್ಗೊಂಡಿದ್ದವು. ಜೊತೆಗೆ ತಮ್ಮೊಂದಿಗೆ ಸಾಕು ನಾಯಿಗಳನ್ನು ಕೆಲವರು ಕರೆ ತಂದಿದ್ದರು. ಎಲ್ಲ ನಾಯಿಗಳಿಗೆ ಪಶು ವಿ.ವಿಯಿಂದ ಇದೇ ಸಂದರ್ಭದಲ್ಲಿ ಉಚಿತವಾಗಿ ನಾಯಿಗಳಿಗೆ ರೋಗ ನಿರೋಧಕ ಲಸಿಕೆ ನೀಡಲಾಯಿತು. ನಾಯಿಗಳ ಆರೈಕೆ ಬಗ್ಗೆ ಮಾರ್ಗದರ್ಶನ ಕೂಡ ಮಾಡಿದರು.

### ಮೇಳಕ್ಕೆ ತೆರೆ

ಕರ್ನಾಟಕ ಪಶು ವೈದ್ಯಕೀಯ ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ 20ನೇ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಬೀದರ್ ತಾಲ್ಲೂಕಿನ ಕಮಠಾಣ ಸಮೀಪದ ನಂದಿನಗರದ ವಿ.ವಿ ಆವರಣದಲ್ಲಿ ಏರ್ಪಡಿಸಿದ್ದ ಮೂರು ದಿನಗಳ ಜಾನುವಾರು ಕುಕ್ಕುಟ ಮತ್ತು ಮತ್ಸ್ಯಮೇಳಕ್ಕೆ ಭಾನುವಾರ ತೆರೆ ಬಿತ್ತು. ಕೊನೆ ದಿನವಾದ ಭಾನುವಾರ ಹೆಚ್ಚಿನ ಸಂಖ್ಯೆಯಲ್ಲಿ ಜನ ಕುಟುಂಬ ಸದಸ್ಯರೊಂದಿಗೆ ಮೇಳಕ್ಕೆ ಬಂದು ವಿವಿಧ ತಳಿಯ ಜಾನುವಾರು ಬಗೆ ಬಗೆಯ ಕೋಳಿಗಳು ಅಲಂಕಾರಿಕ ಮೀನುಗಳನ್ನು ಕಣ್ತುಂಬಿಕೊಂಡರು.

### 'ದೀಪಾ' ಬುದ್ಧಿಮತ್ತೆ ಪರೀಕ್ಷೆ

ಬೀದರ್ ಜಿಲ್ಲಾ ಪೊಲೀಸ್ ಇಲಾಖೆಯ ಶ್ವಾನ ದಳಕ್ಕೆ ಸೇರಿದ 'ದೀಪಾ' ಎಂಬ ಹೆಣ್ಣು ನಾಯಿಯ ಬುದ್ಧಿಮತ್ತೆ ಚುರುಕುತನವನ್ನು ಶ್ವಾನ ಪ್ರದರ್ಶನದಲ್ಲಿ ಒರೆಗೆ ಹಚ್ಚಲಾಯಿತು. ಡಿಎಆರ್ ಶ್ವಾನ ದಳದ ಅಶೋಕ ಕುಮಾರ ಅವರು ಕೊಟ್ಟ ಎಲ್ಲ ಸೂಚನೆಗಳನ್ನು 'ದೀಪಾ' ಪಾಲಿಸಿ ನೆರೆದವರ ಗಮನ ಸೆಳೆದಳು. ಓಡು ಎಂದರೆ ಓಡುವುದು ಮಲಗು ಎಂದರೆ ಮಲಗುವುದು ಎದ್ದು ನಿಲ್ಲು ಎಂದರೆ ನಿಂತುಕೊಳ್ಳುವುದು ಜನರ ಮಧ್ಯೆ ಮಾದಕ ವಸ್ತು ಬಚ್ಚಿಟ್ಟು ಆನಂತರ ಅದರ ವಾಸನೆ ತೋರಿಸಿದಾಗ 'ದೀಪಾ' ನಿರ್ದಿಷ್ಟ ವ್ಯಕ್ತಿ ಬಳಿ ಹೋಗಿ ಗುರುತಿಸಿದಾಗ ಜನ ಚಪ್ಪಾಳೆ ಹೊಡೆದು ಮೆಚ್ಚುಗೆ ಸೂಚಿಸಿದರು.

### ಸೌತ್ ಏಷ್ಯಾ ಮಾಸ್ಟರ್ಸ್ ಅಥ್ಲೆಟಿಕ್ಸ್ ಒಪೆನ್ ಚಾಂಪಿಯನ್‌ಶಿಪ್

# ಓಟದಲ್ಲಿ ಬೀದರನ ಮಮಿತಾಬಾಯಿ ಪ್ರಥಮ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 20 : ಮಂಗಳೂರಿನಲ್ಲಿ ಈಚೆಗೆ ನಡೆದ ಪ್ರಥಮ ಸೌತ್ ಏಷ್ಯಾ ಮಾಸ್ಟರ್ಸ್ ಒಪೆನ್ ಚಾಂಪಿಯನ್ ಶಿಪ್‌ನ 35 ವರ್ಷ ಮೇಲ್ಪಟ್ಟವರ ವಿಭಾಗದ 5 ಸಾವಿರ ಮೀಟರ್ ಓಟದ ಸ್ಪರ್ಧೆಯಲ್ಲಿ ಬೀದರನ ಜಿಲ್ಲಾ ಕಾರಾಗೃಹದ ಮುಖ್ಯಶಿಕ್ಷಕಿ ಮಮಿತಾಬಾಯಿ ಕದ್ರೆ ಪ್ರಥಮ ಸ್ಥಾನಗಳಿಸಿ ಸಾಧನೆಗೈದಿದ್ದಾರೆ.

26:01:4 ನಿಮಿಷದಲ್ಲಿ ಅವರು ಗೆಲುವಿನ ದಡ ತಲುಪಿದರು. 30 ವರ್ಷ ಮೇಲ್ಪಟ್ಟವರ ವಿಭಾಗದ 4*400 ಮೀಟರ್ ರಿಲೆನಲ್ಲೂ ಅವರು ದ್ವಿತೀಯ ಸ್ಥಾನಗಳಿಸಿ ಗಮನ ಸೆಳೆದರು.

ವೃತ್ತಿ ಜತೆಗೆ ಕ್ರೀಡೆಯಲ್ಲೂ ತೊಡಗಿಸಿಕೊಂಡಿರುವ ಮಮಿತಾಬಾಯಿ ವಿವಿಧ ಸ್ಪರ್ಧೆಗಳಲ್ಲಿ ಚಿನ್ನ, ಬೆಳ್ಳಿ ಪದಕಗಳನ್ನು ಗಳಿಸಿ ಪ್ರತಿಭೆ ಪ್ರದರ್ಶಿಸಿದ್ದಾರೆ. ಇದೀಗ ಭಾರತ, ನೇಪಾಳ್, ಶ್ರೀಲಂಕಾ, ಬಾಂಗ್ಲಾದೇಶ ಹಾಗೂ ಭೂತಾನ್ ಸೇರಿ ಐದು ದೇಶಗಳ ಸ್ಪರ್ಧಿಗಳು ಪಾಲ್ಗೊಂಡಿದ್ದ ಚಾಂಪಿಯನ್ ಶಿಪ್‌ನಲ್ಲಿ ಸಾಧನೆಗೈದು ಬೀದರನ ಹಿರಿಮೆ ಹೆಚ್ಚಿಸಿದ್ದಾರೆ.

ಮಮಿತಾಬಾಯಿ ಕದ್ರೆ ಅವರ ಸಾಧನೆಗೆ ಅನೇಕರು ಸಂತಸ ವ್ಯಕ್ತಪಡಿಸಿ ಅಭಿನಂದನೆ ತಿಳಿಸಿದ್ದಾರೆ.

### ದೆಹಲಿಯಲ್ಲಿ ನಡೆಯುವ ಗಣರಾಜ್ಯೋತ್ಸವಕ್ಕೆ

# ವಿಶೇಷ ಅತಿಥಿಯಾಗಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಜ.20:ಜಿಲ್ಲೆ ಕೊಪ್ಪಳ ತಾಲೂಕಿನ ಕೋಳೂರು ಗ್ರಾಮ ಪಂಚಾಯತಿಯು ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಜಲಜೀವನ್ ಮಿಷನ್ ಯೋಜನೆಯನ್ನು ಮೇಲಾಧಿಕಾರಿಗಳ ಮಾರ್ಗದರ್ಶನದ ಮೇರೆಗೆ ಸಮರ್ಪಕವಾಗಿ ಅನುಷ್ಠಾನಗೊಳಿಸಿ ಸಾರ್ವಜನಿಕರಿಗೆ ಕುಡಿಯುವ ನೀರನ್ನು 24ಘಿ7 ನಿರಂತರವಾಗಿ ಸರಬರಾಜು ಮಾಡುವ ಕರ್ನಾಟಕ ರಾಜ್ಯದ 3ನೇ ಗ್ರಾಮ ಹಾಗೂ ಕೊಪ್ಪಳ ಜಿಲ್ಲೆಯ ಪ್ರಥಮ ಗ್ರಾಮ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ದಿನಾಂಕ:29.11.2024ರಂದು ಶುಕ್ರವಾರ ದಿವಸ ಗ್ರಾ.ಪಂ. ಅಧ್ಯಕ್ಷರಾದ ಶ್ರೀಮತಿ ಶಿವಮ್ಮ ಜಿ ಪೂಜಾರ್ ಇವರ ಅಧ್ಯಕ್ಷತೆಯಲ್ಲಿ ನಡೆದ "ಕೋಳೂರು ಗ್ರಾಮವು 24ಘಿ7 ನೀರು ಸರಬರಾಜು ಘೋಷಣೆ ಸಮಾರಂಭ" ದಲ್ಲಿ ಕೊಪ್ಪಳ ಲೊಕಸಭಾ ಕ್ಷೇತ್ರದ ಮಾನ್ಯ ಸಂಸದರಾದ ಕೆ.ರಾಜಶೇಖರ್ ಹಿಟ್ನಾಳ್



ರವರು ಹಾಗೂ ಕೊಪ್ಪಳ ಜಿಲ್ಲಾ ಪಂಚಾಯತಿಯ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೇಯ, ಭಾ.ಆ.ಸೇ., ರವರು ವಿದ್ಯುಕ್ತವಾಗಿ ಘೋಷಣೆ ಮಾಡಿದರು. ಕೋಳೂರು ಗ್ರಾಮದ ಸಾರ್ವಜನಿಕರಿಗೆ 24ಘಿ7 ರೀತಿಯಲ್ಲಿ ಸಮರ್ಪಕ ಶುದ್ಧ ಕುಡಿಯುವ ನೀರು ಪೂರೈಕೆ ಮಾಡುತ್ತಿರುವ ಗ್ರಾಮ ಪಂಚಾಯತಿಯ ಈ ವಿಶೇಷ ಸೇವೆಗಾಗಿ ಕೋಳೂರು ಗ್ರಾಮ ಪಂಚಾಯತಿ ಅಧ್ಯಕ್ಷರನ್ನು ಜನೇವರಿ–26, 2025 ರಂದು ನವ ದೆಹಲಿಯಲ್ಲಿ ನಡೆಯುವ ಗಣರಾಜ್ಯೋತ್ಸವಕ್ಕೆ ವಿಶೇಷ ಅಥಿತಿಯಾಗಿ ಆಹ್ವಾನಿಸಿದ್ದು ವಿಶೇಷ. ಈ ರೀತಿ ವಿಶೇಷ ಸೇವೆ ಸಲ್ಲಿಸುತ್ತಿರುವ ದೇಶಾದ್ಯಂತ ಒಟ್ಟು 750 ಸ್ಥಳೀಯ ಆಡಳಿತದ ಪ್ರತಿನಿಧಿಗಳನ್ನು ಆಹ್ವಾನಿಸಿದ್ದು, ಆ ಪೈಕಿ ರಾಜ್ಯದ 12 ಗ್ರಾಮ ಪಂಚಾಯತಿ ಅಧ್ಯಕ್ಷರುಗಳಿಗೆ ಈ ಸುದೈವ ಒದಗಿ ಬಂದಿದ್ದು, ಅದರಲ್ಲಿ ಕೊಪ್ಪಳ ಜಿಲ್ಲೆಯ ಕೊಪ್ಪಳ ತಾಲೂಕಿನ ಕೋಳೂರು ಗ್ರಾಮ ಪಂಚಾಯತಿಯ ಅಧ್ಯಕ್ಷರು ಕೂಡಾ ಒಬ್ಬರಾಗಿದ್ದು ಕೋಳೂರು ಗ್ರಾಮ ಪಂಚಾಯತಿಗೆ ಹೆಮ್ಮೆಯ ವಿಷಯವಾಗಿದೆ ಎಂದು ಕೊಪ್ಪಳ ಜಿಲ್ಲೆಯ ಪ್ರದೇಶ ಕಾಂಗ್ರೆಸ್ ಸಮಿತಿ, ಪ.ಜಾ.ವಿಭಾಗದ ಜಿಲ್ಲಾಧ್ಯಕ್ಷರಾದ ಶ್ರೀ ಗಾಳೆಪ್ಪ ಹೆಚ್ ಪೂಜಾರ್, ಗ್ರಾ.ಪಂ. ಸರ್ವ ಸದಸ್ಯರು, ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ

ಶೇಖರಪ್ಪ.ಕ.ಮಡಿವಾಳರ್, ಕಾರ್ಯದರ್ಶಿ ಮರಿಯಪ್ಪ ಎಂ ಹಾಗೂ ಸಿಬ್ಬಂದಿ ವರ್ಗ ಸಂತಸ ವ್ಯಕ್ತಪಡಿಸಿದ್ದಾರೆ.

# ಕಲ್ಬುರ್ಗಿ ವಿಭಾಗದ ಪ್ರಗತಿ ಪರಿಶೀಲನಾ ಸಭೆ

## ಕಾರ್ಮಿಕ ಇಲಾಖೆಯ ಸೌಲಭ್ಯಗಳನ್ನು ಅರ್ಹರಿಗೆ ಒದಗಿಸಿ: ಸಚಿವ ಸಂತೋಷ ಎಸ್.ಲಾಡ್ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜ.20:ಕಲ್ಬುರ್ಗಿ ವಿಭಾಗದ ಎಲ್ಲ ಜಿಲ್ಲೆಯ ಅರ್ಹ ಫಲಾನುಭವಿಗಳಿಗೆ ಕಾರ್ಮಿಕ ಇಲಾಖೆಯ ಸೌಲಭ್ಯಗಳನ್ನು ಒದಗಿಸಬೇಕು. ಇಲಾಖೆ ಯೋಜನೆಗಳ ಕುರಿತು ಹೆಚ್ಚಿನ ಮಟ್ಟದಲ್ಲಿ ಪ್ರಚಾರ ಕೈಗೊಳ್ಳಬೇಕೆಂದು ಕಾರ್ಮಿಕ ಇಲಾಖೆಯ ಸಚಿವರಾದ ಸಂತೋಷ ಎಸ್. ಲಾಡ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಜನವರಿ 20ರಂದು ನಡೆದ ಕಲ್ಬುರ್ಗಿ ವಿಭಾಗದ ಕಾರ್ಮಿಕ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಲ್ಬುರ್ಗಿ ಭಾಗದ ಎಲ್ಲ ಜಿಲ್ಲೆಗಳಲ್ಲಿ ಇಲಾಖೆಯ ಯೋಜನೆಗಳು ಅಚ್ಚುಕಟ್ಟಾಗಿ ಅನುಷ್ಠಾನವಾಗಬೇಕು. ಏನಾದರು ಸಲಹೆ ಸೂಚನೆಗಳಿದ್ದಲ್ಲಿ ಅದನ್ನು ಲಿಖಿತ ರೂಪದಲ್ಲಿ ತೆಗೆದುಕೊಳ್ಳಬೇಕು. ಎಲ್ಲ ಕಚೇರಿಗಳಲ್ಲಿ ಸಹಾಯವಾಣಿ ಇರಬೇಕು. ಇಲಾಖೆಯ ಯೋಜನೆಗಳ ಕುರಿತು ಪ್ರತಿ ತಿಂಗಳು ಪ್ರಗತಿ ಪರಶೀಲನೆ ನಡೆಸಿ, ಕಚೇರಿಗೆ ವರದಿಯನ್ನು ಕಳಿಸಿಕೊಡಬೇಕು. ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಉತ್ತಮ ರೀತಿಯಲ್ಲಿ ನಿರ್ವಹಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಕಲ್ಬುರ್ಗಿ ವಿಭಾಗದ




ಎಲ್ಲ ಜಿಲ್ಲೆಯ ವಿಧಾನಸಭಾ ಕ್ಷೇತ್ರದ ಶಾಸಕರಿಗೆ ಇಲಾಖೆಯ ಯೋಜನೆಗಳ ಕುರಿತು ಮಾಹಿತಿ ನೀಡಬೇಕು. ಅವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪ್ರತಿಯೊಂದು ತಾಲೂಕಿನಲ್ಲಿ ತಾಲೂಕು ಮಟ್ಟದಲ್ಲಿ ಕಾರ್ಯಾಗಾರವನ್ನು ಕಾಲಕಾಲಕ್ಕೆ ಹಮ್ಮಿಕೊಳ್ಳಬೇಕು. ಇಲಾಖೆಯ ಅಧಿಕಾರಿಗಳು ತಮ್ಮ ವ್ಯಾಪ್ತಿಯೊಗೆ ಇರುವ ಸಂಸ್ಥೆಗಳಲ್ಲಿ ಕನಿಷ್ಠ ವೇತನ ದರಗಳು, ವೇತನ ಪಾವತಿ ದಿನಾಂಕವನ್ನು ಕಡ್ಡಾಯ ಸಂಸ್ಥೆಯ ಸೂಚನಾ ಫಲಕದಲ್ಲಿ ಅಳವಡಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದರು.

ರಾಜ್ಯದಲ್ಲಿ ಈಗಾಗಲೇ ಕಾರ್ಮಿಕರಿಗೆ ಕಾರ್ಡುಗಳನ್ನು ವಿತರಿಸಲಾಗಿದೆ. ಮೂರ್ನಾಲ್ಕು ವರ್ಷಗಳಲ್ಲಿ ಕಾರ್ಮಿಕರ ನೋಂದಣಿ ಹೆಚ್ಚಳವಾಗಿದೆ. ಅನರ್ಹರೂ ಈ ಪಟ್ಟಿಯಲ್ಲಿ ಸೇರಿರಬಹುದಾದ ಆತಂಕವಿದೆ. ಅನರ್ಹರಿಗೆ ಕಾರ್ಡ್ ಕೊಟ್ಟಲ್ಲಿ ಅಧಿಕಾರಿ–ಸಿಬ್ಬಂದಿಯು ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು. ಏನಾದರು ಅಕ್ರಮಗಳು ನಡೆದಲ್ಲಿ ಸಂಬಂಧಿಸಿದ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿಸಲಾಗುವುದು ಎಂದರು. ಎಸ್.ಸಿ ಮತ್ತು ಎಸ್.ಟಿ ಮಾಲೀಕತ್ವದ ಉದ್ಯಮಗಳಿಗೆ ನೆರವು ಎಸ್.ಸಿ ಎಸ್.ಟಿ ಸಮುದಾಯದವರ ಮಾಲೀಕತ್ವದ ಉದ್ದಿಮೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಸಹಾಯಧನ ನೀಡಲಾಗುತ್ತಿದೆ. ಅಲ್ಲದೇ ಅದೇ ಕೈಗಾರಿಕೆಯಲ್ಲಿ ಕಾಯಂ ನೌಕರನಾಗಿ ನೇಮಕಗೊಂಡಿದ್ದಲ್ಲಿ ಅವರ ಕಾರ್ಯನಿರ್ವಹಣಾ ಅವಧಿಯ ಪಿ.ಎಫ್ ಸೇರಿದಂತೆ ಇತರೆ ಸೌಲಭ್ಯಗಳ ಶುಲ್ಕ ಇಲಾಖೆಯಿಂದಲೇ ಭರಿಸಲಾಗುವುದು ಎಂದರು.

ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ನೋಂದಾಯಿತ ಕಾರ್ಮಿಕರಿಗೆ ಕಿಟ್‌ಗಳನ್ನು ಹಾಗೂ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಲ್ಲಿ ಸ್ಮಾರ್ಟ್ ಕಾರ್ಡ್‌ಗಳನ್ನು ವಿತರಿಸುವ ಸಮಯದಲ್ಲಿ ಸ್ಥಳೀಯ ಶಾಸಕರು ಹಾಗೂ ಸಂಸದರನ್ನು ಆಹ್ವಾನಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸಚಿವರು ಸೂಚಿಸಿದರು.

ಕಲ್ಬುರ್ಗಿ ಭಾಗದ ಎಲ್ಲ ಜಿಲ್ಲೆಗಳಲ್ಲಿ ಕಾರ್ಮಿಕ ಇಲಾಖೆಯಿಂದ ಬಾಲ ಕಾರ್ಮಿಕ & ಕಿಶೋರ ಕಾರ್ಮಿಕ ಕಾಯ್ದೆಯಡಿ ಸುಮಾರು 5,327 ತಪಾಸಣೆ ಕೈಗೊಳ್ಳಲಾಗಿದ್ದು, 226 ಬಾಲ ಕಾರ್ಮಿಕ & ಕಿಶೋರ ಕಾರ್ಮಿಕ ಕಾಯ್ದೆ ಪ್ರಕರಣಗಳು ಪತ್ತೆಯಾಗಿವೆ. ಈ ಸಂಬಂಧ ಮೊಕದ್ದಮೆಗಳನ್ನು ಹೂಡಲಾಗಿದೆ. 226 ಬಾಲ ಕಾರ್ಮಿಕ & ಕಿಶೋರ ಕಾರ್ಮಿಕರಿಗೆ ಪುನರ್ವಸತಿ ಕಲ್ಪಿಸಲಾಗಿದೆ ಎಂದರು.

ಸೌಲಭ್ಯ ವಿತರಣೆ: ಈ ವೇಳೆ ಕಾರ್ಮಿಕ ಇಲಾಖೆಯ ವಿವಿಧ ಯೋಜನೆಗಳಲ್ಲಿ ಅರ್ಹ ಫಲಾನುಭವಿಗಳಿಗೆ ಸಚಿವರಿಂದ ಸೌಲಭ್ಯದ ಕಿಟ್ ಮತ್ತು ಚೆಕ್ ಗಳನ್ನು ವಿತರಿಸಲಾಯಿತು.

ಇದೇ ಸಂದರ್ಭದಲ್ಲಿ ಕಾರ್ಮಿಕ ಇಲಾಖೆಯ

ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಮಾನ್ವಿ ವಿಧಾನಸಭೆ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ್, ದೇವದುರ್ಗ

ವಿಧಾನಸಭೆ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ಆಯುಕ್ತರಾದ ಡಾ.ಹೆಚ್.ಎನ್.ಗೋಪಾಲಕೃಷ್ಣ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಕಾರ್ಮಿಕ ಇಲಾಖೆಯ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಕಾರ್ಯದರ್ಶಿಯಾದ ಭಾರತಿ ಡಿ., ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ತುಕಾರಂ ಪಾಂಡ್ವೆ, ಜಿಲ್ಲಾ

ಪೊಲೀಸ್ ವರಿಷ್ಠಾಧಿಕಾರಿಗಳಾದ ಎಂ.ಪುಟ್ಟಮಾದಯ್ಯ ಸೇರಿದಂತೆ ಕಲ್ಬುರ್ಗಿ ವಿಭಾಗದ ಎಲ್ಲ ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಹಾಗೂ ಕಾರ್ಮಿಕ ನಿರೀಕ್ಷಕರು ಸೇರಿದಂತೆ ಇತರರು ಇದ್ದರು.

### ಗರ್ಭಿಣಿಯರ ಬೃಹತ್ ಆರೋಗ್ಯ ತಪಾಸಣಾ ಶಿಬಿರ ನಾಳೆ

ರಾಯಚೂರು ಜ.20 ನಗರದ ತಾಯಿ ಮತ್ತು ಮಕ್ಕಳ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿ ಜನವರಿ 22ರಂದು ಹಮ್ಮಿಕೊಂಡ ಗರ್ಭಿಣಿಯರ ಬೃಹತ್ ಆರೋಗ್ಯ ತಪಾಸಣಾ ಶಿಬಿರಕ್ಕೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್ ಅವರು ಚಾಲನೆ ನೀಡಲಿದ್ದಾರೆ. ಶಿಬಿರದಲ್ಲಿ ಗರ್ಭಿಣಿಯರಿಗೆ ತಜ್ಞವೈದ್ಯರಿಂದ ತಪಾಸಣೆ ಹಾಗೂ ಸಲಹೆ ನೀಡಲಾಗುವುದು. ಅಲ್ಟ್ರಾ ಸೌಂಡ್ ಸ್ಕ್ಯಾನಿಂಗ್, ಇಕೋ ಕಾರ್ಡಿಯೋಗ್ರಫಿ ಪರೀಕ್ಷೆ, ರಕ್ತ ಪರೀಕ್ಷೆ ಹಾಗೂ ಉಚಿತ ಔಷಧಿಗಳನ್ನು ನೀಡಲಾಗುತ್ತಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಗರ್ಭಿಣಿಯರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ಕರ್ನಾಟಕ ಸರ್ಕಾರ

ಪುರಸಭೆ ಕಾರ್ಯಾಲಯ, ಕಂಪ್ಲಿ. ಬಳ್ಳಾರಿ ಜಿಲ್ಲೆ.

Email : ka.kampli.tmc@gmail.com website : www.kamplitown.mrc.gov.in

ಕ್ರ.ಸಂ. ಪು.ಸ.ಕಂ/ಎಸ್.ಬಿ.ಎಂ.1.0&2.0/2024–25 ದಿನಾಂಕ :17.01.2025

ಟೆಂಡರ್ ಪ್ರಕಟಣೆ (ಇ–ಪೋರ್ಟಲ್ ಮೂಲಕ)

ಎಸ್.ಬಿ.ಎಂ. 1.0 ಹಾಗೂ ಎಸ್.ಬಿ.ಎಂ. 2.0 ಯೋಜನೆಯಡಿಯಲ್ಲಿ ಮಂಜೂರಾದ ಸಿವಿಲ್ ಕಾಮಗಾರಿ ಹಾಗೂ ಯಂತ್ರೋಪಕರಣಗಳನ್ನು ಖರೀದಿಸಲು ಈ ಕೆಳಕಂಡ ಇಂಡೆಂಟ್‌ಗಳಿಗೆ ಟೆಂಡರ್ ಕರೆಯಲಾಗಿದ್ದು, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ತಿದ್ದುಪಡಿ ನಿಯಮಗಳು 2001 ರ ಅನ್ವಯ ಕೆ.ಜಿ. –2 & ಕೆ.ಡಬ್ಲ್ಯೂ 1. 2 ರ ಸ್ಟ್ಯಾಂಡರ್ಡ್ ಬಿಡ್ ಟೆಂಡರ್ ಡಾಕ್ಯುಮೆಂಟ್ ನಿಯಮಾವಳಿಗಳಂತೆ ನೋಂದಾಯಿತ ಮತ್ತು ಪರವಾನಿಗೆ ಪಡೆದ ಅರ್ಹ https://kppp.karnataka.gov.in/ ರಲ್ಲಿ ಸಲ್ಲಿಸಬಹುದಾಗಿರುತ್ತದೆ.

ಟೆಂಡರ್‌ಗಳನ್ನು ಸ್ವೀಕರಿಸುವ ಕೊನೆಯ ದಿನಾಂಕ ದಿನಾಂಕ 30.01.2025 ಸಂಜೆ 5.00 ಗಂಟೆವರೆಗೆ

ಟೆಂಡರ್‌ಗಳನ್ನು ತಾಂತ್ರಿಕ ತೆರೆಯುವ ದಿನಾಂಕ ದಿನಾಂಕ 01.02.2025 ಬೆಳಿಗ್ಗೆ 11.00 ಗಂಟೆಗೆ

| Sl No | Indent No | Estimate Cost (in Lakhs) | Cat |
|---|---|---|---|
| 1 | DMA/2024-25/IND4145 | 42.57 | OTHERS |
| 2 | DMA/2024-25/OW/WORK_INDENT34542 | 7.40 | OTHERS |

ಡಿಐಪಿಆರ್/ಬಳ್ಳಾರಿ/821/ಕೆಎಸ್‌ಎಂಸಿಎ/2024–25 ಸಹಿ/– ಮುಖ್ಯಾಧಿಕಾರಿಗಳು, ಪುರಸಭೆ, ಕಂಪ್ಲಿ.


Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330. Editor: Ramesh Reddy, Office Ph. No: +91 9449732000.